ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 152 ಸಂಚಿಕೆ- 152 | PAGE-8 ಪುಟ-8 | ಶನಿವಾರ 26.07.2025 | RS.2/- ಬೆಲೆ 2/-

ಸ್ಕ್ಯಾನ್ ಮಾಡುವ ಮೂಲಕ ಅಜೀವ ಸದಸ್ಯರಾಗಲು ಕೋರಿಕೆ

G Pay

ಜಾಹೀರಾತು ನೀಡಿದವರು ಫೋನ್ ಪೇ ಮಾಡಬಹುದು.

UPI ID:gpay-11231475657@okbizaxis

BHIM UPI

## ನಿಲ್ಲದ ದುರ್ವಾಸನೆ ಪರದಾಡುತ್ತಿರುವ ಸಾರ್ವಜನಿಕರು!



ಮಲ್ಲಮ್ಮನುಡಿ ವಾರ್ತೆ

ಹುಮನಾಬಾದ್:ಜು.25:ಪಟ್ಟಣದಹೊರ ವಲಯದ ಕೆಮಿಕಲ್ ಕಾರ್ಖಾನೆಗಳುಹಳ್ಳಕ್ಕೆ ವೇಸ್ಟೇಜ್‌ರಾಸಾಯನಿಕ ಬೀಡುತ್ತಿರುವುದರಿಂದರಾತ್ರಿ ಹೊತ್ತು ದುರ್ವಾಸನೆ ಬರುತ್ತಿದೆ ಎಂಬ ಆರೋಪ ಕೇಳಿಬರುತ್ತಿದೆ.ಈ ಹಿಂದೆ ಕೇವಲ ಹಳ್ಳಿಗಳಿಗೆ ಮಾತ್ರ ಈ ಸಮಸ್ಯೆ ಇತ್ತು ಈವಾಗ ಹುಮನಾಬಾದ್ ನಗರಕ್ಕೂ ಈ ಸಮಸ್ಯೆ ಬಂದು ತಲುಪಿದೆ. ರಾತ್ರಿ ಅಂದರೆ 11 ರ ಸುಮಾರಿಗೆಮಕ್ಕಳು ದುರ್ವಾಸನೆಯಿಂದ ನರಳುವಪರಿಸ್ಥಿತಿ ನಿರ್ಮಾಣವಾಗಿದೆ. ತಕ್ಷಣ ಈ ಬಗ್ಗೆ ಸಂಬಂಧಿಸಿದವರು ಕ್ರಮ ಕೈಗೊಳ್ಳಬೇಕು ಎಂಬ ಒತ್ತಾಯ ನಾಗರಿಕರದ್ದಾಗಿದ್ದಾಗಿದೆ.

## ನೇರ ಮಾತುಕತೆ ಪರಿಣಾಮ ಕದನ ವಿರಾಮ

ಮಲ್ಲಮ್ಮನುಡಿವಾರ್ತೆನವದೆಹಲಿ:ಜು.25: ಭಾರತ ಮತ್ತು ಪಾಕಿಸ್ತಾನ ಮೇ 10 ರಂದು ಎರಡೂ ರಾಷ್ಟ್ರಗಳ ಮಿಲಿಟರಿ ಕಾರ್ಯಾಚರಣೆಗಳ ಮಹಾನಿರ್ದೇಶಕರ ನಡುವಿನ 'ನೇರ ಮಾತುಕತೆ'ಯ ಪರಿಣಾಮವಾಗಿ ಕದನ ವಿರಾಮಕ್ಕೆ ಒಪ್ಪಿಕೊಂಡವು ಎಂದು ಕೇಂದ್ರ ಸರ್ಕಾರ ಶುಕ್ರವಾರ ಸಂಸತ್ತಿಗೆ ತಿಳಿಸಿದೆ.'ಭಾರತ ಮತ್ತು ಪಾಕಿಸ್ತಾನದ ನಡುವಿನ ಕದನ ವಿರಾಮದಲ್ಲಿ ಅಮೆರಿಕದ ಹಸ್ತಕ್ಷೇಪ ಇರುವುದು ಸತ್ಯವೇ' ಎಂದು ಕೇಳಿದ ಪ್ರಶ್ನೆಗೆ ವಿದೇಶಾಂಗ ಸಚಿವಾಲಯ ಇಂದು ಲಿಖಿತ ಉತ್ತರ ನೀಡಿದೆ.

ಲೋಕಸಭೆಯಲ್ಲಿ ಲಿಖಿತ ಉತ್ತರ ನೀಡಿದ ವಿದೇಶಾಂಗ ವ್ಯವಹಾರಗಳ ಖಾತೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಅವರು, ಪಾಕಿಸ್ತಾನ ಮೊದಲು ಕದನ ವಿರಾಮದ ಬಗ್ಗೆ ಪ್ರಸ್ತಾಪ ಮಾಡಿತು ಎಂದು ಹೇಳಿದ್ದಾರೆ.ಭಾರತ ಮತ್ತು ಪಾಕಿಸ್ತಾನ ಮೇ 10 ರಂದು 'ಎರಡೂ ರಾಷ್ಟ್ರಗಳ ಡಿಜಿಎಂಒಗಳ ನಡುವಿನ ನೇರ ಮಾತುಕತೆಯ ಪರಿಣಾಮವಾಗಿ ಗುಂಡಿನ ದಾಳಿ ಮತ್ತು



ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸಲು ಒಪ್ಪಿಕೊಂಡಿವೆ ಎಂದು ಹೇಳಿದರು.ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದಲ್ಲಿನ ಭಯೋತ್ಪಾದಕರ ನೆಲೆಗಳನ್ನು ನಾಶಮಾಡುವ ವಿಷಯದಲ್ಲಿ ಭಾರತವು 'ಮೇ 08 ರಂದು ಮುಖ್ಯ ಗುರಿ ಸಾಧಿಸಿದೆ' ಎಂದು ಅವರು ತಿಳಿಸಿದ್ದಾರೆ.

ಪಹಲ್ಗಾಮ್ ಭಯೋತ್ಪಾದಕ ದಾಳಿ ನಡೆದ ಏಪ್ರಿಲ್ 22 ರಿಂದ ಮೇ 10 ರ ನಡುವೆ, 'ಅಮೆರಿಕ ಸೇರಿದಂತೆ ವಿವಿಧ ಹಂತಗಳಲ್ಲಿ ವಿವಿಧ ದೇಶಗಳೊಂದಿಗೆ ಹಲವಾರು ರಾಜತಾಂತ್ರಿಕ ಸಂಭಾಷಣೆಗಳು ನಡೆದಿವೆ' ಎಂದು ಸಚಿವರು ತಮ್ಮ ಪ್ರತಿಕ್ರಿಯೆಯಲ್ಲಿ ತಿಳಿಸಿದ್ದಾರೆ.

'ಅಮೆರಿಕಕ್ಕೆ ನಿರ್ದಿಷ್ಟವಾಗಿ ಹೇಳುವುದಾದರೆ, ಪಾಕಿಸ್ತಾನ ದೊಡ್ಡ ದಾಳಿ ನಡೆಸಿದರೆ ಅದಕ್ಕೆ ಭಾರತವು 'ಸೂಕ್ತವಾಗಿ ಪ್ರತಿಕ್ರಿಯಿಸುತ್ತದೆ' ಎಂದು ಮೇ 9 ರಂದು ಅಮೆರಿಕ ಉಪಾಧ್ಯಕ್ಷ ಜೆ ಡಿ ವ್ಯಾನ್ಸ್ ಅವರಿಗೆ ತಿಳಿಸಲಾಯಿತು. ಸಂಘರ್ಷಕ್ಕೆ ಸಂಬಂಧಿಸಿದ ಸಂಭಾಷಣೆಗಳ ಸಂದರ್ಭದಲ್ಲಿ ನಮ್ಮ ವ್ಯಾಪಾರದ ವಿಷಯ ಬಂದಿಲ್ಲ' ಎಂದು ಅವರು ಸ್ಪಷ್ಟಪಡಿಸಿದ್ದಾರೆ.

## ವಿವಿಧ ಕಟ್ಟಡಗಳ ಉದ್ಘಾಟನೆ

### ಇಂದು ಬೀಳಗಿ ಪಟ್ಟಣ ಬ್ಯಾಂಕಿನ ರಜತ ಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.25-ಜಿಲ್ಲೆಯ ಬೀಳಗಿ ಪಟ್ಟಣ ಸಹಕಾರಿ ಬ್ಯಾಂಕಿನ ರಜತ ಮಹೋತ್ಸವ ನಾಳೆ ಜು.26ರಂದು ನಡೆಯಲಿದ್ದು, ಇದೇ ಸಂದರ್ಭದಲ್ಲಿ ಬ್ಯಾಂಕಿನ ನವೀಕೃತ ಕಟ್ಟಡ, ಶಾಖಾ ನೂತನ ಕಟ್ಟಡ, ಎಸ್.ಆರ್.ಪಾಟೀಲ ಶಿಕ್ಷಣ ಪ್ರತಿಷ್ಠಾನದ ವಿವಿಧ ಕಟ್ಟಡಗಳ ಉದ್ಘಾಟನೆ ಮತ್ತು ಶಿಲಾನ್ಯಾಸ ಕಾರ್ಯಕ್ರಮ ಜರುಗಲಿದೆ.

ಎಸ್.ಆರ್.ಪಾಟೀಲ ಶಿಕ್ಷಣ ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷ ಮಾಜಿ ಸಚಿವ ಎಸ್.ಆರ್. ಪಾಟೀಲ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನಾನು ಹುಟ್ಟಿದಾಗಿನಿಂದ 75 ವರ್ಷಗಳವರೆಗೂ ಸಹಸ್ರಾರು ಜನ ಪ್ರೀತಿ ವಿಶ್ವಾಸದಿಂದ ಗೌರವಿಸಿದ್ದೀರಿ. ಇನ್ನು ಮುಂದೆ ಪ್ರತಿ ವರ್ಷ ನನ್ನ ಹುಟ್ಟು ಹಬ್ಬದ ದಿನ ಸಮಾಜಕ್ಕೆ ಏನಾದರೂ ಕೊಡುಗೆ ಕೊಡಬೇಕು ಎನ್ನುವ ಸದುದ್ದೇಶದಿಂದ ಕಳೆದ ವರ್ಷ ನನ್ನ ಹುಟ್ಟು ಹಬ್ಬದ ದಿನ ಎಸ್.ಆರ್. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯವನ್ನು ಸಮಾಜಕ್ಕೆ ಲೋಕಾರ್ಪಣೆ ಮಾಡಿದ್ದೇನೆ ಎಂದರು.

(2ನೇ ಪುಟ ನೋಡಿ)

## ಸಿಎಂ- ಡಿಸಿಎಂ ಭೇಟಿ ಮಾಡಿದ ರಾಜಶೇಖರ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ಜು.25:ಕ್ಷೇತ್ರದ ಮಾಜಿ ಸಚಿವ ರಾಜಶೇಖರ ಪಾಟೀಲ, ಡಾ. ಚಂದ್ರಶೇಖರ ಪಾಟೀಲ, ಭೀಮರಾವ ಪಾಟೀಲ ಇವರು

(2ನೇ ಪುಟ ನೋಡಿ)

## ಎಸ್‌ಎಸ್‌ಎಲ್‌ಸಿ ಫಲಿತಾಂಶ ಹೆಚ್ಚಳಕ್ಕೆ 29 ಅಂಶಗಳ ಕಾರ್ಯಕ್ರಮ ಎಲ್ಲಾ ಶಾಲೆಗಳಲ್ಲಿ ಕಡ್ಡಾಯ



ಮಲ್ಲಮ್ಮ ನುಡಿ ವಾರ್ತೆ ಬೀದರ. ಜು.25 : ಜಿಲ್ಲೆಯಲ್ಲಿ ಎಸ್.ಎಸ್. ಎಲ್.ಸಿ. ಫಲಿತಾಂಶ ಹೆಚ್ಚಿಸಲು ಶಿಕ್ಷಣ ಇಲಾಖೆ ಹೊರಡಿಸಿರುವ 29 ಅಂಶಗಳ ಕಾರ್ಯಕ್ರಮಗಳನ್ನು ಎಲ್ಲಾ ಶಾಲೆಗಳಲ್ಲಿ ಕಡ್ಡಾಯವಾಗಿ ಜಾರಿಗೆ ತರಬೇಕೆಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚಿಸಿದರು.

(2ನೇ ಪುಟ ನೋಡಿ)



## ಒಂದನೇ ಪುಟದಿಂದ

## ಇಂದು ಬೀಳಗಿ ಪಟ್ಟಣ ಬ್ಯಾಂಕಿನ ರಜತ ಮಹೋತ್ಸವ

ಈ ವರ್ಷ ಬೀಳಗಿ ಪಟ್ಟಣ ಸಹಕಾರಿ ಬ್ಯಾಂಕ್‌ನ ನವೀಕೃತ ಕಟ್ಟಡ ಹಾಗೂ ಶಿಕ್ಷಣ ಪ್ರತಿಷ್ಠಾನದ ವಿವಿಧ ಕಟ್ಟಡಗಳನ್ನು ಲೋಕಾರ್ಪಣೆಗೊಳಿಸಲಿದ್ದೇವೆ ಎಂದ ಪಾಟೀಲ, ಡಂಬಳ– ಗದಗದ ತೋಂಟದಾರ್ಯ ಸಂಸ್ಥಾನ ಮಠದ ತೋಂಟದ ಸಿದ್ಧರಾಮ ಸ್ವಾಮೀಜಿ ಸಾನಿಧ್ಯ ವಹಿಸಲಿದ್ದು, ಕವಿ ಸತ್ಯಾನಂದ ಪಾತ್ರೋಟ ಅವರ ಸಂಪಾದಿತ 'ಪರಿಶ್ರಮ' ನೆನಪಿನ ಸಂಚಿಕೆ ಬಿಡುಗಡೆಗೊಳಿಸುವರು.

ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್.ಮುನಿಯಪ್ಪ ಅಧ್ಯಕ್ಷತೆ ವಹಿಸುವರು. ಕೇಂದ್ರದ ರೇಲ್ವೆ ರಾಜ್ಯ ಸಚಿವ ವಿ.ಸೋಮಣ್ಣ ಶಾಂತಾದೇವಿ ಸ್ಮರಣಾರ್ಥ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ನೂತನ ಕಟ್ಟಡ ಉದ್ಘಾಟಿಸುವರು. ಕಾನೂನು ಸಚಿವ ಎಚ್.ಕೆ.ಪಾಟೀಲ ಬ್ಯಾಂಕಿನ ನವೀಕೃತ ಕಟ್ಟಡ ಉದ್ಘಾಟಿಸುವರು. ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಪೂರ್ವ ಪ್ರಾಥಮಿಕದಿಂದ ಸ್ನಾತಕೋತ್ತರ ಪದವಿವರೆಗಿನ ವಿವಿಧ ಕಟ್ಟಡಗಳ ಶಂಕುಸ್ಥಾಪನೆ ನೇರವೆರಿಸುವರು ಎಂದು ತಿಳಿಸಿದರು.

ಕೃಷಿ ಮಾರುಕಟ್ಟೆ ಹಾಗೂ ಸಕ್ಕರೆ ಸಚಿವ ಶಿವಾನಂದ ಪಾಟೀಲ ಎಸ್.ಆರ್. ಪಾಟೀಲ ಬಿ.ಎಸ್.ಸಿ ನರ್ಸಿಂಗ್ ಕಾಲೇಜ ಉದ್ಘಾಟಿಸುವರು. ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಕಾರ್ಯಕ್ರಮ ಉದ್ಘಾಟಿಸುವರು. ಲೋಕಸಭಾ ಸದಸ್ಯ ಪಿ.ಸಿ.ಗದ್ದಿಗೌಡರ ಎಸ್.ಆರ್.ಪಾಟೀಲ ಕಾಲೇಜು ಆಫ್ ಅಲೈಡ್ ಹೆಲ್ತ್ ಸೆನ್ಸ್ ಉದ್ಘಾಟಿಸುವರು.

ವಿವಿಧ ವಿಭಾಗಗಳನ್ನು ಶಾಸಕರಾದ ಜೆ.ಟಿ.ಪಾಟೀಲ, ಎಚ್.ವೈ.ಮೇಟಿ, ಭೀಮಸೇನ ಚಿಮ್ಮನಕಟ್ಟಿ, ವಿಧಾನಪರಿಷತ್ ಸದಸ್ಯರಾದ ಪಿ.ಎಚ್.ಪೂಜಾರ, ಎಚ್.ಆರ್.ನಿರಾಣಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಸ್.ಜಿ.ನಂಜಯ್ಯನಮಠ, ಕೆಪಿಸಿಸಿ ಮಾಜಿ ಕಾರ್ಯದರ್ಶಿ ಬಸವಪ್ರಭು ಸರನಾಡಗೌಡ ಉದ್ಘಾಟನೆ ಮಾಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಎಸ್.ಆರ್.ಪಾಟೀಲ ಶಿಕ್ಷಣ ಪ್ರತಿಷ್ಠಾನದ ನಿಕಟಪೂರ್ವ ಕಾರ್ಯದರ್ಶಿ ಎಸ್.ಎಸ್. ಹಳ್ಳೂರ, ಬೀಳಗಿ ಪಟ್ಟಣ ಸಹಕಾರಿ ಬ್ಯಾಂಕ್ ಪ್ರಧಾನ ವ್ಯವಸ್ಥಾಪಕ ಎಲ್.ಬಿ.ಕುರ್ತಕೋಟಿ, ಪ್ರತಿಷ್ಠಾನದ ಕಾರ್ಯದರ್ಶಿ ಎಂ.ಎನ್.ಪಾಟೀಲ, ಬೀಳಗಿ ಪಟ್ಟಣ ಸಹಕಾರಿ ಬ್ಯಾಂಕಿನ ಉಪಾಧ್ಯಕ್ಷ ಎಸ್.ಆರ್.ಮೇಲ್ನಾಡ, ಪ್ರಧಾನ ವ್ಯವಸ್ಥಾಪಕ ಜಿ.ಎಸ್. ಬನಹಟ್ಟಿ, ನಿರ್ದೇಶಕ ಎಚ್.ಎ.ಕೊಪ್ಪಳ, ಎ.ಎಚ್.ಬೀಳಗಿ, ಸಾಹಿತಿ ಸತ್ಯಾನಂದ ಪಾತ್ರೋಟ ಭಾಗವಹಿಸಲಿದ್ದಾರೆ ಎಂದು ಎಸ್.ಆರ್.ಪಾಟೀಲ ತಿಳಿಸಿದರು.

## ರಾಜಶೇಖರ ಪಾಟೀಲ

ಇರುವ ನಿಯೋಗ ರಾಜ್ಯದ ಮುಖ್ಯ ಮಂತ್ರಿ ಸಿದ್ಧರಾಮಯ್ಯ, ಉಪ ಮುಖ್ಯ ಮಂತ್ರಿ ಡಿಕೆ ಶಿವಕುಮಾರ, ಸೇರಿದಂತೆ ಇತರೆ ರಾಷ್ಟ್ರೀಯ ನಾಯಕರುಗಳಿಗೆ ನವದೆಹಲಿಯಲ್ಲಿ ಭೇಟಿಯಾಗಿ ಜಿಲ್ಲೆಯ ರಾಜಕೀಯ ಬೆಳವಣಿಗೆಗಳ ಕುರಿತು ಚರ್ಚೆ ನಡೆಸಿದರು. ಇವರ ಜೊತೆ ಮಾಜಿ ವಿಧಾನ ಪರಿಷತ್ ಸದಸ್ಯ ಅರವಿಂದಕುಮಾರ ಅರಳಿ, ಮನ್ನಾನ್ ಸೇಠ್, ಶಂಕರರೆಡ್ಡಿ ಚಿಟ್ಟಾ, ಮುರಳಿಧರರಾವ, ಪಂಡಿತ್ ಚಿದ್ರಿ, ಸೇರಿದಂತೆ ಇತರರಿದ್ದರು.

ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷ ಕಾರ್ಯಕರ್ತರ ಸಮಸ್ಯೆಗಳಿಗೆ ಸ್ಪಂಧಿಸಬೇಕು, ಸಾಮಾಜಿಕ ನ್ಯಾಯ ನೀಡಬೇಕು ಎಂದು ಮನವಿ ಮಾಡಿದ್ದಾರೆ ಎಂದು ತಿಳಿದು ಬಂದಿದೆ.

## ಕಾರ್ಯಕ್ರಮ ಎಲ್ಲಾ ಶಾಲೆಗಳಲ್ಲಿ ಕಡ್ಡಾಯ

ಅವರು ಇತ್ತೀಚಿಗೆ ನಗರದ ಸರ್ಕಾರಿ ನೌಕರರ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ 2024–25 ನೇ ಸಾಲಿನ ಪರಖ ರಾಷ್ಟ್ರೀಯ ಸರ್ವೇಕ್ಷಣಾ ಸಮೀಕ್ಷೆ ಹಾಗೂ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಮತ್ತು ಎಸ್.ಎಸ್.ಎಲ್.ಸಿ. ಫಲಿತಾಂಶವನ್ನು ಉತ್ತಮ ಪಡಿಸುವ ನಿಟ್ಟಿನಲ್ಲಿ ಇಲಾಖೆ ಹೊರಡಿಸಿರುವ 29 ಅಂಶಗಳ ಆದೇಶವನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕುರಿತು ಜಿಲ್ಲೆಯ ಎಲ್ಲ ಸರ್ಕಾರಿ, ಅನುದಾನಿತ, ಅನುದಾನ ರಹಿತ, ಕ್ರೈಸ್ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಶಾಲೆಗಳ ಮತ್ತು ಕೇಂದ್ರ ಸರ್ಕಾರದ ನವೋದಯ, ಕೇಂದ್ರೀಯ ವಿದ್ಯಾಲಯಗಳ ಮುಖ್ಯಸ್ಥರೊಂದಿಗೆ ನಡೆಸಿದ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಪ್ರತಿಯೊಂದು ಶಾಲೆಗಳ ಮುಖ್ಯ ಶಿಕ್ಷಕರಿಂದ ತಮ್ಮ ಶಾಲೆಯಲ್ಲಿ ಫಲಿತಾಂಶ ಸುಧಾರಣೆಗಾಗಿ ಕೈಗೊಳ್ಳುತ್ತಿರುವ ಚಟುವಟಿಕೆಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಮತ್ತು ಯಾವ ರೀತಿ ಪಾಠ ಬೋಧಿಸಬೇಕು, ಶಾಲೆಯಲ್ಲಿ ಕೈಗೊಳ್ಳಬಹುದಾದ ನಾವೀನ್ಯಯುತ ಚಟುವಟಿಕೆಗಳ ಬಗ್ಗೆ ಸಮಗ್ರ ಮಾಹಿತಿಯನ್ನು ಜಿಲ್ಲಾಧಿಕಾರಿಗಳು ನೀಡಿದರು. ಪರಖ ರಾಷ್ಟ್ರೀಯ ಸರ್ವೇಕ್ಷಣಾ ಸಮೀಕ್ಷೆಯ ಪ್ರಕಾರ ಜಿಲ್ಲೆಯ ಫಲಿತಾಂಶ ಕಡಿಮೆ ಇರುವ ಅಸಮಧಾನ ವ್ಯಕ್ತ ಪಡಿಸಿದ ಜಿಲ್ಲಾಧಿಕಾರಿಗಳು ಈ ರೀತಿಯ ಫಲಿತಾಂಶ ಮರುಕಳಿಸದಂತೆ ಎಲ್ಲಾ ಶಿಕ್ಷಕರು ಎಚ್ಚರಿಕೆಯಿಂದ ಕೆಲಸ ನಿರ್ವಹಿಸುವಂತೆ ಅಧಿಕಾರಿಗಳಿಗೆ ತಿಳಿಸಿದರು.ಸಭೆಯಲ್ಲಿ ಬಸವಕಲ್ಯಾಣ ಸಹಾಯಕ ಆಯುಕ್ತರಾದ ಮುಕುಲ ಜೈನ್ ಮುಖ್ಯ ಶಿಕ್ಷಕರಿಗೆ ಯಾವ ರೀತಿ ಗಣಿತ ಮತ್ತು ವಿಜ್ಞಾನ ವಿಷಯದ ಪ್ರಶ್ನೆ ಪತ್ರಿಕೆಯ ವಿಶ್ಲೇಷಣೆ ಮಾಡಬೇಕು ಎಂಬುದರ ಕುರಿತು ಹಾಗೂ ಬಹು ಆಯ್ಕೆ ಪ್ರಶ್ನೆಗಳಿಗೆ ಹೇಗೆ ಉತ್ತರಿಸಬೇಕು ಎಂಬುದರ ಕುರಿತು ಸವಿವರ ಮಾಹಿತಿ ನೀಡಿದರು.ಇನ್ನೋರ್ವ ಪ್ರೊಬೆಷನರ್ ಐ.ಎ.ಎಸ್ ಅಧಿಕಾರಿಗಳಾದ ರಮ್ಯಾ ಅವರು ಸಮಾಜ ವಿಷಯದ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಡಯಟ್ ಪ್ರಾಚಾರ್ಯರರು, ಉಪನ್ಯಾಸಕರು, ಡಿ.ವೈ.ಪಿ.ಸಿ. ಗಳು ಸೇರಿದಂತೆ ಇಲಾಖೆಯ ಎಲ್ಲ ಅಧಿಕಾರಿಗಳು ಉಪಸ್ಥಿತರಿದ್ದರು.

## ಅನಧೀಕೃತ 19 ಖಾಸಗಿ ಆಸ್ಪತ್ರೆ, ಸಂಸ್ಥೆಗಳಿಗೆ ದಂಡ

'ರಾಯಚೂರು ಜು 25 : ರಾಯಚೂರ ಜಿಲ್ಲೆಯಲ್ಲಿ ಕೆ.ಪಿ.ಎಂ.ಇ ಕಾಯ್ದೆಯನ್ನು ಉಲ್ಲಂಘನೆಮಾಡಿರುವ ಖಾಸಗಿ ಆಸ್ಪತ್ರೆಗಳಿಗೆ ದಂಡ ವಿಧಿಸಿದ್ದು, ನಿಗದಿತ ಅವಧಿಯೊಳಗೆ ದಂಡ ಭರಿಸದೇ ಇದ್ದ ಪಕ್ಷದಲ್ಲಿ ನಿಯಮಾನುಸಾರ ಕಾನೂನಿನ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ.ಸುರೇಂದ್ರಬಾಬು ಅವರು ಎಚ್ಚರಿಕೆ ನೀಡಿದ್ದಾರೆ.ದೇವದುರ್ಗ ತಾಲೂಕಿನ ನಿಷಾ ಕ್ಲಿನಿಕ್ 50 ಸಾವಿರ ರೂ ದಂಡ. ನ್ಯೂ ಇರ್ಫಾನ್ ಕ್ಲಿನಿಕ್‌ಗೆ 25 ಸಾವಿರ ರೂ. ದಂಡ, ಶ್ರೀ ಬಸವಾ ಇಮೇಜಿಂಗ್ ಸೆಂಟರ್‌ಗೆ 25 ಸಾವಿರ ರೂ ದಂಡ, ಶ್ರೀಬಸವ ಲ್ಯಾಬ್ ಎಕ್ಸರೆ & ಇಸಿಜಿ ಸೆಂಟರ್‌ಗೆ 25 ಸಾವಿರ ರೂ. ದಂಡ, ದೇಸಾಯಿ ಕ್ಲಿನಿಕ್‌ಗೆ 15 ಸಾವಿರ ರೂ ದಂಡ, ಶ್ರೀದೇವಿ ಕ್ಲಿನಿಕ್‌ಗೆ 15 ಸಾವಿರ ರೂ. ದಂಡ, ಎಸ್.ಬಿ.ಆಸ್ಪತ್ರೆಗೆ 15 ಸಾವಿರ ರೂ ದಂಡ, ಬಾಬಾ ಡೈಗ್ನೋಷ್ಟಿಕೆ ಸೆಂಟರ್‌ಗೆ 50 ಸಾವಿರ ರೂ ದಂಡ, ಶ್ರೀಗುರು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗೆ 25 ಸಾವಿರ ರೂ ದಂಡ ವಿಧಿಸಲಾಗಿದೆ.

# ಗಣತಿಯಲ್ಲಿ ಆರ್ಥಿಕ ಸ್ಥಿತಿಗತಿಯನ್ನು ಪ್ರಮುಖ ಮಾನದಂಡವಾಗಿಸಲು ಪ್ರೊ. ದಯಾನಂದ್ ಅಗಸರ್ ಆಗ್ರಹ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.25: ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಿಂದುಳಿದವರ್ಗಗಳಗಣತಿಯನ್ನು ಕೈಗೊಂಡಿದ್ದು, ಅದು ಆರ್ಥಿಕ ಸ್ಥಿತಿಗತಿಯ ಆಧಾರದ ಮೇಲೆ ಆಗಬೇಕು ಎಂದು ಗುಲಬರ್ಗಾ ವಿಶ್ವವಿದ್ಯಾಲಯದ ನಿವೃತ್ತ ಕುಲಪತಿ ಹಾಗೂ ಜನಕಲ್ಯಾಣ ವೇದಿಕೆಯ ಅಧ್ಯಕ್ಷ ಪ್ರೊ.ದಯಾನಂದ್ ಅಗಸರ್ ಅವರು ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿ ಜಾತಿ, ಜನಾಂಗಗಳಲ್ಲಿ ಆರ್ಥಿಕವಾಗಿ ಹಿಂದುಳಿದವರ ಸಬಲೀಕರಣಕ್ಕಾಗಿ ಸದರಿ ಗಣತಿಯ ಸಮೀಕ್ಷೆಯಲ್ಲಿ ಆರ್ಥಿಕಸ್ಥಿತಿಗತಿಯು ಪ್ರಮುಖ ಮಾನದಂಡವಾಗಬೇಕು. ಇದನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಪರಿಗಣಿಸಬೇಕು ಎಂದು ಆಗ್ರಹಿಸಿದರು.

ಜನಗಣತಿ ಮತ್ತು ಜಾತಿಗಣತಿ ಗೊಂದಲದ ನಿವಾರಣೆಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳನ್ನು ಎಚ್ಚರಿಸಲು ಹೊಸದಾಗಿ ಸಂಘ ರಚಿಸಿ, ವಿವಿಧ ಆಯಾಮಗಳಲ್ಲಿ ಚರ್ಚಿಸಿ ಸಮಾಲೋಚನೆ ಮಾಡಿದ್ದೇವೆ. ಜಾತಿ ಜನಗಣತಿ ಬಗ್ಗೆ ಮಾನದಂಡದ ವರ್ಗೀಕರಣ ಮಾಡಬೇಕು ಎಂದು ಒತ್ತಾಯಿಸಲು ವಿವಿಧ ಆಯಾಮಗಳಲ್ಲಿ ಚರ್ಚಿಸಲಾಗುತ್ತಿದೆ ಎಂದು ಅವರು ಹೇಳಿದರು.

ಜನಗಣತಿ ಹಾಗೂ ಜಾತಿ ಗಣತಿ ಶಿಕ್ಷಣ ಉದ್ಯೋಗ, ಆರೋಗ್ಯ, ಉದ್ಯೋಗ ಕೃಷಿ ಇತರ ಕ್ಷೇತ್ರಗಳಲ್ಲಿ ಜಾತಿ ಜನಾಂಗದಲ್ಲಿ ಶೇಕಡಾವಾರು ಸೌಲಭ್ಯ ಹಾಗೂ ಮೀಸಲಾತಿಗಳು ಕೇವಲ ಅಗತ್ಯ ಇರುವ ದುರ್ಬಲರಿಗೆ, ಶೋಷಿತರಿಗೆ ಸಿಗುವಂತಾಗಬೇಕು, ಈವರೆಗೆ ಜಾತಿಯ ಆಧಾರಿತವಾಗಿ ಮೀಸಲಾತಿ ಪಡೆದಿರುವವರೆಲ್ಲರೂ ಸರ್ಕಾರಗಳಿಂದ ಅನುಕೂಲತೆಗಳನ್ನು ಪಡೆಯುತ್ತಿದ್ದಾರೆ. ಹಾಗಾಗಿ ಆರ್ಥಿಕ ಸಂಕಷ್ಟದಲ್ಲಿ ಒಳಗಾಗುತ್ತಿರುವ ಜನರಿಗೆ ಸಿಗಬೇಕಾದ ಸೌಲಭ್ಯಗಳು ಸಿಗುತ್ತಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಜಾತಿ ಜನಾಂಗವಾರು ಸೌಲಭ್ಯ ಮತ್ತು ಮೀಸಲಾತಿ ಪಡೆಯುವವರನ್ನು ಹೊರತುಪಡಿಸಿ, ಉಳಿದ ಎಲ್ಲ ಜಾತಿ, ಜನಾಂಗಗಳಲ್ಲಿ ಒಂದೊತ್ತಿನ ಊಟಕ್ಕೂ ಗತಿಯಿಲ್ಲದಂತೆ ಕಡು ಬಡವರು ಇದ್ದಾರೆ. ಆರ್ಥಿಕವಾಗಿ ಹಿಂದುಳಿದ ಅಂತಹ ಬಡವರನ್ನು ಗುರುತಿಸಿ ಮೀಸಲಾತಿ ನೀಡಬೇಕಾಗಿದೆ ಎಂದು ಅವರು ತಿಳಿಸಿದರು.

ಈ ಸಂಬಂಧ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಗಮನ ಸೆಳೆಯಲು ಮೊದಲು ಮನವಿ ಪತ್ರಗಳನ್ನು ಸಲ್ಲಿಸಲಾಗುವುದು. ಬೇಡಿಕೆಯು ಅತ್ಯಂತ ವಾಸ್ತವಿಕ ಮತ್ತು ಸೂಕ್ತವಾದ ಬೇಡಿಕೆಯಾಗಿರುವುದರಿಂದ ಇದು ಸಂವಿಧಾನದ ಆಶೋತ್ತರಗಳಂತೆ ಜಾರಿಗೊಲಿಸುವಂಥದ್ದು. ಮನವಿಯ ಹಂತದಲ್ಲಿಯೇ ಉಭಯ ಸರ್ಕಾರಗಳು ಜಾರಿಗೊಳಿಸಬೇಕು ಎಂದು ಅವರು ಹೇಳಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳೆರಡೂ ಹಿಂದುಳಿದ ವರ್ಗಗಳವರ ಗಣತಿ ಕಾರ್ಯ ಕೈಗೊಂಡಿದ್ದು, ಈ ಕುರಿತು ಪ್ರಶ್ನಿಸಿದಾಗ, ಎರಡೂ ಗಣತಿಗಳ ಮಾನದಂಡದ ಕುರಿತು ಇನ್ನೂ ನಿರ್ಧಾರವಾಗಿಲ್ಲ. ಏನೇ ಆದರೂ ಆರ್ಥಿಕ ಸ್ಥಿತಿಗತಿಯ ಆಧಾರದ ಮೇಲೆ ಗಣತಿ ಜರುಗಬೇಕು ಎಂದು ಅವರು ಒತ್ತಾಯಿಸಿದರು.

ದೇಶದಲ್ಲಿ 1871ರಲ್ಲಿ ಮೊದಲ ಜನಗಣತಿ ಆಗಿದೆ.

ಸ್ವಾತಂತ್ರ್ಯ ಸಿಕ್ಕ ನಂತರ 1931ರಲ್ಲಿ ಪ್ರಥಮ ಬಾರಿಗೆ ಜಾತಿ ಜನಗಣತಿ ಆಗಿದೆ. ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕ ಸಮೀಕ್ಷೆಯ ಮೂಲಕ ಮೀಸಲಾತಿ ಸೌಲಭ್ಯಗಳನ್ನು ಜನಸಂಖ್ಯೆ ಆಧಾರಿತವಾಗಿ ಜಾರಿಗೊಳಿಸಲು ಜನಗಣತಿ ಅತ್ಯಗತ್ಯವಾಗಿದೆ ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕಲ್ಯಾಣ ಕರ್ನಾಟಕ ಪ್ರತ್ಯೇಕ ರಾಜ್ಯ ಹೋರಾಟ ಸಮಿತಿಯ ಅಧ್ಯಕ್ಷ ಎಂ.ಎಸ್. ಪಾಟೀಲ್ ನರಿಬೋಳ್, ಮಹಾನಗರ ಪಾಲಿಕೆಯ ಮಾಜಿ ಸದಸ್ಯ ಕೈಲಾಶನಾಥ್ ದೀಕ್ಷಿತ್, ಅಶೋಕ್ ಗುರೂಜಿ, ಸುಧೀರ್ ಉಪಾಧ್ಯ, ಶಾದಾಬ ಫಾತಿಮಾ, ಶಿವಶರಣಪ್ಪ ಹಾಲೋಳಿ, ಶ್ರೀಮತಿ ಶಾದಾಬ ಫಾತಿಮಾ, ಮಲ್ಲಣ್ಣ ಮಡಿವಾಳ್ ಮುಂತಾದವರು ಉಪಸ್ಥಿತರಿದ್ದರು.

# ಕೇಸರಿ ಬೆಟ್ಟದಲ್ಲಿ ದ್ವಿತೀಯ ಸಾಂಭ ಶಿವಯೋಗಿಗಳ ಶ್ರಾವಣ ಮಾಸದ ತಪೋನುಷ್ಠಾನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.25: ನಗರದಿಂದ ಹತ್ತು ಕಿ.ಮೀ. ದೂರದಲ್ಲಿರುವ ಜೇವರ್ಗಿ ರಸ್ತೆಯಲ್ಲಿನ ಪ್ರಕೃತಿ ಮಡಿಲು ಕೇಸರಿ ಬೆಟ್ಟದಲ್ಲಿ ಶ್ರಾವಣ ಮಾಸದ ತ್ರಿಕಾ ಇಷ್ಟಲಿಂಗ ಪೂಜಾ ತಪೋನುಷ್ಠಾನವನ್ನು ಉಪಾಚಾರ್ಯರತ್ನ, ಬಾಲತಪಸ್ವಿ ದ್ವಿತೀಯ ಸಾಂಭ ಶಿವಯೋಗಿ ಶಿವಾಚಾರ್ಯರು 31ನೇ ತಪೋನುಷ್ಠಾನವನ್ನು ಜುಲೈ 25ರಿಂದ ಆಗಸ್ಟ್ 24ರವರೆಗೆ ಒಂದು ತಿಂಗಳ ಕಾಲ ಕೈಗೊಳ್ಳುವರು ಎಂದು ಸಾಂಬ ಸೇನಾ ಜಿಲ್ಲಾಧ್ಯಕ್ಷ ಶರಣಗೌಡ ಪಾಟೀಲ್ ನಿಂಬರಗಾ ಅವರು ಹೇಳಿದರು. ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿ ಶ್ರಾವಣ ಸೋಮವಾರಕ್ಕೊಮ್ಮೆ ರಾಜೋಪಚಾರ ಮಹಾಪೂಜೆ ಸಾಮೂಹಿಕವಾಗಿ ಜರುಗುತ್ತದೆ. ಸಮಾರಂಭದಲ್ಲಿ ಕರ್ನಾಟಕ, ಮಹಾರಾಷ್ಟ್ರ, ಆಂಧ್ರ ರಾಜ್ಯಗಳ ಅನೇಕ ಜಿಲ್ಲೆಗಳಿಂದ ಸಹಸ್ರ, ಸಹಸ್ರ ಸಂಖ್ಯೆಯಲ್ಲಿ ಭಕ್ತರು ಬಂದು ಪೂಜೆಯಲ್ಲಿ ಪಾಲ್ಗೊಂಡು ಭಕ್ತಿ ಸೇವೆ ಸಲ್ಲಿಸುವರು ಎಂದರು.

ಅನೇಕ ಗ್ರಾಮದ ಭಕ್ತರು ಪಾದಯಾತ್ರೆಯ ಮೂಲಕ ಆಗಮಿಸುವರು. ಭಜನೆ, ನೃತ್ಯ, ಸಂಗೀತ, ಪ್ರವಚನ ಸೇವೆಗಳು ಸಮಾರಂಭದಲ್ಲಿ ನೆರವೇರಲಿವೆ. ನಿತ್ಯ ತ್ರಿಕಾಲ ಶ್ರೀ ರುದ್ರಪೂಜೆ, ಅನ್ನದಾಸೋಹ, ಅನೇಕ ಕಲಾ ಪ್ರದರ್ಶನಗಳು ಜರುಗಲಿವೆ. ಕೆಲವು ಸಾಹಿತ್ಯ ಪುಸ್ತಕಗಳು ಬಿಡುಗಡೆಗೊಳ್ಳಲಿವೆ. ಕಾರ್ಯಕ್ರಮದಲ್ಲಿ ಅನೇಕ ಮಠಾಧೀಶರು, ಕವಿ, ಸಾಹಿತಿಗಳು, ಸಮಾಜದ ಮುಖಂಡರು, ಧರ್ಮಾಭಿಮಾನಿಗಳು, ರಾಜಕೀಯ ಗಣ್ಯರು ಮತ್ತು ವಿಜ್ಞಾನಿಗಳು ಸಹ ಪಾಲ್ಗೊಳ್ಳುವರು ಎಂದು ಅವರು ಹೇಳಿದರು.

ಭಕ್ತಿಯಿಂದ ಬರುವ ಭಕ್ತರಿಗೆ ಮನಸ್ಸಿನ ಇಷ್ಟ ಸಂಕಲ್ಪಗಳನ್ನು ಈಡೇರಿಸುವಂತಹ ಅದ್ಭುತ ಶಕ್ತಿಯುಳ್ಳ ಶ್ರೀ ತಪೋನಿಧಿ ಸಾಂಭ ಶಿವಯೋಗೇಶ್ವರರ ಕತೃಗದ್ದುಗೆಗೆ ಅನೇಕ ಪೂಜಾ ಕೈಂಕರ್ಯಗಳು ಭಕ್ತರ ಭಕ್ತಿ ಸೇವೆಗಳು ಜಾತಿ, ಬೇಧವಿಲ್ಲದೇ, ಲಿಂಗಬೇಧವಿಲ್ಲದೇ ನೆರವೇರಲಿವೆ. ಎಲ್ಲ ಭಕ್ತರಿಗೆ ಪ್ರಸಾದದ ವ್ಯವಸ್ಥೆ ಇದೆ ಎಂದು ಅವರು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಲ್ಲಿಕಾರ್ಜುನ್ ಸಾಮ್ರಾಟ, ನಿಂಗರಾಜ್ ಯಾಳಗಿ, ವಿಜಯಕುಮಾರ್ ನಂದಿಕೂರ್, ಸಾಗರ್ ಎಂ. ಅಂಗಡಿ, ನಿಂಗರಾಜ್ ಹೇನೆ ಮುಂತಾದವರು ಉಪಸ್ಥಿತರಿದ್ದರು.

# ಅಲ್ಪಸಂಖ್ಯಾತ ವಿದ್ಯಾರ್ಥಿಗಳ ವ್ಯಾಸಂಗಕ್ಕೆ 5.05 ಕೋಟಿ ಅನುದಾನ ಬಿಡುಗಡೆ: ಪ್ರೊ.ಶರಣಪ್ಪ ಹಲಸೆ



ಬೀದರ. ಜು. 25 : ರಾಜ್ಯದ 4 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳ ಶೈಕ್ಷಣಿಕ ಅನುಕುಲಕ್ಕಾಗಿ ಅಲ್ಪಸಂಖ್ಯಾತ ಇಲಾಖೆಯು ನಮ್ಮ ವಿಶ್ವವಿದ್ಯಾಲಯಕ್ಕೆ 5.05 ಕೋಟಿ ಅನುದಾನ ನೀಡಿದ್ದಾರೆ ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಶರಣಪ್ಪ.ವಿ.ಹಲಸೆ ಹೇಳಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಟಿ ಉದ್ದೇಸಿಸಿ ಮಾತನಾಡಿರುವ ಅವರು, ರಾಜ್ಯದ 17 ವಿಶ್ವವಿದ್ಯಾಲಯಗಳ ಪೈಕಿ ಕ.ರಾ.ಮು.ವಿ 79 ಭಾಷೆಗಳಲ್ಲಿ ಶಿಕ್ಷಣ ನೀಡುತ್ತಿರುವುದು ಹೆಮ್ಮೆಯ ವಿಷಯ. ನಮ್ಮ ವಿಶ್ವವಿದ್ಯಾಲಯದಲ್ಲಿ ಓದಿದ ಓರ್ವ ವಿದ್ಯಾರ್ಥಿ ಪಶ್ಚಿಮ ಬಂಗಾಳದಲ್ಲಿ ಕಳೆದ ಎಂಟು ವರ್ಷಗಳ ಹಿಂದೆ ಜಿಲ್ಲಾಧಿಕಾರಿ ಆಗಿದ್ದಾರೆ. ಹಾಗೆ ಮಧ್ಯ ಪ್ರದೇಶದಲ್ಲಿ ಸಹಾಯಕ ಆಯುಕ್ತರಾಗಿ ಈಗ ಹೆಚ್ಚುವರಿ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸುತ್ತಿರುವವರು ನಮ್ಮ ವಿಶ್ವವಿದ್ಯಾಲಯದ ವಿದ್ಯಾರ್ಥಿ ಎಂದು ಹೇಳಿಕೊಳ್ಳಲು ಹೆಮ್ಮೆ ಅನಿಸುತ್ತದೆ ಎಂದರು.

ವಿಶ್ವವಿದ್ಯಾಲಯದ ಬೆಳವಣಿಗೆ ಮೇಲೆ ಬೆಳಕು ಚೆಲ್ಲಿದ ಕುಲಪತಿಗಳು, ಈ ವಿಶ್ವವಿದ್ಯಾಲಯವು ಮೈಸೂರಿನ ಮುಕ್ತ ಗಂಗೋತ್ರಿಯಲ್ಲಿ ಸ್ಥಾಪಿಸಲಾಗಿದ್ದು, ಸುಸಜ್ಜಿತ ಆಡಳಿತ ಭವನ, ಪರೀಕ್ಷಾ ಭವನ, ವಿಜ್ಞಾನ ಭವನ, ಗ್ರಂಥಾಲಯ, ಪ್ರಯೋಗಾಲಯ, ಭಾಷಾ ಪ್ರಯೋಗಾಲಯ, ಕ್ಯಾಂಟೀನ್, ತರಗತಿ ಕೊಠಡಿಗಳನ್ನು ಹೊಂದಿರುತ್ತದೆ ಎಂದರು.

"ಉನ್ನತ ಶಿಕ್ಷಣ ಎಲ್ಲರಿಗೂ ಎಲ್ಲೆಡೆ" ಎಂಬ ಧ್ಯೇಯ ವಾಕ್ಯದೊಂದಿಗೆ ದೂರ ಶಿಕ್ಷಣ ನೀಡುವ ರಾಜ್ಯದ ಏಕೈಕ ವಿಶ್ವವಿದ್ಯಾನಿಲಯವಾಗಿದೆ. ರಾಜ್ಯದಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ರಾಜ್ಯಾದ್ಯಂತ 38 ಪ್ರಾದೇಶಿಕ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಶೈಕ್ಷಣಿಕ ವರ್ಷ 2025–26ನೇ ಸಾಲಿನ ಜುಲೈ ಆವೃತ್ತಿಗೆ ದಿನಾಂಕ: 01–07–2025 ರಿಂದ ಪ್ರವೇಶಾತಿಯು ಪ್ರಾರಂಭಗೊಂಡಿವೆ. 10 ಬಿ.ಇಡ್ ಕಲಿಕಾರ್ಥಿ ಸಹಾಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಮುಂಬರುವ ದಿನಗಳಲ್ಲಿ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕ.ರಾ.ಮು.ವಿಯ ಕಲಿಕಾರ್ಥಿ ಸಹಾಯ ಕೇಂದ್ರವನ್ನು ಸ್ಥಾಪಿಸಲು ಪ್ರಯತ್ನಿಸಲಾಗುತ್ತಿದೆ ಎಂದು ತಿಳಿಸಿದರು.

ಮನೆ ಬಾಗಿಲಿಗೆ ಉನ್ನತ ಶಿಕ್ಷಣ ನೀಡುತ್ತಾ ವಿದ್ಯಾರ್ಥಿ ಸ್ನೇಹಿ ವಿಶ್ವವಿದ್ಯಾನಿಲಯವಾಗಿದೆ. ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಾದ KSET, NET, UPSC, KPSC, SSC, Banking ಪರೀಕ್ಷೆಗಳಿಗೆ ಶುಲ್ಕವಿಲ್ಲದೆ ತರಬೇತಿ ನೀಡಲಾಗುತ್ತಿದೆ. ದ್ವಿಪದವಿ (Dual Degree) ಪಡೆಯಲು ಅವಕಾಶವಿರುತ್ತದೆ. ವಿದ್ಯಾರ್ಥಿಗಳ ಭವಿಷ್ಯವನ್ನು ಉದ್ದೇಶದಲ್ಲಿಟ್ಟುಕೊಂಡು Placement Cell ಅನ್ನು ಸ್ಥಾಪಿಸಲಾಗಿದೆ.

ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ S.C/S.T, OBC ಮತ್ತು ಅಲ್ಪಸಂಖ್ಯಾತರ Cell ಅನ್ನು ಸ್ಥಾಪಿಸಲಾಗಿದ್ದು, ವಿದ್ಯಾರ್ಥಿ ವೇತನ ಸೌಲಭ್ಯವಿರುತ್ತದೆ. ವಿದ್ಯಾರ್ಥಿಗಳಿಗೆ ಓದಿಕೊಳ್ಳಲು ಸ್ವಯಂಬೋಧನಾ ಸಾಮಗ್ರಿಗಳನ್ನು (SLM) ಒದಗಿಸಲಾಗುತ್ತದೆ. U.GPÉÆÃ¸ÀÎð¼ÁzÀ BA, B.Com, BBA, BCA, B.Sc, B.S.W. B.LIB.I.Sc 5 P.G ? MA, M.Com, M.Sc, M.B.A, M.Lib.I.Sc2 M.S.W70ODL (Open and Distance Learning) ಮತ್ತು 10 ಆನ್‌ಲೈನ್ ಕೋರ್ಸ್ಗಳಿರುತ್ತದೆ. ಬರುವ ವರ್ಷಗಳಲ್ಲಿ ಪ್ರವಾಸೋಧ್ಯಮ, ಭೂ ವಿಜ್ಞಾನ ಹಾಗೂ Job Oriented ಕೋರ್ಸ್ಗಳನ್ನು ತೆರೆಯಲು ಕ್ರಮವಹಿಸಲಾಗುತ್ತಿದೆ. ವಿ.ವಿಯು U.G.C ಮಾನ್ಯತೆ ಹಾಗೂ NAACA+ ಗ್ರೇಡ್ ಹೊಂದಿರುತ್ತದೆ. ಕಾರಣಾಂತರಗಳಿಂದ ವಿದ್ಯಾಭ್ಯಾಸ ಮೊಟಕುಗೊಂಡಿರುವ ವಿದ್ಯಾರ್ಥಿಗಳಿಗೆ ನಮ್ಮಲ್ಲಿ Lateral Entry Admission ಸೌಲಭ್ಯವಿರುತ್ತದೆ. ಹೊಸದಾಗಿ CBCS (Choice Based Credit) Scheme ಅನ್ನು ಅಳವಡಿಸಿಕೊಳ್ಳಲಾಗಿರುತ್ತದೆ ಎಂದರು.

ವಿ.ವಿ ನಿಲಯವು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ KSOU Academic Platform App. ಸೌಲಭ್ಯವನ್ನು ಒದಗಿಸಿರುತ್ತದೆ. 'ದೃಶ್ಯವಾಹಿನಿ YouTube Channel' ಹೊಂದಿದ್ದು ಅದರಲ್ಲಿ ತರಗತಿಗಳ ಪಾಠಗಳನ್ನು Upload ಮಾಡಲಾಗುತ್ತದೆ. ವಿದ್ಯಾರ್ಥಿಗಳಿಗೆ ಶೀಘ್ರ ಫಲಿತಾಂಶ ಪ್ರಕಟಣೆಗೆ ಅನುಕೂಲವಾಗುವಂತೆ ಮೌಲ್ಯಮಾಪನವನ್ನು ಡಿಜಿಟಲೀಕರಣ ಮಾಡಲಾಗಿದೆ.

ಬಿಪಿಎಲ್ ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿಗಳಿಗೆ ಶೇ.10% ಭೋಧನಾ ಶುಲ್ಕ ವಿನಾಯಿತಿ ಇರುತ್ತದೆ, ಹಾಲಿ ಮತ್ತು ಮಾಜಿ ಸೈನಿಕ ವಿದ್ಯಾರ್ಥಿಗಳಿಗೆ ಶೇ.10% ಭೋಧನಾ ಶುಲ್ಕ ವಿನಾಯಿತಿ ಇರುತ್ತದೆ, ಆಟೊ ಚಾಲಕರಿಗೆ ಹಾಗೂ ಅವರ ಕುಟುಂಬದವರಿಗೆ ಶೇ.10% ಭೋದನಾ ಶುಲ್ಕ ವಿನಾಯಿತಿ ಇರುತ್ತದೆ, KSRTC/ BMTC/NWKSRTC/ KKRTC ನೌಕರರುಗಳಿಗೆ ಶೇ.10% ಭೋದನಾ ಶುಲ್ಕ ವಿನಾಯಿತಿ ಇರುತ್ತದೆ. ತೃತೀಯ ಲಿಂಗಿ (Transgender) ವಿದ್ಯಾರ್ಥಿಗಳಿಗೆ. ದೃಷ್ಟಿಹೀನ ವಿದ್ಯಾರ್ಥಿಗಳಿಗೆ (B.Ed / BA ಹೊರತುಪಡಿಸಿ) ಕೋವಿಡ್–19 ಸಾಂಕ್ರಾಮಿಕ ರೋಗದಿಂದ ಮೃತರಾದ ತಂದೆ/ತಾಯಿಯ ಮಕ್ಕಳಿಗೆ. ಅಲ್ಪಸಂಖ್ಯಾತ (ಮುಸ್ಲಿಂ, ಕ್ರೈಸ್ತ, ಜೈನ, ಬೌದ್ಧ, ಸಿಖ್ ಹಾಗೂ ಪಾರ್ಸಿ) ಸಮುದಾಯದ ವಿದ್ಯಾರ್ಥಿಗಳು ಸರ್ಕಾರದ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ವತಿಯಿಂದ ಶುಲ್ಕ ಪಾವತಿ ಯೋಜನೆಯಡಿ ಉಚಿತವಾಗಿ ಪ್ರವೇಶಾತಿ ಪಡೆಯಬಹುದು ಎಂದರು. ಮೇಲ್ಕಂಡ ಅಂತರ್ಜಾಲದಲ್ಲಿರುವ ಅಡ್ಮಿಷನ್, ಪೋರ್ಟಲ್ https://ksouportal.com/views/studenthome.aspx ನಿಗದಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆ ಅನುಸಾರ ದಾಖಲಾತಿಗಳೊಂದಿಗೆ ಪ್ರಾದೇಶಿಕ ಕೇಂದ್ರ ಬೀದರದಲ್ಲಿ ಸಲ್ಲಿಸಿ ಪ್ರವೇಶಾತಿ ಪಡೆಯಬಹುದು.

ಯುಜಿಸಿ ನಿಯಮಾವಳಿ ಪ್ರಕಾರ ಎರಡು ಶೈಕ್ಷಣಿಕ ಕಾರ್ಯಕ್ರಮಗಳನ್ನು ಏಕಕಾಲದಲ್ಲಿ ಅಧ್ಯಯನ ಮಾಡಲು ಅವಕಾಶವಿರುತ್ತದೆ. ಒಂದು ಭೌತಿಕ (Regular) ಕ್ರಮದಲ್ಲಿ, ಮತ್ತೊಂದು ದೂರ ಶಿಕ್ಷಣ (ODL) ಕ್ರಮದಲ್ಲಿ UG/PG ಪದವಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: ಪ್ರಾದೇಶಿಕ ನಿರ್ದೇಶಕರು ನಾಗೇಶ ಎಂ., ಮೊ. ಸಂ. 9986696487 ವಿಳಾಸ : ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಪ್ರಾದೇಶಿಕ ಕೇಂದ್ರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ನೌಬಾದ, ಬೀದರ–585404. E-mail-id: rdksoubidar@gmail.com ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರೊ.ಹಲಸೆ ವಿವರಿಸಿದರು. ಕರಾಮುವಿ ಪ್ರಾದೇಶಿಕ ಕೇಂದ್ರದ ನಿರ್ದೇಶಕ ನಾಗೇಶ.ಎಮ್, ಕಲಬುರಗಿ ಪ್ರಾದೇಶಿಕ ಕೇಂದ್ರದ ನಿರ್ದೇಶಕ ಡಾ.ಸಂಗಮೇಶ ಹಿರೇಮಠ, ಯಾದಗಿರಿ ಪ್ರಾದೇಶಿಕ ಕೇಂದ್ರದ ನಿರ್ದೇಶಕ ಹಣಮಂತ.ಆರ್ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಜೀವಜಾಲಗಳ ಅಧ್ಯಯನಕ್ಕೆ ಮಹತ್ವವಿರಲಿ : ಅದ್ವೈತಾನಂದ ಸ್ವಾಮಿಜಿ



(ವರದಿ. ಡಿ. ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: –ನಿಸರ್ಗವೇ ನಿಜವಾದ ದೇವರು. ಹಲವು ಜೀವ ಜಂತುಗಳು ಭೂಮಿ, ಗಾಳಿ, ನೀರು ಸೇರಿ ಇಡೀ ಪಂಚಭೂತಗಳಲ್ಲಿ ಉಳಿದಿವೆ. ಪಂಚಭೂತಗಳನ್ನು ರಕ್ಷಿಸುವ ಜವಾಬ್ದಾರಿ ಎಲ್ಲರದ್ದು ಎಂದು ವಿಜಯಪುರಜ್ಞಾನಯೋಗಾಶ್ರಮದ ಅದ್ವೈತಾನಂದಮಹಾಸ್ವಾಮಿಗಳು ಹೇಳಿದರು.

ನಗರದ ಶ್ರೀ ಬಸವೇಶ್ವರ ಪದವಿ ಕಾಲೇಜು ಜೀವ ವಿಜ್ಞಾನ ವಿಭಾಗದ ವತಿಯಿಂದ ಅನುಭವ ಮಂಟಪದಲ್ಲಿ ಹಮ್ಮಿಕೊಂಡಿದ್ದ ಸಸ್ಯ ಮತ್ತು ಸೂಕ್ಷ್ಮ ಜೀವಿಗಳ ಅಧ್ಯಯನಕಾರ್ಯಾಗಾರದಸಾನಿಧ್ಯ ವಹಿಸಿ ಮಾತನಾಡಿದ ಅವರು, ವಿಜ್ಞಾನ ಹೊರ ಜಗತ್ತಿನ ಬಗ್ಗೆ ತಿಳಿಸಿದರೆ ಆಧ್ಯಾತ್ಮ ಅಂತರಂಗದ ಬಗೆಗೆ ತಿಳಿಸುತ್ತದೆ ಎಂದರು.

ಹುಲಸೂರತೋಟಗಾರಿಕೆಇಲಾಖೆ ಅಧಿಕಾರಿ ಅಶ್ವಿನಿ ಯದಲಗುಂಡಿ ಮಾತನಾಡಿ, ಜನರಲ್ಲಿ ಆಹಾರ ಪ್ರಜ್ಞೆ ಬೆಳೆದಂತೆ ಸಾವಯವ ಕೃಷಿ ಹೆಚ್ಚಾಗಿದೆ. ಸಾವಯವ ಸಲಕರಣೆಗಳಿಗೆ ಮಾರುಕಟ್ಟೆಯ ಗುಣ ಬಂದಿದೆ. ಬಹು ವಾರ್ಷಿಕ ಬೆಳೆ ತೋಟಗಾರಿಕೆಯಲ್ಲಿ ಪಡೆಯಬಹುದು. ಗಿಡ, ಮರ, ಹೆಣ್ಣು, ಔಷಧೀಯ ಗಿಡಗಳು, ಎಲ್ಲದರ ಸಮಗ್ರ ಅಧ್ಯಯನ ವಿದ್ಯಾರ್ಥಿಗಳಿಗೆ ಅನುಕೂಲ ಎಂದರು.

ಪ್ರತಿಯೊಬ್ಬರು ಪರಿಸರ ವ್ಯವಸ್ಥೆ ಕುರಿತು ಗಂಭೀರವಾಗಿ ಅರಿಯಬೇಕಾಗಿದೆ.

ಜೇನು ಹುಳು ನಾಶವಾದರೆ ನಿಸರ್ಗದ ಚಲನೆಯ ನಿಂತು ಹೋಗುತ್ತದೆ. ಜೇನು ಹುಳುಗಳು ನಿಸರ್ಗದ ವಿಸ್ಮಯ. ಔಷಧಿ ಗುಣವಿರುವ ಮಶ್ರೂಮ್ ಹೆಚ್ಚು ಬೆಲೆಬಾಳುವ ಆಹಾರವಾಗಿ ಬಳಸುತ್ತಾರೆ ಎಂದರು.

ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ಆಧುನಿಕತಂತ್ರಜ್ಞಾನದ ಬಳಕೆ ಹೆಚ್ಚಾದಂತೆ ಹಾಗೂ ಆಧುನಿಕತೆಯಿಂದಾಗಿ ನಿಸರ್ಗದಿಂದ ವಿಮುಖರಾಗುತ್ತಿದ್ದೇವೆ. ಪರಿಸರದಿಂದ ಕಲಿಯಬೇಕಾದಹಲವುಪಾಠಗಳಿಂದ ವಂಚಿತರಾಗುತ್ತಿದ್ದೇವೆ. ಪರಿಸರದ ಕುರಿತಾದ ಆಸಕ್ತಿ, ಕುತೂಹಲ ಕಡಿಮೆಯಾಗಿವೆ. ಮನುಷ್ಯ ಪಕೃತಿಯೊಂದಿಗಿನ ಸಾವಯವ ಸಂಬಂಧ ಕಡಿದುಕೊಂಡು ಅನಾಥ ಪ್ರಜ್ಞೆ ಅನುಭವಿಸುತ್ತಿದ್ದಾನೆ ಎಂದರು.

ಮಣ್ಣಿನ ಸತ್ವ, ಸಸ್ಯ ಸಂಸ್ಕೃತಿ ಮತ್ತು ಜೀವ ಸಂಕುಲ ಒಂದಕ್ಕೊಂದು ಗಾಢವಾದ ಸಂಬಂಧವನ್ನು ಹೊಂದಿವೆ. ಒಂದನ್ನು ಬಿಟ್ಟು ಇನ್ನೊಂದಿಲ್ಲ. ಪರಿಸರವಾದಿ ಚಿಂತನೆ ಕುರಿತೇ ಕನ್ನಡ ಸಾಹಿತ್ಯದಲ್ಲಿ ಒಂದು ಪರಂಪರೆಯಿದೆ. ಪಂಪ, ಕುವೆಂಪು, ಬಿಜಿಎಲ್ ಸ್ವಾಮಿ, ಪೂರ್ಣಚಂದ್ರತೇಜಸ್ವಿ, ನಾಗೇಶ್ ಹೆಗಡೆ, ಮಾಧವ ಗಾಡ್ಗಿಳ್ ಮೊದಲಾದವರ ಬರಹಗಳು ಪರಿಸರಕೇಂದ್ರಿತವಾಗಿವೆ ಎಂದರು.

ನೇತ್ರತ್ವ ವಹಿಸಿದ ಅನುಭವ ಮಂಟಪ ಸಂಚಾಲಕರಾದ ಶಿವಾನಂದ ಮಹಾಸ್ವಾಮಿಗಳು ಮಾತನಾಡಿ, ಹಲವು ಶರಣೆಯರು ತಮ್ಮ ವಚನಗಳಲ್ಲಿ ಪರಿಸರ ಪ್ರಜ್ಞೆಯಿಂದ ಬರೆದಿದ್ದಾರೆ . ಶರಣರ ಬಹುಪಾಲು ವಚನಗಳಲ್ಲಿ ಪರಿಸರ ಚಿಂತನೆ ಅಡಕವಾಗಿದೆ ಎಂದರು.

ಬಿಡಿಪಿಸಿ ಅಧ್ಯಕ್ಷರಾದ ಬಸವರಾಜ ಕೋರಕೆ ಅಧ್ಯಕ್ಷತೆ ವಹಿಸಿದ್ದರು. ಕಾರ್ಯದರ್ಶಿ ವಿವೇಕಾನಂದ ಹೊದಲೂರೆ, ಸಂಚಾರಿ ಪೊಲೀಸ್ ಠಾಣೆ ಪಿಎಸ್ಐ ಸುಜಾತಾ, ಉಪನ್ಯಾಸಕರಾದ ಶ್ರೀನಿವಾಸ ಉಮಾಪುರೆ, ನಾಗವೇಣಿ ವಟಗೆ, ಎಂಡಿ ಜಬಿ , ಗುರುದೇವಿ ಕಿಚಡೆ, ಸಚಿನ್ ಬಿಡವೆ, ಅಶೋಕ ಕುಂಬಾರ, ಗಂಗಾಧರ ಬಿರಾದಾರ, ಸಚಿನ್ ಕವಟೆ , ಶಂಕರ ಕವಟೆ , ಅಮರಪಾಲ, ಸಂಜುಕುಮಾರ್ ಪಟ್ನೆ ಮೊದಲಾದವರು ಇದ್ದರು. ಬಿಎಸ್ಸಿ ವಿದ್ಯಾರ್ಥಿಗಳಿಂದ ಅನುಭವ ಮಂಟಪ ಪರಿಸರದ ಹಾಗೂ ತ್ರಿಪುರಾಂತ ಕೆರೆ ಸುತ್ತಲಿನ ಗಿಡ ಮರ ಮತ್ತು ಜೀವಜಾಲದ ಕುರಿತು ವಿಶೇಷ ಅಧ್ಯಯನ, ಕ್ಷೇತ್ರಕಾರ್ಯ ಮಾಡಲಾಯಿತು. ಕಾರ್ಯಾಗಾರದ ಸಂಯೋಜಕ ಅಶೋಕರೆಡ್ಡಿಗದಲೇಗಾಂವ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು. ಸ್ನೇಹಾ ರಾಜಪೂತ್ ಮತ್ತು ಶಾಂಭವಿ ಸಾಲಿಮಠ ನಿರೂಪಿಸಿದರು.

ಆರತಿ ವೆಂಕಟರೆಡ್ಡಿ ವಂದಿಸಿದರು.

# ಕೈಗಾರಿಕೋದ್ಯಮಿಗಳಿಗಾಗಿ ರಾಯಚೂರಲ್ಲಿ ಜುಲೈ 30ಕ್ಕೆ ವಿಶೇಷ ಕಾರ್ಯಕ್ರಮ: ಕಾಶಿಯಾ ಅಧ್ಯಕ್ಷ ಬಿ.ಆರ್.ಗಣೇಶ್ ರಾವ್

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 25– ಲೀನ್ ಯೋಜನೆ ಮತ್ತು ಝಡ್ಇಡಿ ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಕಾರ್ಯಕ್ರಮವನ್ನು ರಾಯಚೂರು ಜಿಲ್ಲೆಯ ಕೈಗಾರಿಕೋದ್ಯಮಿಗಳಲ್ಲಿ ಅರಿವು ಮೂಡಿಸುವ ಸಲುವಾಗಿ ಜುಲೈ 30ರಂದು ಬೆಳಗ್ಗೆ 10 ಗಂಟೆಗೆ ಸ್ಟೇಷನ್ ರಸ್ತೆಯ ಅಜಾದ್ ನಗರದಲ್ಲಿ ಹೋಟೆಲ್ ರಂಜಿತಾ ಪ್ಯಾಲೆಸ್‌ನಲ್ಲಿ ಆಯೋಜಿಸಲಾಗಿದೆ.

ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಮತ್ತು ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ ಹಾಗೂ ಕರ್ನಾಟಕ ವೈದ್ಯಕೀಯ ಸಣ್ಣ ಕೈಗಾರಿಕೆಗಳ ಸಂಘದ ಸಹಯೋಗದಲ್ಲಿ ಈ ಕಾರ್ಯಕ್ರಮ ನಡೆಯಲಿದೆ ಎಂದು ಕರ್ನಾಟಕ ವೈದ್ಯಕೀಯ ಸಣ್ಣ ಕೈಗಾರಿಕೆಗಳ ಸಂಘ (ಕಾಶಿಯಾ) ದ ಅಧ್ಯಕ್ಷರಾದ ಬಿ.ಆರ್.ಗಣೇಶ್ ರಾವ್ ತಿಳಿಸಿದ್ದಾರೆ.

ಈ ಕಾರ್ಯಕ್ರಮಕ್ಕೆ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಕಾಶಿಯಾ ವಿಶೇಷವಾದ ವ್ಯವಸ್ಥೆ ಮಾಡುತ್ತಿದೆ. 75 ವರ್ಷಗಳ ಇತಿಹಾಸ ಹೊಂದಿರುವ ಕಾಶಿಯಾ ಸಂಸ್ಥೆಯು ಸಣ್ಣ ಕೈಗಾರಿಕೆಗಳ ಏಳಿಗೆ ಮತ್ತು ಶ್ರೇಯೋಭಿವೃದ್ಧಿಯ ಉದ್ದೇಶದೊಂದಿಗೆ ಕೆಲಸ ಮಾಡುತ್ತಿದೆ. ರಾಜ್ಯ ಮತ್ತು ದೇಶದ ಸಣ್ಣ ಕೈಗಾರಿಕೆಗಳ ಹಿತಾಶಕ್ತಿಯನ್ನು ಪ್ರತಿನಿಧಿಸುವ ರಾಜ್ಯವ್ಯಾಪ್ತಿ ಹೊಂದಿರುವ ಏಕೈಕ ಸಂಸ್ಥೆಯಾಗಿದೆ. ರಾಜ್ಯಾದ್ಯಂತ ಇರುವ ಸಣ್ಣ ಕೈಗಾರಿಕೆಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರೋಪಾಯಗಳನ್ನು ಕೈಗೊಳ್ಳುವಲ್ಲಿ ಕಾಸಿಯಾವು ಯಶಸ್ವಿಯಾಗಿ ಸೇವೆ ಸಲ್ಲಿಸುತ್ತಾ ಬಂದಿದೆ. ಹಾಗೂ ಸರ್ಕಾರದ ವಿವಿಧ ಯೋಜನೆಗಳು ಮತ್ತು ನೀತಿ ಕುರಿತಂತೆ ಕೈಗಾರಿಕೋದ್ಯಮಿಗಳಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದು, ಲೀನ್ ಯೋಜನೆ ಮತ್ತು ಝಡ್ಇಡಿ ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಕಾರ್ಯಕ್ರಮಕ್ಕೆ ಇದೀಗ ರಾಯಚೂರ ಜಿಲ್ಲೆಯನ್ನು ಆಯ್ಕೆ ಮಾಡಿದೆ.

ಎಂಎಸ್ಎಂಇಗಳ ಕಾರ್ಯಕ್ಷಮತೆ ಹೆಚ್ಚಿಸುವುದು ಮತ್ತು ವೇಗಗೊಳಿಸುವುದು, ರ‍್ಯಾಂಪ್ ಯೋಜನೆಯಡಿ, 2025–26ನೇ ಸಾಲಿನಲ್ಲಿ ರಫ್ತು, ಲೀನ್ ಯೋಜನೆ ಮತ್ತು ಝಡ್ ಪ್ರಮಾಣೀಕರಣ ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಈಗಾಗಲೇ ರಾಜ್ಯದ 16 ಜಿಲ್ಲೆಗಳಲ್ಲಿ ಕಾಸಿಯಾ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕರ್ನಾಟಕ ಸರ್ಕಾರ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಸ್ಥಳೀಯ ಕೈಗಾರಿಕಾ ಸಂಘಗಳ ಸಹಯೋಗದಲ್ಲಿ ಆಯೋಜಿಸಲಾಗಿದೆ.

ಭಾರತ ಸರ್ಕಾರದ ವಾಣಿಜ್ಯ ಇಲಾಖೆಯ ಡಿಸ್ಟ್ರಿಕ್ಟ್ಸ್ ಆಸ್ ಎಕ್ಸ್ಪೋರ್ಟ್ ಹಬ್ಸ್ ಉಪಕ್ರಮವು ತಳಮಟ್ಟದಲ್ಲಿ ರಫ್ತು ಉತ್ತೇಜನ, ಉತ್ಪಾದನೆ ಮತ್ತು ಉದ್ಯೋಗ ಸೃಷ್ಟಿಯ ಗುರಿಯೊಂದಿಗೆ ಹುಟ್ಟಿಕೊಂಡಿದೆ. ಮೇಕ್ ಇನ್ ಇಂಡಿಯಾದ ದೃಷ್ಟಿಕೋನ ಮತ್ತು ಭಾರತದಲ್ಲಿ ರಫ್ತು ಉತ್ತೇಜನ ಪ್ರಯತ್ನಗಳನ್ನು ಸಮನ್ವಯಗೊಳಿಸುತ್ತಿದೆ. ರಾಜ್ಯಗಳು ಮತ್ತು ಜಿಲ್ಲೆಗಳನ್ನು ಪಾಲುದಾರನ್ನಾಗಿಸಿ ದೇಶದ ಪ್ರತಿಯೊಂದು ಜಿಲ್ಲೆಯು ಒಂದು ಸಣ್ಣ ಆರ್ಥಿಕ ಸಾಮರ್ಥ್ಯ ಹೊಂದುವಂತೆ ಮಾಡುವ ಉದ್ದೇಶ ಹೊಂದಿದೆ. ಈ ಹಿನ್ನೆಲೆಯಲ್ಲಿ ದೇಶದ ಎಲ್ಲಾ ಜಿಲ್ಲೆಗಳಲ್ಲಿ ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಯನ್ನು ಬೆಳೆಸುವ ನಿಟ್ಟಿನಲ್ಲಿ ರಫ್ತು ಕುರಿತಂತೆ ಕಾರ್ಯಾಗಾರವನ್ನು ಆಯೋಜಿಸಲಾಗಿದೆ.

ಲೀನ್ ಯೋಜನೆಯು ಭಾರತ ಸರ್ಕಾರದ ಉಪಕ್ರಮವಾಗಿದ್ದು, ನೇರ ಉತ್ಪಾದನಾ ತತ್ವಗಳು ಮತ್ತು ತಂತ್ರಗಳನ್ನು ಅನುಷ್ಠಾನಗೊಳಿಸುವ ಮೂಲಕ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ವಿನ್ಯಾಸಗೊಳಿಸಲಾಗಿದೆ. ಈ ಯೋಜನೆಯು ಎಂ.ಎಸ್.ಎಂ.ಇಗಳು ಉತ್ಪಾದನಾ ವೆಚ್ಚವನ್ನು ಕಡಿಮೆ ಮಾಡಲು, ಉತ್ಪನ್ನದ ಗುಣಮಟ್ಟವನ್ನು ಸುಧಾರಿಸಲು ಮತ್ತು ನೇರ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವ ಮೂಲಕ ಒಟ್ಟಾರೆ ದಕ್ಷತೆಯನ್ನು ಹೆಚ್ಚಿಸಲು ಸಹಾಯ ಮಾಡುವ ಗುರಿ ಹೊಂದಿದೆ.

ಎಂ.ಎಸ್.ಎಂ.ಇ ಸುಸ್ಥಿರ ಪ್ರಾಮಾಣೀಕರಣವು ಎಂ.ಎಸ್.ಎಂ.ಇ.ಗಳಲ್ಲಿ ಶೂನ್ಯ ದೋಷ ಶೂನ್ಯ ಪರಿಣಾಮ ಅಭ್ಯಾಸಗಳ ಬಗ್ಗೆ ಜಾಗೃತಿ ಮೂಡಿಸುತ್ತದೆ. ಎಂ.ಎಸ್.ಎಂ.ಇ ಸುಸ್ಥಿರ ಝಡ್ ಪ್ರಮಾಣೀಕರಣದ ಪ್ರಯಾಣದ ಮೂಲಕ ಎಂಎಸ್ಎಂಇಗಳು ವ್ಯರ್ಥವನ್ನು ಗಣನೀಯವಾಗಿ ಕಡಿಮೆ ಮಾಡಬಹುದು, ಉತ್ಪಾದಕತೆಯನ್ನು ಹೆಚ್ಚಿಸಬಹುದು, ಪರಿಸರ ಪ್ರಜ್ಞೆಯನ್ನು ಹೆಚ್ಚಿಸಬಹುದು, ಶಕ್ತಿಯನ್ನು ಉಳಿಸಬಹುದು, ನೈಸರ್ಗಿಕ ಸಂಪನ್ಮೂಲಗಳನ್ನು ಅತ್ಯುತ್ತಮವಾಗಿ ಬಳಸಬಹುದು, ತಮ್ಮ ಮಾರುಕಟ್ಟೆಗಳನ್ನು ವಿಸ್ತರಿಸಬಹುದಾಗಿದೆ.

ಈ ಉದ್ದೇಶಿತ ಕಾರ್ಯಕ್ರಮವು ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳ ಉತ್ಪಾದಕತೆ ಮತ್ತು ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ಸಹಕಾರಿಯಾಗಿದ್ದು ಎಂ.ಎಸ್.ಎಂ.ಇಗಳ ಸಾಮರ್ಥ್ಯ ವೃದ್ಧಿಗಾಗಿ ನಿರ್ಣಾಯಕವಾಗಲಿದೆ. ಹಾಗೂ ದೀರ್ಘಾವಧಿಯ ಆರ್ಥಿಕ ಸ್ಥಿರತೆ ಮತ್ತು ಬೆಳವಣಿಗೆಯನ್ನು ಸಾದಿಸಲು ಅಗತ್ಯವಾದ ಜ್ಞಾನ ಮತ್ತು ಕೌಶಲ್ಯಗಳೊಂದಿಗೆ ತಮ್ಮ ವ್ಯವಹಾರಗಳನ್ನು ಸಶಕ್ತಗೊಳಿಸುವುದಾಗಿದೆ. ಈ ಕಾರ್ಯಕ್ರಮದಲ್ಲಿ ಬೇರೆ ಬೇರೆ ವಿಷಯಕ್ಕೆ ಸಂಬಂಧಿಸಿದಂತೆ ಸಂಪನ್ಮೂಲ ವ್ಯಕ್ತಿಗಳು ವಿಷಯ ಪ್ರಸ್ತುತಪಡಿಸಲಿದ್ದಾರೆ ಹಾಗೂ ಲೀನ್ ಮತ್ತು ಝಡ್ ಪ್ರಮಾಣೀಕರಣಕ್ಕೆ ಸಂಬಂಧಿಸಿದಂತೆ ಸ್ಥಳದಲ್ಲೇ ನೋಂದಾಯಿಸಲು ಅನುವಾಗುವಂತೆ ಸಹಾಯ ವೇದಿಕೆಯನ್ನು ತೆರೆಯಲಾಗುತ್ತದೆ. ಆದ್ದರಿಂದ ಹೆಚ್ಚಿನ ಅರಿವು ಪಡೆಯಲು ಸ್ಥಳೀಯ ಕೈಗಾರಿಕೋದ್ಯಮಿಗಳು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಲು ಕಾಶಿಯಾದ ಅಧ್ಯಕ್ಷರಾದ ಬಿ.ಆರ್.ಗಣೇಶ್ ರಾವ್ ಅವರು ಪ್ರಕಟಣೆಯ ಮೂಲಕ ಕೋರಿದ್ದಾರೆ.

# ಪ್ರವೇಶಕ್ಕೆ ಅರ್ಜಿ ಸಲ್ಲಿಕೆ: ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 25– ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಿಂದ 2025–26ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ಸೆಮಿಸ್ಟರ್, ಲ್ಯಾಟರಲ್ ಎಂಟ್ರಿ 3ನೇ ಸೆಮಿಸ್ಟರ್ ಡಿಪ್ಲೋಮಾಗೆ ವೃತ್ತಿಪರ ಅಭ್ಯರ್ಥಿಗಳ ಲ್ಯಾಟರಲ್ ಎಂಟ್ರಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಆಗಸ್ಟ್ 11ರವರೆಗೆ ವಿಸ್ತರಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ಸಂಸ್ಥೆಯ ಪ್ರಾಚಾರ್ಯರಿಗೆ ಅರ್ಜಿ ಸಲ್ಲಿಸಿ ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಸಂಸ್ಥೆಯ ಪ್ರಾಂಶುಪಾಲರನ್ನು ಸಂಪರ್ಕಿಸುವಂತೆ ರಾಯಚೂರಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಬಸವಕಲ್ಯಾಣ :– ತಾಲೂಕಿನ ಕಘಆ ಯಲ್ಲಿ ಸಾಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಆಗಿ ಪ್ರಭಾರ ವಹಿಸಿಕೊಂಡ ರಮೇಶ್ ಪಾಟೀಲ ಹತ್ಯಾಳ ಅವರು ಹಾರಕೂಡ ಮಠಕ್ಕೆ ಆಗಮಿಸಿದಾಗ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ, ಆಶೀರ್ವದಿಸಿದರು.ಈ ಸಂದರ್ಭದಲ್ಲಿ ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ಗುದಗೆ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಮನೆ ಮನೆಗೆ ಗಂಗೆ ಯೋಜನೆ ಕಡ್ಡಾಯವಾಗಿ ಶುದ್ಧ ನೀರು ಸರಬರಾಜು ಮಾಡಿ:– ಡಾ. ಗಿರೀಶ್





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಮನೆ ಮನೆಗೆ ಗಂಗೆ ಯೋಜನೆಯಲ್ಲಿ ಗ್ರಾಮಗಳ ಮನೆ ಮನೆಗೆ ನೀರು ಸರಿಯಾದ ಸಮಯಕ್ಕೆ ಸರಬರಾಜು ಮಾಡಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೊಲೇ ಗ್ರಾಮೀಣ ನೀರು ಸರಬರಾಜು ಇಲಾಖೆ ವತಿಯಿಂದ ಅನುಷ್ಠಾನ ಮಾಡಿರುವ ಮನೆ ಮನೆಗೆ ಗಂಗೆ ಕಾಮಗಾರಿಯನ್ನು ತಾಲೂಕಿನ ಮೀನಕೇರಾ, ಮದರಗಿ, ಮುಸ್ತರಿ ವಾಡಿ, ರಾಂಪುರ, ಇಟಗಾ ಗ್ರಾಮದಲ್ಲಿ ಮನೆ ಮನೆಗೆ ಗಂಗೆ ಯೋಜನೆ ಅನುಷ್ಠಾನ ಯೋಜನೆ ಅಡ್ಡಿಯಲ್ಲಿ ಕಾಮಗಾರಿ ವೀಕ್ಷಿಸಿ ಸ್ವಚ್ಛ ನೀರು ಸರಬರಾಜು ಮಾಡಲು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿ ವರ್ಗದವರಿಗೆ ತಿಳಿಸಿದರು. ಇಟಗಾ ಗ್ರಾಮದ ಗ್ರಾಮ ಪಂಚಾಯತ್ ಹತ್ತಿರದ ಓಣಿಯಲ್ಲಿ ನೀರು ಸರಬರಾಜು ಆಗುತ್ತಿರುವುದನ್ನು ಕಣ್ಣಾರೆ ಕಂಡರು ಇದೆ ಗ್ರಾಮದ ಓಣಿಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗೆ ನಮ್ಮ ಮನೆಗೆ ಕೇವಲ ಒಂದೇ ಬಾರಿ ನೀರು ಸರಬರಾಜು ಆಗುತ್ತಿದ್ದೆ ಎಂದು ಗ್ರಾಮದ ಮಹಿಳೆ ಹೇಳಿಕೊಂಡಳು ಮುಂದಿನ ದಿನಗಳಲ್ಲಿ 24X7 ನೀರು ಸರಬರಾಜು ಮಾಡಲು ಅಧಿಕಾರಿಗಳಿಗೆ ತಿಳಿಸಿದರು.

> ಮುತ್ತಂಗಿ ಗ್ರಾಮ ಪಂಚಾಯತನಲ್ಲಿ 15ನೇ ಹಣಕಾಸು ಅನುದಾನದಲ್ಲಿ ಯಾವುದೇ ರೀತಿಯ ಕಾಮಗಾರಿ ಮಾಡದೆ ಹಣ ದುರುಪಯೋಗ ಮಾಡಿಕೊಂಡಿದ್ದಾರೆ ಎಂದು ಗಮನಕ್ಕೆ ತಂದಾಗ ಅದರ ಬಗ್ಗೆ ಪರಿಶೀಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುತ್ತೇನೆ.
>
> **–ಡಾ. ಗಿರೀಶ್ ಬದೊಲೇ**
> **ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಬೀದರ್.**

ನಂತರ ಗ್ರಾಮ ಪಂಚಾಯತ್ ಕಚೇರಿಗೆ ಭೇಟಿ ನೀಡಿದಾಗ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅಶ್ವಿನಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ಬದೊಲೇ ಹಾಗೂ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮೀ ಬಿರಾದಾರ್, ಗ್ರಾಮೀಣ ನೀರು ಸರಬರಾಜು ಇಲಾಖೆಯ ಜಿಲ್ಲಾ ಅಭಿಯಂತರರಿಗೆ, ಸಹಾಯಕ ಅಭಿಯಂತರರಿಗೆ ಸನ್ಮಾನಿಸಿದರು.

ನಂತರ ಪತ್ರಕರ್ತರೊಂದಿಗೆ ಮಾತನಾಡಿ, ಚಿಟಗುಪ್ಪ ತಾಲೂಕಿನ 5 ಗ್ರಾಮಗಳಿಗೆ ಭೇಟಿ ನೀಡಿ ಕಾಮಗಾರಿ ವೀಕ್ಷಣೆ ಮಾಡಿದ್ದೇನೆ, ಅಲಲ್ಲಿ ಕೆಲವು ಲೋಪದೋಷಗಳು ಕಂಡು ಬಂದಿವೆ, ಮನೆ ಮನೆಗೆ ಶುದ್ಧ ನೀರು ಸರಬರಾಜು ಮಾಡಲು ಗ್ರಾಮ ಪಂಚಾಯತ್ ಅವರಿಗೆ ಆದೇಶಿಸಿದ್ದೇನೆ ಎಂದರು. ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ಸ್ಥಾಪಿಸಲಾಗಿದೆ ಆದರೆ ಅವುಗಳನ್ನು ಸ್ಥಗಿತಗೊಂಡಿರುವುದನ್ನು ದುರಸ್ಥಿ ಮಾಡಲು ಪಂಚಾಯತಗಳಿಗೆ ತಿಳಿಸಿದರು. ಅಂಗನವಾಡಿ ಕೇಂದ್ರಗಳಿಗೆ ಈ ಯೋಜನೆ ಅಡ್ಡಿಯಲ್ಲಿ ಕಡ್ಡಾಯವಾಗಿ ನೀರು ಸರಬರಾಜು ಮಾಡಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಲಕ್ಷ್ಮೀ ಬಿರಾದಾರ್, ಗ್ರಾಮೀಣ ನೀರು ಸರಬರಾಜು ಇಲಾಖೆಯ ಜಿಲ್ಲಾ ಅಭಿಯಂತರ ರಾಮಲಿಂಗ, ಸಹಾಯಕ ಅಭಿಯಂತರ ಶೇಖರ್, ಇಟಗಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅಶ್ವಿನಿ, ಮುತ್ತಂಗಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸಂಧ್ಯಾರಾಣಿ, ಮೀನಕೇರಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರವೀಣಕುಮಾರ ಮಠಪತಿ, ಮುಸ್ತರಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಬಸವರಾಜ, ಕಾರ್ಯದರ್ಶಿ ಸಂತೋಷ, ಉಪಾಧ್ಯಕ್ಷ ಪರಶುರಾಮ, ಸದಸ್ಯರಾದ ಶ್ರೀಕಾಂತ ರೆಡ್ಡಿ, ಚಂದರ, ಕರವಸೂಲಿಗಾರ ಗೋಪಾಲ ಫುಲೇ, ಶಿವಪುತ್ರ, ತುಕರಾಮ ಬಾಜೋಳಗಿ, ಗೋಪಾಲ ಇಟಗಾ, ಶ್ರೀನಿವಾಸ, ಗ್ರಾಮ ಪಂಚಾಯತ್ ಮಾಜಿ ಸದಸ್ಯ ಗುಂಡಪ್ಪ ಮದರಗಿ, ಜಗನಾಥ ತಾಳಮಡಗಿ, ಭದ್ರೇಶ್ ಜಾಧವ್, ಧನರಾಜ ಇಟಗಾ, ಗುತ್ತಿಗೆದಾರ ರಾಮಚಂದ್ರ ವಳಖಿಂಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

**PAPER PUBLICATION**
**IN THE COURT OF SENIOR CIVIL JUDGE AT HUMNABAD**
**O.S No.146/2024**

Plaintiffs : Rojamma
//Vs//
Defendants : Saraswati and others

Sub:-Suit for partition and separate possession.

To,

D 11-Emanuel S/o Devaputra Kotenour Age: 40 years, Occu: Agriculture

D 12-Robert S/o Devaputra Kotenour Age: 37 years, Occu: Agriculture

D 13-Steven S/o Devaputra Kotenour Age: 35 years, Occu: Agriculture

All R/o Halladkeri Bidar.

D 28-Sanju Kumar S/o Devindra Doddamani Age: 38 years, Occu: Agriculture

R/o Chakkradhari Galli Chitguppa

D 29-Anita W/o Satish Kuntvitha; Age:35 years, Occu: Household,

R/o Bawagii Tq and Dist.Bidar.

D 30- Sridevi W/o Nikhil Hossamani Age: 33 years, Occu: Household

R/o Chakkradhari Galli Chitguppa.

D 31-Shruti W/o Rajkumar Chukane Age: 31 years, Occu: Household,

R/o Markunda Tq and Dist Bidar.

Whereas, the plaintiff have filed the suit against the defendants for suit for declaration etc have taken steps your appearance in the proceeding several times but summons could not be served. Therefore you are hereby summoned to appear before this Hon'ble court in person or through your pleader duly instructed and able to answer material questions relating to the claim of the plaintiff on the day of 16-09-2025 at 10.30 AM answer the claim of the plaintiff and you are directed to produce all such documents upon which you intend to rely in support of your defense.

Take notice that in default of your appearance on the day before mentioned the suit will be heard and determined in your absence.

Given under my hand and the seal of the court, on 23rd day of July-2025.

//By order of the Court//
The Chief Ministerial Officer
Senior Civil Judge & JMFC Court
Humnabad

# ಚಿಕ್ಕ ಸೇತುವೆಯ ಮೇಲಿನ ರಸ್ತೆ ಸರಿಪಡಿಸಿ:ಸಚಿನ್‌ರೆಡ್ಡಿ



(ವರದಿ. ಡಿ. ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ತಾಲೂಕಿನ ಗೋಕುಳ ಗ್ರಾಮದ ಹತ್ತಿರ ಇರುವ ಚಿಕ್ಕ ಸೇತುವೆಯ ಮೇಲಿನ ರಸ್ತೆ ಹದಗೆಟ್ಟಿಹೋಗಿದೆ ಎಂದು ಈ ಭಾಗದ ಜನರು ಗೊಳಾಡುತ್ತಿದ್ದಾರೆ. ದಿನಾಲು ಈ ರಸ್ತೆಯ ಮೂಲಕ ಓಡಾಡುವವರಿಗೆ ಬಹಳಷ್ಟು ತೊಂದರೆ ಅನುಭವಿಸುವಂತಾಗಿದೆ ಎಂದು ಘಾಟಬೋರಾಳ ಗ್ರಾಮದ ನಿವಾಸಿ ಸಚಿನ್ ರೆಡ್ಡಿ ಸುದ್ದಿಗಾರರೊಂದಿಗೆ ಮಾತನಾಡಿ ತಿಳಿಸಿದ್ದಾರೆ.

# ಶಿಥಿಲಗೊಂಡಿರುವ ಕೋಣೆಗಳಲ್ಲಿ ಮಕ್ಕಳನ್ನು ಕುಡಿಸಬೇಡಿ:– ಗುಡಾಳ್

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಹುಮನಾಬಾದ ಹಾಗೂ ಚಿಟಗುಪ್ಪ ತಾಲ್ಲೂಕಿನ ಎಲ್ಲಾ ಸರಕಾರಿ/ಅನುದಾನಿತ/ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯಗುರುಗಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ವೆಂಟೇಶ್ ಗುಡಾಳ್ ಸುತ್ತೋಲೆ ಹೊರಡಿಸಿ ತಿಳಿಸಿದ್ದಾರೆ. ಈಗಾಗಲೇ ಮಳೆಗಾಲ ಪ್ರಾರಂಭವಾಗಿದ್ದು ಎರಡು ದಿನಗಳಿಂದ ಸತತವಾಗಿ



ಮಳೆ ಬರುತ್ತಿರುವುದರಿಂದ ಮಕ್ಕಳ ಹಿತದೃಷ್ಟಿಯಿಂದ ಶಿಥಿಲಗೊಂಡಿರುವ ಕೊಣೆಗಳಲ್ಲಿ ಮಕ್ಕಳನ್ನು ಯಾವುದೇ ಕಾರಣ–ಕ್ಕೂ ಕೂಡಿಸಬಾರದು ಮತ್ತು ಅಂತಹ ಕೊಣೆಗಳನ್ನು ಮುಚ್ಚಿ ಕೀಲಿ ಹಾಕುವುದು ಜೊತೆಗೆ ಆ ಕಡೆ ಮಕ್ಕಳು ಹೋಗದಂತೆ ನೋಡಿಕೊಳ್ಳಬೇಕು. ಏನಾದರೂ ಅನಾಹುತ ಆದಲ್ಲಿ ಮುಖ್ಯಗುರುಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವೆಂಟೇಶ್ ಗುಡಾಳ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಗೊಳ್ಳಿ ರಾಯಣ್ಣನವರ ಮೂರ್ತಿ ವಿವಾದ ಬಗೆಹರಿಸದಿದ್ದರೆ ಹೋರಾಟಕ್ಕೆ ಸಿದ್ಧ: ಆ.15 ಕ್ಕೆ ಪೂಜೆ ಸಲ್ಲಿಸಲು ಜಯಕರ್ನಾಟಕ ಸಂಘಟನೆ ಬದ್ಧ

ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಜು.25:ಕಳೆದ ಒಂದುವರ್ಷಗಳಿಂದತಾಲೂಕಿನ ಮಾಶಾಳ ಗ್ರಾಮದಲ್ಲಿರುವ ಸ್ವಾತಂತ್ರ್ಯ ಹೋರಾಟಗಾರ ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣನವರ ಮೂರ್ತಿ ಪ್ರತಿಷ್ಠಾಪನೆಯ ವಿಷಯ ಬಹಳಷ್ಟುಚರ್ಚೆಗೆಗ್ರಾಸವಾಗಿದೆ. ಕಳೆದ ಒಂದು ವರ್ಷದಿಂದ ಇಲ್ಲಿಯವರೆಗೆರಾಯಣ್ಣನವರ ಮೂರ್ತಿಗೆ ಪೂಜೆ ಸಲ್ಲಿಸಲು ಹಾಗೂ ಹತ್ತಿರ ಸುಳಿಯಲು ಬಿಡದ ವಾತಾವರಣ ನಿರ್ಮಾಣವಾಗಿದೆ.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಯಕರ್ನಾಟಕ ಸಂಘಟನೆ ಜಿಲ್ಲಾ ಯುವ ಘಟಕದ ಅಧ್ಯಕ್ಷ ಭೀರಣ್ಣ ಪೂಜಾರಿ ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ಈ ದೇಶದ ಪ್ರತಿಯೊಬ್ಬರ ಆಸ್ಮಿತೆ.ದೇಶದ ಸ್ವಾತಂತ್ರ್ಯಕ್ಕಾಗಿ ತಮ್ಮಜೀವವನ್ನೆಪಣವಾಗಿಟ್ಟುತಮ್ಮ ಜೀವವನ್ನೆದೇಶಕ್ಕಾಗಿ ಕೊರಳು ಕೊಟ್ಟುಬ್ರಿಟಿಷರ ಕೈಯಲ್ಲಿನೇಣಿಗೆ ಬಲಿಯಾಗಿದ್ದಾರೆತಮ್ಮಕುಟುಂಬವನ್ನು ಹಾಗೂ ತಮ್ಮವೈಯಕ್ತಿಕ ಜೀವನವನ್ನುಬದಿಗೊತ್ತಿ ರಾಣಿ ಚೆನ್ನಮ್ಮಳ ಸುಪುತ್ರರಾಗಿ ದೇಶದಲ್ಲಿ ಕ್ರಾಂತಿಯ ಜ್ವಾಲೆಯಾಗಿ ಮೆರೆದಿದ್ದಾರೆ. ಹಂತಹವೀರನಿಗೆ ನಮ್ಮವರೆ ಮಾಡಿದಕುತಂತ್ರದಿಂದ ಬ್ರಿಟಿಷರ ಕಂಬಿಗೆ ಕೊರಳೊಡ್ಡಿ ಜೀವ ನೀಡುವಪರಿಸ್ಥಿತಿಬಂದೊದಗಿತು. ಹಂತಹ ವೀರನ ಪ್ರೇರಣೆಯಿಂದ ದೇಶದಸ್ವಾತಂತ್ರ್ಯಕ್ಕಾಗಿ ಸಾವಿರಾರು ಹೋರಾಟಗಾರರುಹುಟ್ಟಿಕೊಂಡು ದೇಶ್ಯಾದ್ಯಂತ ಕಿಚ್ಚುಹೆಚ್ಚಿಸಿದರ ಪ್ರತಿಫಲವಾಗಿ ದೇಶಕ್ಕೆಸ್ವಾತಂತ್ರ್ಯ ಬಂದೊದಗಿತು.ಆದರೆಹಂತಹ ಕ್ರಾಂತಿವೀರನಮೂರ್ತಿ ಪ್ರತಿಷ್ಠಾನ ಮಾಡಿದ ದೇಶ ಪ್ರೇಮಿಗಳಿಗೆ ಇಂದು ಮಾಶಾಳ ಗ್ರಾಮದಲ್ಲಿ ರಾಯಣ್ಣನವರಮೂರ್ತಿ ಪೂಜೆಗೆ ಅವಕಾಶವಿಲ್ಲ.ವಿಪರ್ಯಾಸವೆಂದರೆ ಕಳೆದ ಒಂದು ವರ್ಷದಿಂದ ಪೊಲೀಸರ ಸರ್ಪಗಾವಲಿನಲ್ಲಿ ರಾಯಣ್ಣನವರ ಮೂರ್ತಿ ಇರುವಂತಾಗಿದೆ.ಕಾರಣ ಅಲ್ಲಿನ ಕೆಲವು ಕೀಡಿಗೇಡಿಗಳು ರಾಯಣ್ಣನವರ ಮೂರ್ತಿಗೆ ಧಕ್ಕೆ ತರುಬಹುದು ಎನ್ನುವ ಸಂಶಯದಿಂದ.ಮಾಶಾಳ ಗ್ರಾಮದಲ್ಲಿ ಕಳೆದ ವರ್ಷ ಆಗಷ್ಟ್ 15 ರಂದು ಮೂರ್ತಿ ಪ್ರತಿಷ್ಠಾಪನೆಯಾಗಿದೆ.ಆದರೆ ಆ ಮೂರ್ತಿಗೆ ಪೂಜೆ ಸಲ್ಲಿಸಲು ಬಿಡುತ್ತಿಲ್ಲ.ಕಾರಣ ಏನೇ ಇರಬಹುದು ಆದರೆ ಒಬ್ಬ ಸ್ವಾತಂತ್ರ್ಯ ಹೋರಾಟಗಾರರಿಗೆ ಈ ರೀತಿಯ ಅಪಮಾನ ಅಸಯ್ಯಗೇಡಿತನದಪರಮಾವಧಿಗೆ ಕಾರಣವಾಗಿದೆ.ಈ ದೇಶದ ಮಣ್ಣಿನಲ್ಲಿ ಹುಟ್ಟಿದ ವೀರನ ಮೂರ್ತಿಗೆ ಈ ರೀತಿಯಾಗಿ ವಿರೋಧ ಮಾಡುವುದು ದೇಶದ್ರೋಹಿಗಳ ಲಕ್ಷಣ. ತಾಲೂಕಿನ ಶಾಸಕರಾದ,ಎಮ್.ವೈ.ಪಾಟೀಲರು, ತಾಲೂಕು ಅಧಿಕಾರಿಗಳು,ಜಿಲ್ಲಾಡಳಿತ ಮೂರ್ತಿ ವಿವಾದ ಉಂಟಾಗಿ ಒಂದು ವರ್ಷ ಕಳೆದರೂ ಇಲ್ಲಿಯವರೆಗೆ ಒಂದು ಶಾಂತಿ ಸಂದಾನ ನಡೆಸಿ ಬಗೆಹರಿಸುವ ಗೋಜಿಗೆ ಹೋಗಿಲ್ಲ.ತಿಂಗಳಲ್ಲಿ ಒಮ್ಮೆಯಾದರೂ ಮಾಶಾಳ ಗ್ರಾಮಕ್ಕೆ ಭೇಟಿ ನೀಡುವ ಶಾಸಕರುರಾಯಣ್ಣನವರಮೂರ್ತಿ ವಿಷಯ ಸಂಬಂಧವೇ ಇಲ್ಲಎನ್ನುವಂತೆ ವರ್ತಿಸುವುದು ಎಷ್ಟು ಸರಿ.ಶಾಸಕರು ತಾಲೂಕು ಆಡಳಿತ ಮನಸ್ಸು ಮಾಡಿದರೆ ಒಂದು ಗಂಟೆಯಲ್ಲಿಬಗೆಹರಿಂಮುವಸಮಸ್ಯೆ ಒಂದು ವರ್ಷ ಕಳೆದರೂ ಬಗೆಹರಿಯುತ್ತಿಲ್ಲ ಎಂದರೆ ಇದರಲ್ಲಿ ರಾಜಕೀಯ ಅಡಗಿರುವುದುಮೇಲ್ನೋಟಕ್ಕೆಕಂಡು ಬರುತ್ತದೆ.ಚುನಾವಣೆ ಬಂದಾಗ ಸ್ವಾತಂತ್ರ್ಯಹೋರಾಟಗಾರರಬಗ್ಗೆ ಮಾತನಾಡುವರಾಜಕಾರಣಿಗಳು ಕಣ್ಮೆರೆಯಾಗಿದ್ದಾರೆ ಎನ್ನುವ ಭಾವ ಮೂಡುತ್ತದೆ.ಅದೇನೆ ಇರಲಿ ಜಿಲ್ಲಾಡಳಿತ ಹಾಗೂ ತಾಲೂಕು ಆಡಳಿತ ಸೇರಿದಂತೆ ತಾಲೂಕು ಶಾಸಕರು ಆಗಷ್ಟ್ 15 ರೊಳಗಾಗಿ ಸಮಸ್ಯೆಬಗೆಹರಿಸಿ ರಾಯಣ್ಣನವರಮೂರ್ತಿಗೆಪೂಜೆ ಸಲ್ಲಿಸದೇ ಹೋದರೆ.ಜಿಲ್ಲೆಯಾದ್ಯಂತಜಯಕರ್ನಾಟಕಸಂಘಟನೆಯ ಪದಾಧಿಕಾರಿಗಳು ಪೂಜೆಸಲ್ಲಿಸಲು ಕರೆ ನೀಡುತ್ತೇವೆ.ನಮ್ಮ ಮಣ್ಣಿನ ವೀರಪುತ್ರನಿಗೆಪೂಜೆ ಸಲ್ಲಿಸುವುದು ನಮ್ಮ ಹಕ್ಕು ಅದನ್ನು ತಡೆಯಲುಯಾರಿಂದಲೂಸಾಧ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರುಇದೆಸಂದರ್ಭದಲ್ಲಿ ಜಯಕರ್ನಾಟಕಸಂಘಟನೆತಾಲೂಕು ಅಧ್ಯಕ್ಷರಾದ ನಿಂಗರಾಜ ಕಟ್ಟಿಮನಿ,ಜಿಲ್ಲಾ ಯುವ ಘಟಕ ಅಧ್ಯಕ್ಷ ಭಿರಣ್ಣ ಪುಜಾರಿ ಹವಳಗಾ,ಉಪಾಧ್ಯಕ್ಷ ಮೌಲಾಲಿ ಪಟೇಲ,ವಿದ್ಯಾರ್ಥಿ ಘಟಕದ ತಾಲೂಕು ಅಧ್ಯಕ್ಷ ಮೈಬೂಬ ಖಸಾಯಿ ಶೇಶಗಿರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



# ಬೆಟ್ಟ, ಗುಡ್ಡ, ಕಾಡುಗಳಲ್ಲಿ ಕುರಿ, ಮೇಕೆ ಮೇಯಿಸುವುದನ್ನು ನಿಷೇಧಿಸಿದ ಸರ್ಕಾರದ ನಡೆಗೆ ಖಂಡನೆ: ಆದೇಶ ಹಿಂಪಡೆಯಲು ಆಗ್ರಹ

ಚಿಂಚೋಳಿ: ಜು.25:ಬೆಟ್ಟ ಗುಡ್ಡ ಕಾಡುಗಳಲ್ಲಿ ಕುರಿ ಮೇಕೆ ದನಕರುಗಳು ಪ್ರಾಚೀನ ಕಾಲದಿಂದಲೂಮೆಯಿಸಿಕೊಂಡು ಬರುವ ಕುರಿಗಾಹಿಗಳಿಗೆ ರಾಜ್ಯ ಸರ್ಕಾರ ಏಕಾಏಕಿ ಅರಣ್ಯ ಪ್ರದೇಶದಲ್ಲಿ ದನಕರುಗಳು ಕುರಿ ಮೇಕೆಗಳು ಮೇಯಿಸುವುದು ನಿಷೇಧ ಮಾಡಿರುವುದು ಕುರಿಗಾಹಿಗಳಿಗೆ ದ್ರೋಹ ಮಾಡಿದಂತೆ ಶೀಘ್ರದಲ್ಲೇ ಸರ್ಕಾರ ಎಚ್ಚೇತ್ತುಕೊಂಡು ಆದೇಶ ಹಿಂಪಡೆಯಬೇಕು ಎಂದು ಹೋರಾಟಗಾರ ಗೋಪಾಲ ಪೂಜಾರಿ ಗಾರಂಪಳ್ಳಿ ಆಗ್ರಹಿಸಿದರು.



ಪಟ್ಟಣದ ತಹಸೀಲ್ ಕಾರ್ಯಾಲಯ ಎದುರುಗಡೆ ಆದಿವಾಸಿ ಅಲೆಮಾರಿ ಅಸಂಘಟಿತ ಬುಡಕಟ್ಟು ಮೂಲನಿವಾಸಿ ಸಂಚಾರಿ ಕುರಿಗಾಹಿಗಳಹೋರಾಟಸಮಿತಿ ಮತ್ತು ಕರ್ನಾಟಕ ಪ್ರದೇಶ ಗೊಂಡ ಕುರುಬರ ಸಂಘದ ವತಿಯಿಂದ ರಾಜ್ಯದ ಅರಣ್ಯ ಪ್ರದೇಶಗಳಲ್ಲಿ ದನಕರುಗಳು ಕುರಿ ಮೇಯಿಸುವುದು ನಿಷೇಧ ಹಿಂಪಡೆಯುವಂತೆ ಒತ್ತಾಯಿಸಿ ಸಾವಿರಾರು ಕುರಿಗಳೊಂದಿಗೆ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಮೂಲಕ ಸರ್ಕಾರಕ್ಕೆಮನವಿಪತ್ರ ಸಲ್ಲಿಸಿ ಮಾತನಾಡಿದ ಅವರು,ಪ್ರಾಚೀನ ಬುಡಕಟ್ಟು ಮೂಲನಿವಾಸಿ ಅಲೆಮಾರಿ ಸಂಚಾರಿ ಕುರಿಗೈಗಳು ನಿತ್ಯ ಕಾಯಕದೊಂದಿಗೆ ಕುರಿ ಮೇಕೆಧನಗಳೊಂದಿಗೆ ಅಡವಿ, ಬೆಟ್ಟ ಕಾಡಿಗೆ ಹೋಗಿ ಮತ್ತು ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ಮೇವಿಗಾಗಿ ಸ್ಥಳದಿಂದ ಮತ್ತೊಂದು ಪ್ರದೇಶಕ್ಕೆ ಹೋಗಿ ಜೀವನವನ್ನು ನಡೆಸುತ್ತಿದ್ದಾರೆ.

ಇದರ ಮಧ್ಯೆ ರಾತ್ರಿ ಕುರಿಗಳು ಹಾಕಿರುವಂತ ಕುರಿದೊಡ್ಡಿಗೆ ಕಳ್ಳರು ನುಗ್ಗಿ ಕುರಿಗಳನ್ನು ಕಳ್ಳತನಮಾಡಿ ಕಳ್ಳರಿಗೆ ತಡೆಯಲು ಹೋದರೆ ಅದೆಷ್ಟು ಕುರಿಗಾಯಿಗಳ ಮೇಲೆ ಹಲ್ಲೆ ಹತ್ಯೆ ಕೂಡ ಆಗಿವೆ ಮತ್ತು ಕುರಿಗಾಹಿಗಳ ಹಿತರಕ್ಷಣೆ ಕಾನೂನು ಜಾರಿಗೊಳಿಸಿ ಸರಕಾರ ಸಾಮಾಜಿಕ ಭದ್ರತೆ ಒದಗಿಸಬೇಕು. ರಾಜ್ಯದ ಅರಣ್ಯ ಸಚಿವ ಈಶ್ವರ್ ಖಂಡ್ರೆಯವರು ಎಲ್ಲಾ ಜಿಲ್ಲೆಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಅರಣ್ಯ ಪ್ರದೇಶದಲ್ಲಿ ಕುರಿ ಮೇಲೆ ದನಗಳಿಗೆ ಮೈಸಲು ತಡೆಯುವಂತೆ ಸೂಚಿಸಿರುವ ಆದೇಶವನ್ನು ಕೂಡಲೇ ಹಿಂಪಡೆಯಬೇಕು. 2024–25ನೇ ಬಜೆಟ್ನಲ್ಲಿ ಕುರಿಗೈಗಳ ಹಿತರಕ್ಷಣಾ ಕಲ್ಯಾಣ ವಿದಾಯಕ ಜಾರಿಗೊಳಿಸಿತ್ತು ಆದರೆ ಇಲ್ಲಿಯವರೆಗೆ ಕಾನೂನು ರೂಪದಲ್ಲಿ ಜಾರಿಗೊಳಿಸಿಲ್ಲ ಶೀಘ್ರವೇ ಜಾರಿಗೊಳಿಸಬೇಕು, ರಾಜ್ಯದ ಎಲ್ಲಾ ಜಿಲ್ಲೆ ತಾಲ್ಲೂಕಾ ಗ್ರಾಮೀಣಪ್ರದೇಶಗಳಲ್ಲಿಗೋಮಾಳ ಗೈರಾಣಿ ಭೂಮಿಯನ್ನು ಸಂರಕ್ಷಿಸಬೇಕು, ಕುಂಗೈಗಳಿಗೆ ಆತ್ಮರಕ್ಷಣೆಗಾಗಿ ಪೋಲಿಸ್ ಇಲಾಖೆಯಿಂದ ಬಂದೂಕು ತರಬೇತಿ ನೀಡಬೇಕು ಎಂದರು. ಈ ಸಂದರ್ಭದಲ್ಲಿ ಕುರುಬ ಸಮಾಜದ ಅಧ್ಯಕ್ಷ ಹಣಮಂತ ಕೆ.ಪೂಜಾರಿ, ರೇವಣಸಿದ್ದಪ್ಪ ಅಣಕಲ್,ಜಗನ್ನಾಥ,ಶಿವಕುಮಾರ, ಕುಪ್ಪಣ್ಣ,ಹಣಮಂತ,ಜಗನ್ನಾಥ, ಮಹಾದೇವಪ್ಪ ಪೂಜಾರಿ,ಜಗನ್ನಾಥ ದಸ್ತಪುರ,ರವೀಂದ್ರಪೂಜಾರಿ, ತುಳಜಪತಿಪ್ಪೆಗೊಂಡ,ನಾಗಪ್ಪ ಚಂದಾಪುರ,ರಂಗಣ್ಣಪೂಜಾರಿ, ರೇವಣಸಿದ್ದಪ್ಪ ಪೋಲಕವಳ್ಳಿ, ಸೂರ್ಯಕಾಂತ ಪೂಜಾರಿ, ಶಿವಕುಮಾರ ಪೂಜಾರಿ, ಮೌನೇಶ, ಮೋಹನ್ ಐನಾಪೂರ, ಗಿರಿಮಲಪ್ಪ ಬಿ ಹಸರಗುಂಡಗಿ,ಗುಂಡಪ್ಪ ಪೂಜಾರಿ, ರೇವಣಸಿದ್ದಪ್ಪ ಅನೇಕರಿದ್ದರು.

# ಪತ್ರಿಕಾ ದಿನಾಚರಣೆ ಇಂದು

ಮಲ್ಲಮ್ಮನುಡಿ ವಾರ್ತೆ ಭಾಲ್ಕಿ: ಜು.25:ಇಲ್ಲಿಯಬಾಲಾಜಿ(ರಾಮ) ಮಂದಿರದಲ್ಲಿಡಿ.ಕೆ.ಸಿದ್ರಾಮ ಅವರ ಅಭಿಮಾನಿ ಬಳಗದ ವತಿಯಿಂದ ಶನಿವಾರ ಬೆಳಿಗ್ಗೆ10ಕ್ಕೆ ಪತ್ರಿಕಾ ದಿನಾಚರಣೆಕಾರ್ಯಕ್ರಮಆಯೋಜಿಸಲಾಗಿದೆ. ಮಾಜಿ ಶಾಸಕ ಪ್ರಕಾಶಖಂಡ್ರೆಅವರುಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.ನಾರಂಜಾ ಸಹಕಾರ ಸಕ್ಕರೆ ಕಾರಖಾನೆ ಅಧ್ಯಕ್ಷ ಡಿ.ಕೆ.ಸಿದ್ರಾಮ ಅಧ್ಯಕ್ಷತೆ ವಹಿಸಲಿದ್ದಾರೆ.ಪತ್ರಕರ್ತರಸಂಘದ ಗೌರವ ಸಲಹೆಗಾರ ಬಾಬು ವಾಲಿ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಡಿ.ಕೆ. ಗಣಪತಿ, ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ಶಿವರಾಜ ಗಂದಗೆ, ತಾಲೂಕುಬಿಜೆಪಿ ಅಧ್ಯಕ್ಷ ವೀರಣ್ಣ ಕಾರಬಾರಿ, ಯುವಮುಖಂಡ ಶಿವು ಲೋಖಂಡೆ,ಪ್ರತಾಪ ಪಾಟೀಲ್, ಯುವ ಉದ್ಯಮಿ ಚನ್ನಬಸವಣ್ಣ ಬಳತೆ,ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟೆ,ಪ್ರಧಾನ ಕಾರ್ಯದರ್ಶಿ ಗಣಪತಿ ಬೋಚರೆ ಸೇರಿದಂತೆ ಮುಂತಾದವರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ



# ಸುರಕ್ಷಿತವಾಗಿ ನೋಡಿಕೊಳ್ಳಿ ತಾವು ಸುರಕ್ಷಿತವಾಗಿರಿ : ಎಎಸ್ಐ ಸಂಗೀತಾ



ಬೀದರ. ಜು. 25 : ಮಕ್ಕಳಿಗೆ ಸುರಕ್ಷಿತವಾಗಿ ನೋಡಿಕೊಳ್ಳಿ ತಾವು ಸುರಕ್ಷಿತವಾಗಿರಿ ಎಂದು ಅಕ್ಕಪಡೆಯ ಎಎಸ್ಐ ಸಂಗೀತಾ ಮತ್ತು ಅವರ ಸಂಗಡಿಗರು ಪಾಲ್ಗೊಂಡು ಚಾಲಕರಿಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಉದ್ದೇಶಿಸಿ ಮಾತನಾಡುತ್ತ ತಂಬಾಕು ಸೇವನೆಯಾಗಲಿ ಅಥವಾ ಡ್ರಿಂಕ್ ಮಾಡಿ ಬಸ್ ಚಲಾಯಿಸದಾಗಲಿ ಮಾಡಬೇಡಿ ಇದು ಹಾನಿಕಾರಕ, ತಮ್ಮ ಜೀವಕ್ಕೂ ಅಪಾಯವಿರುತ್ತದೆ.

ಇದರ ಜೊತೆಗೆ ಮಕ್ಕಳ ಮುಂದೆ ಧೂಮಪಾನ ಮಾಡುವುದು, ತಂಬಾಕು ತಿಂದು ಉಗುಳುವುದು ಮಾಡಬೇಡಿ ಮಕ್ಕಳ ಮೇಲೆ ದುಷ್ಪರಿಣಾಮಬೀರುತ್ತದೆ.ಇದು ಕಾನೂನಿನ ವಿರುದ್ಧವುವಾಗಿದೆ. ಬಸ್‌ನಲ್ಲಿ ಹೆಣ್ಣುಮಕ್ಕಳ ಜೊತೆ ಪೋಷಕರಂತೆ ವರ್ತನೆ ಇಟ್ಟುಕೊಳ್ಳಿ ಎಂದು ಚಾಲಕರಿಗೆ ತಿಳಿಸುತ್ತ ಈಗಾಗಲೇ ಪಾಲಕರ ದೂರುಗಳು ಬರುತ್ತಲ್ಲಿವೆ. ಮಕ್ಕಳಿಂದ ಗುಟಕಾ ಅಥವಾ ಯಾವುದೆ ನಶಾ ಪದಾರ್ಥ ತರಿಸುವುದಾಗಲಿ ಮಾಡಬೇಡಿ, ದೂರುಗಳನ್ನು ಬಾರದಂತೆ ನೋಡಿಕೊಳ್ಳಿ, ಅಕ್ಕ ಪಡೆ ಇರುವುದೆ ಮಹಿಳೆ ಮತ್ತು ಮಕ್ಕಳಿಗಾಗಿ ಎಂದು ತಿಳಿಸುತ್ತ ಏನಾದರೂ ಸಮಸ್ಯೆ ಕಂಡುಬಂದಲ್ಲಿ ತುರ್ತಾಗಿ 112ಗೆ ಕರೆ ಮಾಡಿ ನಾವು ತಕ್ಷಣವೇ ಪ್ರತಿಕ್ರಿಯೆ ಕೊಡುತ್ತೇವೆ ಎಂದು ಹೇಳಿದರು. ಅಕ್ಕಪಡೆ ವತಿಯಿಂದ ನೇಹರು ಸ್ಟೇಡಿಯಂ ಹತ್ತಿರವಿರುವ ಗುರು ನಾನಕ ಶಾಲೆಯಲ್ಲಿ ಇಂದು ದಿನಾಂಕ 25–07–2025 ರಂದು ವಾಹನ ಚಾಲಕರಿಗೆಜಾಗೃತಿಕಾರ್ಯಗಾರ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿಪ್ರಾಂಶುಪಾಲೆ ನಲಿನಿ ಡಿ.ಜಿ. ಅವರು ಮಾತನಾಡುತ್ತ ಶಾಲೆಯ ಸಿಬ್ಬಂದಿಯರಿಗೆ ಅರಿವು ಮುಡಿಸಿದ್ದು ತುಂಬ ಧನ್ಯವಾದಗಳು ಎಂದು ತಿಳಿಸುತ್ತ ವಾಹನ ಚಾಲಕರು ಇದ್ದನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಕರೆ ಕೊಟ್ಟರು. ಈ ಸಂರ್ದದಲ್ಲಿ ಡಬ್ಲು ??ಹೆಚ್‌ಸಿ ಅಂಬೀಕಾ, ಅಕ್ಕ ಪಡೆಯ ಸಿಬ್ಬಂದಿಯರಾದ ನೀಲಮ್ಮಾ, ಅಂಬೀಕಾ,ಶಿವಲೀಲಾ ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಮುಂಗಾರು ಅಧಿವೇಶನಕ್ಕೂ ಮುನ್ನ ಒಳ ಮೀಸಲಾತಿ ಜಾರಿಯಾಗದಿದ್ದರೆ ಉಗ್ರ ಹೋರಾಟ: ಕಡ್ಯಾಳ




ಬೀದರ. ಜು. 25 : ರಾಜ್ಯ ಸರ್ಕಾರ ಮುಂಗಾರು ಅಧಿವೇಶನ್ನೂ ಮುನ್ನ ಒಳ ಮೀಸಲಾತಿ ಜಾರಿ ಮಾಡದಿದ್ದಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದೆಂದು ಕರ್ನಾಟಕ ರಾಜ್ಯ ಆದಿ ಜಾಂಬವ ಸಂಗಟನೆ ಜಿಲ್ಲಾ ಗೌರವಾಧ್ಯಕ್ಷ ರಘುಪಟರಾಜ ಕಡ್ಯಾಳ ಎಚ್ಚರಿಸಿದರು.

ಶುಕ್ರವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಸಿಸಿ ಮಾತನಾಡಿರುವ ಅವರು,ನ್ಯಾ.ಹೆಚ್. ಎನ್.ನಾಗಮೋಹನ್‌ದಾಸ್‌ರವರ ಸಮೀಕ್ಷಾ ವರದಿ ಜುಲೈ 30ರೊಳಗೆ ಸಲ್ಲಿಕೆಯಾಗಲಿ, ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಅಧಿವೇಶನದಲ್ಲಿ ಒಳಮೀಸಲಾತಿ ಈಡೇರಿಕೆಗಾಗಿ ತಮ್ಮ ಬದ್ಧತೆ ಪ್ರಕಟಿಸಲಿ. ಎಂದರು.

ಮಳೆಗಾಲ ಅಧಿವೇಶನದಲ್ಲಿ ಒಳಮೀಸಲಾತಿ ಅಂಗೀಕರಿಸಲು ಆಗ್ರಹಿಸಿ ಆಗಸ್ಟ್ 11 ರಿಂದ ಬೆಂಗಳೂರಿನ ಫ್ರಿಡಮ್ ಪಾರ್ಕ್ನಲ್ಲಿ ಅನಿರ್ಧಿಷ್ಟಆಹೋರಾತ್ರಿಸತ್ಯಾಗ್ರಹ ಆರಂಭಿಸಲಾಗುವುದೆಂದರು.

ಆಗಸ್ಟ್ 1 2024 ರಂದು ಸರ್ವೋಚ್ಚನ್ಯಾಯಾಲಯವು ಪರಿಶಿಷ್ಟರ ಬಹು ದಿನಗಳ ಬೇಡಿಕೆಯನ್ನು ರಾಜ್ಯ ಸರ್ಕಾರಗಳು ಆದ್ಯತೆಯಮೇರೆಗೆ ಜಾರಿಗೊಳಿಸಬಹುದು ಎಂಬ ಐತಿಹಾಸಿಕ ತೀರ್ಪನ್ನು ನೀಡಿ ಒಂದು ವರ್ಷ ಗತಿಸುತ್ತಿದೆ. ಎರಡೇ ತಿಂಗಳಲ್ಲಿ ಪರಿಶಿಷ್ಟಜಾತಿ ಸಮುದಾಯಗಳ ಜನಸಂಖ್ಯಾ ಸಮೀಕ್ಷೆ ಪೂರ್ಣಗೊಳಿಸಿ. ತಮ್ಮ ನೈತಿಕ ಜವಾಬ್ದಾರಿ ಪೂರೈಸಿದ್ದರೆ 30 ವರ್ಷಗಳ ಒಳ ಮೀಸಲಾತಿ ಹೋರಾಟವು ಮತ್ತೊಂದು ಸುತ್ತಿನ ಹೋರಾಟವಾಗಿ ಪರಿವರ್ತನೆಯಾಗುವ ಅಗತ್ಯವಿರಲಿಲ್ಲ. ಈಗಲಾದರೂ ಇಂತಹ ನಿರ್ಲಕ್ಷ್ಯ ಧೋರಣೆ ಮುಂದುವರೆಸದೇ,ಆಡಳಿತರೂಢ ಕಾಂಗ್ರೆಸ್ ಸರ್ಕಾರವು ಪ್ರಸಕ್ತ ಅಧಿವೇಶನದಲ್ಲಿ ಒಳಮೀಸಲಾತಿ ಜಾರಿಗೊಳಿಸುವ ಮೂಲಕ ತಮ್ಮ ಬದ್ಧತೆ ಪ್ರಕಟಿಸಬೇಕಾಗಿದೆ. ಏಕೆಂದರೆ,ಜಸ್ಟಿಸ್ ನಾಗಮೋಹನ್ ದಾಸ್‌ರವರ ನೇತೃತ್ವದಲ್ಲಿ ನೇಮಕವಾದ ಏಕಸದಸ್ಯ ಆಯೋಗವು ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ಕೈಗೊಂಡು ವೈಜ್ಞಾನಿಕ ಹಾಗೂ ವಸ್ತುನಿಷ್ಠವರದಿಯನ್ನು ಜುಲೈ 30ರೊಳಗಡೆ ಸರ್ಕಾರಕ್ಕೆ ಸಲ್ಲಿಸಬೇಕಾಗಿದೆ. ಹಾಗಾಗಿ ವರದಿಯನ್ನು ಆದಷ್ಟು ಬೇಗ ಪಡೆದು ಆಗಸ್ಟ್ 11 ರಿಂದ ಆರಂಭವಾಗಲಿರುವ ಒಳಮೀಸಲಾತಿ ಅನುಮೋದನೆಯೊಂದಿಗೆ ಬೇಡಿಕೆಯನ್ನು ಅಧಿವೇಶನದಲ್ಲಿ ಸರ್ವಪಕ್ಷಗಳ ಅಂಗೀಕರಿಸಿದರೆ, ನೇಮಕಾತಿ ಆಗಬೇಕಾದ 30 ಸಾವಿರಕ್ಕೂ ಅಧಿಕ ಹುದ್ದೆಗಳು ವಂಚಿತ ನಿರುದ್ಯೋಗಿ ಯುವಕ, ಯುವತಿಯರು ಪಡೆಯಬಹುದಾಗಿದೆ ಎಂದರು. ಸಂಘಟನೆ ಜಿಲ್ಲಾಧ್ಯಕ್ಷ ಸಂಜೀವಕುಮಾರ ಬೇಂದ್ರೆ ಮಾತನಾಡಿ, ಕಳೆದ 30 ವರ್ಷಗಳಲ್ಲಿ ಆಯೋಗ ನೇಮಕವಾಗಲು,ನೇಮಕವಾದ ಆಯೋಗಕ್ಕೆ ಅನುದಾನ ನೀಡಲು, ಸರ್ಕಾರಕ್ಕೆ ಒಪ್ಪಿಸಿದ ವರದಿ ಅನುಷ್ಠಾನಗೊಳಿಸಲು 3 ದಶಕಗಳ ವಿಳಂಬ ಮುಂದುವರೆದಿರುವುದರಿಂದ ನೊಂದ ಸಮುದಾಯಗಳು ಯಾವುದೇ ಸರ್ಕಾರಗಳನ್ನು ನಂಬುವ ಸ್ಥಿತಿಯಲ್ಲಿಲ್ಲ. ಈ ಎಲ್ಲಾ ಕಹಿ ಅನುಭವಗಳು ಮುಂದುವರೆಯದಂತೆ ಸರ್ಕಾರವು ಆಗಸ್ಟ್ 11 ರಿಂದ ಆರಂಭವಾಗಲಿರುವ ಮಳೆಗಾಲ ಅಧಿವೇಶನದಲ್ಲಿ ಒಳಮೀಸಲಾತಿ ಜಾರಿಗೊಳಿಸುವ ತೀರ್ಮಾನಕೈಗೊಳ್ಳುವ ಮೂಲಕ ನುಡಿದಂತೆ ನಡೆಯಲು ಆಗ್ರಹಿಸಿ ದಿನಾಂಕ:11–08–2025 ರಿಂದ ಬೆಂಗಳೂರಿನ ಫ್ರೀಡಂ ಪಾರ್ಕ್ನಲ್ಲಿ ಅನಿರ್ಧಿಷ್ಟ ಅಹೋರಾತ್ರಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ. ಆದ್ದರಿಂದ ಎಲ್ಲಾ' ಸಂಘ ಸಂಸ್ಥೆಗಳ ಮುಖಂಡರುಗಳು ಹಾಗೂ ರಾಜಕೀಯ ಪಕ್ಷಗಳ ಮುಖಂಡರು ಪಕ್ಷಾತೀತವಾಗಿ ಈ ಹೋರಾಟದಲ್ಲಿ ಭಾಗವಹಿಸಬೇಕೆಂದು ಬೇಂದ್ರೆ ವಿನಂತಿಸಿದರು.

ಸಂಘಟನೆಯ ಕಲ್ಯಾಣ ಕರ್ನಾಟಕ ವಿಭಾಗೀಯ ಯುವ ಘಟಕದ ಅಧ್ಯಕ್ಷ ಮಲ್ಲಿಕ ಮಡಿಗೆ, ಜಿಲ್ಲಾ ಕಾರ್ಯಾಧ್ಯಕ್ಷ ಯುವರಾಜ ಭೇಂಡೆ, ಜಿಲ್ಲಾ ಉಪಾಧ್ಯಕ್ಷ ಸಿ.ಎಮ್.ದಾಸ್, ಜಿಲ್ಲಾ ಯುವ ಅಧ್ಯಕ್ಷ ಜೀವನ ರಿಕ್ಕೆ, ಇತರೆ ಪದಾಧಿಕಾರಿಗಳಾದ ಮೈಕಲ್ ಕೊಡ್ಡಿಕರ್,ರೋಹನ್, ಸುಮಂತ ಮೇತ್ರೆ,ಹಣಮಂತ ಸೂರ್ಯವಂಶಿ, ಅಶೋಕ ದರ್ಬಾರೆ, ದಯಾನಂದ ಮೇತ್ರೆ, ಬಾಬುರಾವ ಮಣಗೆರೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಬಿಡಿಎಗೆ ಎಂ.ಎ. ಸಮಿ ಸೇರಿ ನಾಲ್ವರ ನಾಮ ನಿರ್ದೇಶನ

ಬೀದರ. ಜು. 25 : ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರಾಗಿ ನಗರದ ಎಂ.ಎ. ಸಮಿ ಸೇರಿ ನಾಲ್ವರನ್ನು ರಾಜ್ಯ ಸರ್ಕಾರ ನಾಮ ನಿರ್ದೇಶನ ಮಾಡಿದೆ.

ಜನವಾಡದ ಭಗವಾನರಾವ್ ಪಾಂಡ್ರೆ,ಬೀದರನ ಮಂಗಲಪೇಟ್‌ನ ಎಲಿಜಬೆತ್ ಜಯಸೂರ್ಯ ಹಾಗೂ ಭೀಮನಗರದ ವಿನೋದಕುಮಾರ ಗಣಪತರಾವ್ ನಾಮ ನಿರ್ದೇಶನಗೊಂಡ ಇವರು ಮೂವರು.



ನಗರಾಭಿವೃದ್ಧಿ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಲತಾ ಕೆ. ಈ ಕುರಿತು ಆದೇಶ ಹೊರಡಿಸಿದ್ದಾರೆ.

ಎಂ.ಎ. ಸಮಿ ಅವರು ಜಿಲ್ಲೆಯ ಕಾಂಗ್ರೆಸ್ ಹಿರಿಯ ಮುಖಂಡರಲ್ಲೊಬ್ಬರಾಗಿದ್ದಾರೆ. ಸದ್ಯ

ಪಕ್ಷದ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿಯಾಗಿದ್ದಾರೆ. ಉಳಿದವರೂ ಪಕ್ಷದ ವಿವಿದ ಹುದ್ದೆಗಳಲ್ಲಿದ್ದಾರೆ.

# ಮಹಿಳಾ ಸ್ವಸಹಾಯ ಗುಂಪುಗಳ ಆರ್ಥಿಕ ಬಲವರ್ಧನೆಗೆ ಮತ್ಸ್ಯ ಸಂಜೀವಿನಿ ಯೋಜನೆ ಸಹಕಾರಿ– ಸಿಇಓ ವರ್ಣಿತ್ ನೇಗಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮೀನು ಕೃಷಿ ಕೈಗೊಳ್ಳಲು ಮತ್ಸ್ಯ ಸಂಜೀವಿನಿ ಯೋಜನೆಯುಮಹಿಳಾಸ್ವಸಹಾಯ ಗುಂಪುಗಳ ಸದಸ್ಯರಿಗೆ ಆರ್ಥಿಕ ಬಲವರ್ಧನೆಗಾಗಿ ತುಂಬಾ ಸಹಕಾರಿಯಾಗಲಿದೆ ಎಂದು ಕೊಪ್ಪಳ ಜಿಲ್ಲಾ ಪಂಚಾತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಹೇಳಿದರು.



ಅವರು ಶುಕ್ರವಾರ ಕೊಪ್ಪಳ ಜಿಲ್ಲಾ ಪಂಚಾಯತ್ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಜಿ.ಪಂ ಹಾಗೂ ಮೀನುಗಾರಿಕೆ ಇಲಾಖೆಗಳ ಸಹಯೋಗದಲ್ಲಿ ಮತ್ಸ್ಯ ಸಂಜೀವಿನಿ ಯೋಜನೆಯಡಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ಹಮ್ಮಿಕೊಂಡಿದ್ದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಮತ್ಸ್ಯಸಂಜೀವಿನಿ ಯೋಜನೆಯು ಕರ್ನಾಟಕದಲ್ಲಿ ಇದೊಂದು ಹೊಸ ಪ್ರಯೋಗವಾಗಿದ್ದು, ಈ ಯೋಜನೆಯಡಿಯಲ್ಲಿ ಕೆಲ ಜಿಲ್ಲೆಗಳಲ್ಲಿ ಹೆಚ್ಚು ಸಮಯದವರೆಗೆ ನೀರಿರುವಂತಹ ಕೆರೆಗಳಲ್ಲಿ ಈಗಾಗಲೇ ಕೈಗೊಂಡಿರುವ ಮೀನು ಕೃಷಿಯು ಯಶಸ್ವಿಯಾಗಿದೆ. ಈ ಯೋಜನೆಯನ್ನು ಮೀನುಗಾರಿಕೆ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಎನ್.ಆರ್.ಎಲ್.ಎಂ. ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ.

ಕೊಪ್ಪಳ ಜಿಲ್ಲೆಯಲ್ಲಿರುವ ಕೆರೆಗಳಲ್ಲಿ ಮಳೆಗಾಲದ ನಂತರವೂ 6 ತಿಂಗಳುಗಳ ಕಾಲ ನೀರು ಸಂಗ್ರಹವಾಗಿರುವಂತಹ ಸುಮಾರು 15 ಕೆರೆಗಳನ್ನು ಗುರುತಿಸಿದ್ದು, ಅಂತಹ ಕೆರೆಗಳಲ್ಲಿ ಮತ್ಸ್ಯ ಸಂಜೀವಿನಿ ಯೋಜನೆಯಡಿ ಮೀನು ಕೃಷಿಯನ್ನು ಕೈಗೊಳ್ಳಲು ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ಕೆರೆಗಳ ಗುತ್ತಿಗೆ ನೀಡಲು ಅವಕಾಶವಿದ್ದು, ಇದರಿಂದ ಗ್ರಾಮೀಣ ಭಾಗದಲ್ಲಿರುವ ಸ್ವಸಹಾಯ ಸಂಘದ ಗುಂಪಿನ ಸದಸ್ಯರಿಗೆ ಆರ್ಥಿಕವಾಗಿ ಸಬಲೀಕರಣವಾಗಲಿದೆ ಎಂದರು.

ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರಿಗೆ ಕೆರೆಗಳಲ್ಲಿ ಮೀನು ಮರಿಗಳನ್ನು ಬಿಟ್ಟು, ಅವುಗಳ ಪಾಲನೆ ಮತ್ತು ಮಾರಾಟ ಮಾಡಿ, ಯಾವ ರೀತಿ ಲಾಭಗಳಿಸಬೇಕೆಂಬ ಮಾಹಿತಿ ನೀಡಲು ಮೀನುಗಾರಿಕೆ ಇಲಾಖೆಯಿಂದ ಇಂದು ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಮೀನುಗಾರಿಕೆಗೆ ಸರ್ಕಾರದ ವಿವಿಧ ಯೋಜನೆಗಳಡಿ ಸಾಲ, ಸಹಾಯಧನ ಮತ್ತು ಹಲವು ಸೌಲಭ್ಯಗಳಿದ್ದು, ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು. ಇದರ ಜೊತೆಗೆ ಗ್ರಾಮೀಣಾಭಿವೃದ್ಧಿ ಇಲಾಖೆಯಿಂದಲೂ ನಿಮಗೆ ಅಗತ್ಯ ಸಹಕಾರ ನೀಡಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ವಿಜಯನಗರ ಜಿಲ್ಲೆಯ ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಮಲ್ಲೇಶ ನಾಯಕ ಅವರು ಇಲಾಖೆ ಯೋಜನೆಗಳು ಹಾಗೂ ಸಾಲ ಸೌಲಭ್ಯಗಳ ಕುರಿತು ಮಹಿಳಾ ಸ್ವಸಹಾಯ ಸಂಘದ ಸದಸ್ಯರಿಗೆ ವಿವರವಾದ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಪ್ರಕಾಶ ವಿ., ಜಂಟಿ ಕೃಷಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್., ಕೊಪ್ಪಳ ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಶ್ರೀನಿವಾಸ ಕುಲಕರ್ಣಿ, ಪಶು ಇಲಾಖೆ ಉಪನಿರ್ದೇಶಕ ಡಾ. ಪಿ.ಎಂ. ಮಲ್ಲಯ್ಯ, ಕೊಪ್ಪಳ ಮೀನಿಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ಬಸವರಾಜ ಪಾಟೀಲ್, ಗಂಗಾವತಿ ಆನಂದ ಪಾಟೀಲ್, ಕೃಷಿ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆಯ ಉಪಾಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತನ ಓಂಬುಡ್ಸ್‌ಮನ್ ವೀರಣ್ಣ ಕಮ್ತಾರ, ಎನ್.ಆರ್.ಎಲ್.ಎಂ ಘಟಕದ ಅಂಬಣ್ಣ ಹಾಗೂ ಮೀನುಗಾರಿಕೆ ಇಲಾಖೆಯ ಇತರೆ ಅಧಿಕಾರಿ, ಸಿಬ್ಬಂದಿಗಳು ಮತ್ತು ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ವ್ಯಸನ ಮುಕ್ತ ದಿನಾಚರಣೆ ಅಚ್ಚುಕಟ್ಟಾಗಿ ಆಚರಿಸಿ– ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಮಹಾಂತ ಶಿವಯೋಗಿ ಸ್ವಾಮೀಜಿ ಅವರ ಜನ್ಮ ದಿನಾಚರಣೆ ಅಂಗವಾಗಿ ಪ್ರತಿ ವರ್ಷ ಆಗಸ್ಟ್ 1 ರಂದು ಆಚರಿಸುವ ವ್ಯಸನ ಮುಕ್ತ ದಿನಾಚರಣೆಯನ್ನು ಜಿಲ್ಲಾ ಕೇಂದ್ರದಲ್ಲಿ ಮತ್ತು ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿ ತಹಶಿಲ್ದಾರರ ನೇತೃತ್ವದಲ್ಲಿ ಈ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಚರಣೆ ಮಾಡಬೇಕೆಂದು ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಹೇಳಿದರು.



ಅವರು ಬುಧವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಆಗಸ್ಟ್ 1 ರಂದು ಡಾ. ಮಹಾಂತ ಶಿವಯೋಗಿ ಜನ್ಮ ದಿನಾಚರಣೆ ಅಂಗವಾಗಿ ಆಚರಿಸುವ ವ್ಯಸನಮುಕ್ತ ದಿನಾಚರಣೆ–ಯ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಮಹಾಂತ ಶಿವಯೋಗಿಗಳು ಜನರ ದುಶ್ಚಟಗಳನ್ನು ಬಿಡಿಸಲು ಅವರು ಜೋಳಿಗಿ ಹಿಡಿದು ಅದರಲ್ಲಿ ಎಲ್ಲಾ ಕೆಟ್ಟ ಚಟಗಳನ್ನು ಹಾಕಿ ಎಂದು ಜನರಿಗೆ ಹೇಳುವ ಮೂಲಕ ಅವರನ್ನು ದುಶ್ಚಟಗಳಿಂದ ಮುಕ್ತರನ್ನಾಗಿ ಮಾಡಿ, ವ್ಯಸನ ಮುಕ್ತ ಆಂದೋಲನದ ಹರಿಕಾರರಾದರು. ಇಂತಹ ಮಹನೀಯರ ಜಯಂತಿ ಕಾರ್ಯಕ್ರಮ ಎಲ್ಲರೂ ಸೇರಿ ಆಚರಿಸುವ ಮೂಲಕ ಸಮಾಜಕ್ಕೆ ಒಂದು ಒಳ್ಳೆಯ ಸಂದೇಶ ಹೋಗಬೇಕಿದೆ ಎಂದರು.

ಕಾಲೇಜುಗಳ ಮಕ್ಕಳು ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸೇರುವಂತೆ ನೋಡಿಕೊಳ್ಳಬೇಕು. ಮಹಾಂತ ಶಿವಯೋಗಿಗಳ ಕುರಿತು ಮಾತನಾಡುವ ಒಳ್ಳೆಯ ಉಪನ್ಯಾಸಕರನ್ನು ಕರೆಸಿ ಅವರ ವಿಚಾರಗಳನ್ನು ಯುವ ಪೀಳಿಗೆಗೆ ತಿಳಿಸುವ ಕೆಲಸ ಮಾಡಬೇಕು. ಮಧ್ಯಪಾನದಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಜನರಿಗೆ ತಿಳಿ ಹೇಳುವುದು ಇಂದಿನ ದಿನಮಾನಗಳಲ್ಲಿ ಬಹಳ ಅವಶ್ಯಕತೆ ಇದೆ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಕೃಷ್ಣಮೂರ್ತಿ ದೇಸಾಯಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಗದೀಶ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಶ್ರೀಶೈಲ್ ಬಿರಾದಾರ, ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಸುರೇಶ ಜಿ. ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಇಂದು ಗ್ರೂಪ್ ಬಿ ಹುದ್ದೆಗಳ ಸ್ವರ್ಧಾತ್ಮಕ ಪರೀಕ್ಷೆ: ನಿಷೇದಾಜ್ಞೆ ಜಾರಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಜ್ಯದ ವಿವಿಧ ಇಲಾಖೆಗಳಲ್ಲಿನ ಗ್ರೂಪ್ ಬಿ ವೃಂದದ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳು ಜುಲೈ 26 ರಂದು ಮಧ್ಯಾಹ್ನ 2 ರಿಂದ ಸಂಜೆ 4 ಗಂಟೆಯವರೆಗೆ ಕೊಪ್ಪಳ ಜಿಲ್ಲೆಯ 3 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷೆಗಳು ಸುಗಮ ಹಾಗೂ ಶಾಂತಿಯುತವಾಗಿ ನಡೆಯುವ ಉದ್ದೇಶದಿಂದ ಪರೀಕ್ಷಾ ಕೇಂದ್ರದ ಸುತ್ತಲಿನ 200ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಸುರೇಶ ಬಿ ಇಟ್ನಾಳ ಅವರು ಆದೇಶ ಹೊರಡಿಸಿದ್ದಾರೆ.

*ಪರೀಕ್ಷಾ ಕೇಂದ್ರಗಳ ವಿವರ:* ಕೊಪ್ಪಳ ನಗರದ ಸಾರ್ವಜನಿಕ ಮೈದಾನದ ಹತ್ತಿರದ ಸರ್ಕಾರಿ ಬಾಲಕಿಯರ ಪಿ.ಯು ಕಾಲೇಜು, ಕೊಪ್ಪಳದ ಅಶೋಕ್ ವೃತ್ತದ ಬಳಿಯ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಜವಾಹರ ರಸ್ತೆ ಹತ್ತಿರದ ಸರ್ಕಾರಿ ಬಾಲಕರ ಪಿ.ಯು ಕಾಲೇಜು ಸೇರಿ ಈ 3 ಪರೀಕ್ಷಾ ಕೇಂದ್ರಗಳಲ್ಲಿ ವಿವಿಧ ಇಲಾಖೆಗಳ ಗ್ರೂಪ್ ಬಿ ವೃಂದದ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳು ಜುಲೈ 26 ರಂದು ಮಧ್ಯಾಹ್ನ 2 ರಿಂದ ಸಂಜೆ 4 ಗಂಟೆಯವರೆಗೆ ನಡೆಯಲಿವೆ.

ಪರೀಕ್ಷಾ ಕೇಂದ್ರದಲ್ಲಿ ಯಾವುದೇ ರೀತಿಯ ಅಕ್ರಮ, ಅವ್ಯವಹಾರ ನಡೆಯದಂತೆ ತಡೆಗಟ್ಟಲು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ 2023ರ ಕಲಂ 163ರ ಅನ್ವಯ ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಅಂತರದ ಪ್ರದೇಶದಲ್ಲಿ ವಿವಿಧ ಷರತ್ತಿಗೆ ಒಳಪಟ್ಟು ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ನಿಷೇಧಿತ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಎಸ್.ಟಿ.ಡಿ., ಮೊಬೈಲ್ ಪೇಜರ್, ಝುರಾಕ್ಸ್, ಟೈಪಿಂಗ್ ಮುಂತಾದವುಗಳನ್ನು ನಿಷೇಧಿಸಲಾಗಿದೆ. ಪರೀಕ್ಷೆಯಲ್ಲಿ ಪ್ರವೇಶ ಪತ್ರ ಹೊಂದಿದ ಅಭ್ಯರ್ಥಿಗಳು ಹಾಗೂ ನಿಯೋಜಿತ ಶಿಕ್ಷಕರನ್ನು, ಜಾಗೃತ ದಳದವರನ್ನು ಹೊರತುಪಡಿಸಿ ಇನ್ನೂಳಿದವರಿಗೆ ಪರವಾನಿಗೆ ಇಲ್ಲದೇ ಪರೀಕ್ಷಾ ಕೇಂದ್ರದಲ್ಲಿ ಪ್ರವೇಶ ಮಾಡುವುದನ್ನು ನಿಷೇಧಿಸಲಾಗಿದೆ. ನಕಲು ಮಾಡುವ ಸಾಮಗ್ರಿಗಳನ್ನು ಹಾಗೂ ಹೊರಗಿನಿಂದ ಕಾಪಿ ಬರೆದು ಪರೀಕ್ಷಾ ಕೇಂದ್ರಗಳಲ್ಲಿ ಪೂರೈಸುವುದನ್ನು ನಿರ್ಬಂಧಿಸಲಾಗಿದೆ. 200 ಮೀಟರ್ ಪರೀಕ್ಷಾ ಕೇಂದ್ರಗಳ ಸುತ್ತಲೂ ಜನರು ಮಾರಕಾಸ್ತ್ರಗಳನ್ನು ಹಿಡಿದು ತಿರುಗಾಡುವದನ್ನು ನಿಷೇಧಿಸಿದೆ. ಈ ಆದೇಶವು ಮದುವೆ, ಶವ ಸಂಸ್ಕಾರಗಳು ಹಾಗೂ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳಿಗೆ ಅನ್ವಯವಾಗುವದಿಲ್ಲ ಎಂದು ಜಿಲ್ಲಾಧಿಕಾರಿಗಳು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

# ರಂಗನಾಥ ಮುತ್ಯ 18 ವರ್ಷದ ಮೌನವ್ರತಚರಣೆ

ಮಲ್ಲಮ್ಮ ನುಡಿ ವಾರ್ತೆ

ಶಹಾಪೂರ ತಾಲೂಕಿನಲ್ಲಿ ಬೆನಕನಹಳ್ಳಿ ಗ್ರಾಮದ ಆರಾಧ್ಯ ದೈವ ಹಾಗೂ ತಪಸ್ವಿಗಳಾದ ಶ್ರೀರಂಗನಾಥ ದೇವರ ಹೆಸರಿನಲ್ಲಿ ತಮ್ಮ ಮೌನಾರಥವನ್ನು ಶ್ರೀ ವೆಂಕಣ್ಣ ಗುರುಗಳು ಅವರು ಮೌನ ವ್ರತ ಕುಳಿತಿದ್ದಾರೆ.



ದಿನಾಂಕ 24/07/2025 ರಿಂದ 41 ದಿನಗಳ ಕಾಲ ಮೌನವ್ರತ ಆಚರಿಸುತ್ತಿದ್ದಾರೆ.

ತಮ್ಮ ಭಕ್ತರಿಗೆ ಒಳಿತುಗಾಗಿ ಹಾಗೂ ತಮ್ಮ ಶಕ್ತಿ ವೃದ್ಧಿಗಾಗಿ ಬಂದಿರುವ ಭಕ್ತರಿಗೆ ಕೋರಿಕೆಯ ಬವಣೆಯನ್ನು ತುಂಬಿಸುವ ಶಕ್ತಿ ಇವರದಾಗಿದೆ.

ಸುಮಾರು 18 ವರ್ಷಗಳ ಕಾಲ ಮೌನವೃತ್ತ ಆಚರಿಸುತ್ತ ಜಿಲ್ಲಾಧ್ಯಂತ ತಮ್ಮದೇ ಆದ ಭಕ್ತರಿಗೆ ಬೇಡಿದ ವರವನ್ನು ನೀಡುತ್ತಾ ಭಕ್ತರಿಗೆ ಸ್ವಾಮಿಗಳಾಗಿ ಸಮಾಜಕ್ಕೆ ನೀಡುವ ತಮ್ಮದೇ ಆದ ಕೊಡುಗೆ ನೀಡುತ್ತಾ ಭಕ್ತರಿಗೆ ಒಳ್ಳೆಯ ಸನ್ಮಾರ್ಗ ಶಕ್ತಿ ತುಂಬತ ಬಂದಿರುವ ರಂಗನಾಥ ಮುತ್ಯ ಭಕ್ತರ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

18ನೇ ವರ್ಷದ ಮೌನ ರಥವನ್ನು ಜಿಲ್ಲಾಧ್ಯಂತ ಭಕ್ತರು ಹಾಗೂ ಬೆನಕನಹಳ್ಳಿ ಗ್ರಾಮಸ್ಥರು ಸಬ್ಭಕ್ತಿಯಿಂದ ಮೌನವ್ರತಕ್ಕ ಪೂಜಾ ಕಾರ್ಯಕ್ರಮವನ್ನು ನೆರವೇರಿಸಿದರು. ಸುಮಾರು ವರ್ಷಗಳಿಂದ ರಂಗನಾಥ ಗುರುಗಳ ಹತ್ತಿರ ಬಂದು ಹಲವಾರು ಸಮಸ್ಯೆಗಳಿಂದ ಬರುತ್ತಿರುವ ನಾನು ಇಂದಿಗೂ ಸಮಾಜದಲ್ಲಿ ಒಳ್ಳೆಯ ರೀತಿಯಿಂದ ಬದುಕುವುದಕ್ಕೆ ಒಳ್ಳೆ ಸನ್ಮಾರ್ಗ ಹಾಗೂ ಒಳ್ಳೆ ವಿಚಾರಗಳನ್ನು ತುಂಬುತ್ತಾ ನನ್ನ ಮನೆಗೆ ಹಾಗೂ ನನ್ನ ಕುಟುಂಬದವರಿಗೆ ಒಳಿತು ಮಾಡಿದ ಆ ದೈವ ಇವರಾಗಿದ್ದಾರೆ.

## ಸಹಕಾರಿಗಳ ನೋಂದಣಿ ಸಮಾಪನೆ: ಆಕ್ಷೇಪಣೆ ಸಲ್ಲಿಸಲು 15ದಿನ ಕಾಲ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜುಲೈ.25–ಕರ್ನಾಟಕ ಸೌಹಾರ್ದ ಕಾಯ್ದೆ 1997 ರಲ್ಲಿ ನೊಂದಣಿಯಾದ ಕೆಲವು ಸಹಕಾರಿಗಳ ನೊಂದಣಿಯನ್ನು ಸಮಾಪನೆಗೊಳಿಸಲಾಗಿದೆ. ಇವುಗಳನ್ನು ಸಮಾಪನೆ ಪೂರ್ವದಲ್ಲಿ ಆಕ್ಷೇಪಣೆಗಳು ಇದ್ದಲ್ಲಿ ಸೌಹಾರ್ದ ಸಹಕಾರಿಗಳ ಸಹಾಯಕ ನಿಬಂಧಕರು, ಬೀದರ ಉಪ ವಿಭಾಗ, ಬೀದರ ಕಛೇರಿಗೆ 15 ದಿನಗೊಳಗಾಗಿ ಆಕ್ಷೇಪಣೆ ಸಲ್ಲಿಸಲು ಸಹಕಾರ ಸಂಘಗಳ ಸಹಾಯಕ ನಿಬಂಧಕರವರ ಕಾರ್ಯಾಲಯ ಬೀದರ, ಉಪ ವಿಭಾಗ ಬೀದರ ಕಚೇರಿಯ ಪ್ರಕಟಣೆಯಲ್ಲಿ ತಿಳಿಸಿದೆ.

ಸಹಕಾರ ಸಂಘಗಳ ಸಹಾಯಕ ನಿಬಂಧಕರು, ಬೀದರ ಉಪ ವಿಭಾಗ ಬೀದರ ಈ ಕಛೇರಿಯಲ್ಲಿ ನೊಂದಣಿಯಾಗಿರುವ ಸೌಹಾರ್ದ ಸಹಕರಿಗಳಾದ ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತ ಚಿಟ್ಟಗುಪ್ಪ ಜಿಲ್ಲೆ ಬೀದರ್ , ಶಾಂಭವಿ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತ ಕುಂಬಾವಾಡ ರಸ್ತೆ ಗಣೇಶ್ ನಗರ್ ಬೀದರ್, ಗ್ರಾಮ ವಿಕಾಸ ಸೌಹಾರ್ದ ಪತ್ತಿನ ಸಹಕಾರಿ ನಿಯಮಿತ ಸಸ್ತಾಪುರ್ ಬಸವಕಲ್ಯಾಣ ತಾಲೂಕ ಬಸವಕಲ್ಯಾಣ ಜಿಲ್ಲಾ ಬೀದರ್, ಶ್ರೀನಿಧಿ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತ ಒಂದನೇ ಮಹಡಿ ರವಿ ಜೈ ಬಿಲ್ಡಿಂಗ್ ಟಿವಿಎಸ್ ಶೋರೂಮ್ ಹತ್ತಿರ ಸಂತೋಷ್ ಟಾಕೀಸ್ ಎದುರು ಔರಾದ್ ಬಿ ತಾಲೂಕು ಔರಾದ್ ಜಿಲ್ಲಾ ಬೀದರ್, ಶ್ರೀ ಸಂತ ಸೇನಾ ಸೌಹಾರ್ದ ಪತ್ತಿನ ಸಹಕಾರಿ ನಿಯಮಿತ ಮೋತಿ ಬಜಾರ್ ಗಾಂಧಿ ಗಂಜ್ ಬೀದರ್, ಭಾರತ ಪತ್ತಿನ ಸೌಹಾರ್ದ ಸಹಕಾರಿ ನಿಯಮಿತ ಬೀದರ್ ತಾಲೂಕ ಮತ್ತು ಜಿಲ್ಲಾ ಬೀದರ್, ಶ್ರೀ ಬಸವೇಶ್ವರ ವಿವಿದ್ದ ದೇಶ ಸೌಹಾರ್ದ ಸಹಕಾರಿ ನಿಯಮಿತ ಅಂಗಡಿ ಸಂಖ್ಯೆ 3/6 ಮೇಂಗ ಕಾಂಪ್ಲೆಕ್ಸ್ ಬೆಮ್ಮಳಖೇಡ ತಾಲೂಕ ಚಿಟ್ಟಗುಪ್ಪ ಜಿಲ್ಲಾ ಬೀದರ್ ಈ ಸಹಕಾರಿಗಳ ನೊಂದಣಿಯನ್ನು ಸಮಾಪನೆಗೊಳಿಸಲಾಗಿದೆ.

ಈ ಸೌಹಾರ್ದ ಸಹಕಾರಿ ಸದಸ್ಯರು ಸೌಹಾರ್ದ ಸಹಕಾರಿಗಳ ಲೆಕ್ಕ ಪರಿಶೋಧನೆ ನಡೆಸಿರುವುದಿಲ್ಲ, ಸಭೆಗಳು ಜರುಗಿಸಿರುವುದಿಲ್ಲ ಮತ್ತು ಪ್ರತಿ ವರ್ಷ ವರದಿಗಳು ಸಲ್ಲಿಸಲಾರದೇ ಇರುವುದರಿಂದ ಸ್ಥಗೀತಗೊಂಡಿರುವುತ್ತದೆ. ಆದ್ದ–ರಿಂದ ಇವುಗಳನ್ನು ಸಮಾಪನೆ ಗೊಳಿಸಲಾಗುತ್ತದೆ ಎಂಬ ಮಾಹಿತಿಯನ್ನು ಸೌಹಾರ್ದ ಸಹಕಾರಿಗಳ ಗಮನಕ್ಕೆ ತರಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಇಂದು ಕನ್ನಡ ಭಾಷಾ ಪರೀಕ್ಷೆ: ಪರೀಕ್ಷಾ ಕೇಂದ್ರಗಳ ಸುತ್ತಲು ನಿಷೇಧಾಜ್ಞೆ ಜಾರಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರುಜುಲೈ25–ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 13–3–2024ರಂದು ಅಧಿಸೂಚಿಸಿರುವ ವಿವಿಧ ಇಲಾಖೆಗಳ ಹೈ.ಕ.ವೃಂದದ ಗ್ರೂಪ್ ಬಿ ಹುದ್ದೆಗಳಿಗೆ ಕನ್ನಡ ಭಾಷಾ ಪರೀಕ್ಷೆಯು ರಾಯಚೂರ ತಾಲೂಕಿನ 8 ಪರೀಕ್ಷಾ ಕೇಂದ್ರಗಳಲ್ಲಿ ಜುಲೈ 26ರಂದು ನಡೆಯಲಿದೆ. ಈ ಪರೀಕ್ಷೆಯು ಸುರಕ್ಷಿತವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರಗಳ ಸುತ್ತಲು 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಆದೇಶ ಹೊರಡಿಸಿದ್ದಾರೆ. ಈ ಪರೀಕ್ಷಾ ಕೇಂದ್ರಗಳ ಸುತ್ತಲಿನ ಎಲ್ಲಾ ಝರಾಕ್ಸ ಅಂಗಡಿಗಳನ್ನು ಮತ್ತು ಸೈಬರ್ ಕೆಫೆಗಳನ್ನು ಪರೀಕ್ಷಾ ಸಮಯದಲ್ಲಿ ಕಡ್ಡಾಯವಾಗಿ ಮುಚ್ಚುವಂತೆ ಆದೇಶಿಸಲಾಗಿದೆ.

## ಇಂದು ಗಣಕಯಂತ್ರ ಶಿಕ್ಷಣ ಪರೀಕ್ಷೆ: ನಿಷೇಧಾಜ್ಞೆ ಜಾರಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 25–: ಗಣಕಯಂತ್ರ ಶಿಕ್ಷಣ ಪರೀಕ್ಷೆಯು ಜುಲೈ 27 ರಿಂದ ಆಗಸ್ಟ್ 02ರವರೆಗೆ ಸುರಕ್ಷಿತವಾಗಿ ನಡೆಸಲು ರಾಯಚೂರ ತಾಲೂಕಿನ ಯರಮರಸ್ ಡಯಟ್‌ನ ಪರೀಕ್ಷಾ ಕೇಂದ್ರದ ಸುತ್ತಲು 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ, ನಿಷೇಧಾಜ್ಞೆ ಜಾರಿಗೊಳಿಸಿ ಮತ್ತು ಪರೀಕ್ಷಾ ಕೇಂದ್ರಗಳ ಸುತ್ತಲಿನ ಎಲ್ಲಾ ಝರಾ–ಕ್ಸ ಅಂಗಡಿಗಳನ್ನು ಮತ್ತು ಸೈಬರ್ ಕೆಫೆಗಳನ್ನು ಪರೀಕ್ಷಾ ಸಮಯದಲ್ಲಿ ಕಡ್ಡಾಯವಾಗಿ ಮುಚ್ಚುವಂತೆ ಜಿಲ್ಲಾ ದಂಡಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಆದೇಶ ಹೊರಡಿಸಿದ್ದಾರೆ.

# ಭರ್ತಿಯಾದ ಹತ್ತಿಕುಣಿ ಜಲಾಶಯ ಬಿರುಸುಗೊಂಡ ಕೃಷಿ ಚಟುವಟಿಕೆಗಳು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ತಾಲ್ಲೂಕಿನ ಹತ್ತಿಕುಣಿ ಭಾಗದ ರೈತರ ಜೀವನಾಡಿಯಾಗಿರುವ ಹತ್ತಿಕುಣಿ ಜಲಾಶಯ ಭತಿಯಾಗಿದ್ದು, ರೈತರಲ್ಲಿ ಸಂತಸ ಮೂಡಿ, ಕೃಷಿ ಚಟುವಟಿಕೆಗಳು ಬಿರುಸುಗೊಂಡಿವೆ.



ಈ ವರ್ಷ ಮುಂಗಾರು ಮಳೆ ಮುಂಚಿತವಾಗಿಯೇ ಆಗಮಿಸಿ, ಉತ್ತಮ ಮಳೆ ಸುರಿದಿರುವುದರಿಂದ ಅವಧಿಗೆ ಮುನ್ನವೇ ದಟ್ಟ ಹಸಿರುವ ಅರಣ್ಯಗಳ ಮಧ್ಯೆ ಇರುವ ಜಲಾಶಯ ಭರ್ತಿಯಾಗಿದೆ.

ಜಲಾಶಯ ಸಿಬ್ಬಂಧಿಗಳು ಪೂಜೆ ಸಲ್ಲಿಸಿ, 2 ಗೇಟ್‌ಗಳನ್ನು ತೆರೆದು ಹಳ್ಳಕ್ಕೆ ನೀರು ಬಿಟ್ಟರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ವ್ಯಾಪ್ತಿಯಲ್ಲಿ ಬರುವ ಜಲಾಶಯ 0.352 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿದ್ದು, ಹತ್ತಿಕುಣಿ, ಕಟಗಿ ಶಹಾಪೂರ, ಹೊನಗೇರಾ, ಯಡ್ಡಳ್ಳಿ, ಬಂದಳ್ಳಿ, ಚಾಮನಳ್ಳಿ, ಮುಂಡರಗಿ, ದಸರಾಬಾದ್ ಗ್ರಾಮಗಳ ರೈತರ ಸುಮಾರು 5300 ಎಕರೆ ಭೂಮಿ ನೀರಾವರಿ ಕ್ಷೇತ್ರಕ್ಕೆ ಒಳಪಡುತ್ತದೆ,

ರೈತರು ಮುಂಗಾರು ಬೆಳೆಯಾಗಿ ಭತ್ತ, ಹಿಂಗಾರು ಬೆಳೆಗಳಾಗಿ ಶೇಂಗಾ, ಜೋಳ ಭತ್ತ, ಸಜ್ಜೆ, ಹತ್ತಿ ಇನ್ನಿತರ ಬೆಳೆಗಳನ್ನು ಬೆಳೆಯುತ್ತಾರೆ, ಜಲಾಶಯ ಮೇಲ್ಭಾಗದಲ್ಲಿ ಮಳೆಯಾದರೇ, ಹೆಚ್ಚಿನ ಪ್ರಮಾಣದಲ್ಲಿ ನೀರು ಜಲಾಶಯಕ್ಕೆ ಹರಿದು ಬರುತ್ತದೆ, ಮುಂಜಾಗ್ರತಾ ಕ್ರಮವಾಗಿ ಹೆಚ್ಚುವರಿ ನೀರನ್ನು ಹಳ್ಳಕ್ಕೆ ಬಿಡಲಾಗುತ್ತದೆ, ಕಾರಣ ರೈತರು ತಮ್ಮ ಜನ–ಜಾನುವಾರುಗಳನ್ನು ಹಳ್ಳದ ಹತ್ತಿರ ಮೇಯಿಸುವದಾಗಲೀ, ಮೀನು ಹಿಡಿಯಲು, ಬಟ್ಟೆ ತೊಳೆಯಲು ಹೋಗಬಾರದು, ರೈತರ ಕೃಷಿ ಪಂಪಸೆಟ್‌ಗಳನ್ನು ಸ್ಥಳಾಂತರಿಸಬೇಕೆಂದು ಜಲಾಶಯದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಚೇತನ ಕಲಾಸ್ಕರ್ ಮನವಿ ಮಾಡಿದ್ದಾರೆ,

## ಪ್ರತಿಯೊಬ್ಬ ಮಹಿಳೆಯರು ತಮ್ಮ ಘಟಗಳನ್ನು ಸ್ಥಾಪಿಸಲು ದೃಢ ನಿರ್ಧಾರ ಕೈಗೊಂಡು ಯಶಸ್ವಿ ಉದ್ಯಮಿಗಳಾಬೇಕು: ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್

ಕಲಬುರಗಿ: ಜು,25–ಜಿಲ್ಲೆಯ ನಂದೂರು ಕೆಸರಟಗಿ ಕೈಗಾರಿಕಾ ಪ್ರದೇಶದಲ್ಲಿ ಮಹಿಳಾ ಉದ್ಯಮಿಗಳಿಗೆ ಹಂಚಿಕೆಯಾದ ಕೈಗಾರಿಕಾ ಪ್ರದೇಶದಲ್ಲಿ ಪ್ರತಿಯೊಬ್ಬ ಮಹಿಳೆಯರು ತಮ್ಮ ಘಟಕಗಳನ್ನು ಸ್ಥಾಪಿಸಲು ಧೃಡ ನಿರ್ಧಾರವನ್ನು ಕೈಗೊಂಡು ಆರ್ಥಿಕವಾಗಿ ಸಬಲರಾಗಿ ಯಶಸ್ವಿ ಉದ್ಯಮಿಗಳಾಗಬೇಕು ಎಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಕಲಬುರಗಿ ಜಿಲ್ಲೆಯ ನಂದೂರು ಕೆಸರಟಗಿ ಕೈಗಾರಿಕಾ ಪ್ರದೇಶ 2ನೇ ಹಂತದಲ್ಲಿ ಬರುವ ಮಹಿಳಾ ಪಾರ್ಕನಲ್ಲಿ ಹಂಚಿಕೆಯಾಗಿರುವ ನಿವೇಶಗಳ ಯೋಜನೆ ಅನುಷ್ಠಾನಗೊಳಿಸುವ ಬಗ್ಗೆ ಚರ್ಚಿಸಲು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರ್ಕಾರ ಗುರುತಿಸಿದ 40 ಎಕರೆ ಜಾಗದಲ್ಲಿ ಮಹಿಳೆಯರು ತಮ್ಮ ಘಟಕಗಳನ್ನು ಸ್ಥಾಪಿಸಲು ಜಿಲ್ಲಾಡಳಿತದ ವತಿಯಿಂದ ಅಗತ್ಯ ಸಹಕಾರವನ್ನು ಮತ್ತು ಉದ್ಯಮಿಗಳಿಗೆ ಬೇಕಾದ ಕೈಗಾರಿಕಾ ಪ್ರದೇಶದಲ್ಲಿ ಮೂಲಭೂತ ಸೌಕರ್ಯಗಳನ್ನು ಮತ್ತು ಅಗತ್ಯದ ಸಹಕಾರವನ್ನು ನೀಡಲಾಗುವುದು ಎಂದು ಅವರು ಹೇಳಿದರು.

2017–18 ನೇ ಸಾಲಿನಲ್ಲಿ 40 ಎಕರೆ ಸ್ಥಳದಲ್ಲಿ ಮಹಿಳೆಯರಿಗೆ ಉದ್ಯಮವನ್ನು ಪ್ರಾರಂಭಿಸಲು 230 ನಿವೇಶನ ಹಂಚಿಕೆ ಮಾಡಲಾಗಿದ್ದು, ಇಲ್ಲಿಯವರೆಗೆ ಕೇವಲ 7 ಘಟಕದಲ್ಲಿ ಮಾತ್ರ ಕಾರ್ಯನಿರ್ವಹಿಸುತ್ತಿದ್ದು, ಇನ್ನೂಳಿದ ಎಲ್ಲ ನಿವೇಶನಗಳು ಹಂಚಿಕೆದಾರರಿಗೆ ಅವರ ಕೈಗಾರಿಕೆ ಪ್ರಾರಂಭಿಸಲು ವಿವಿಧ ಕೈಗಾರಿಕೆ ಇಲಾಖೆ ಹಾಗೂ ಜಿಲ್ಲಾಡಳಿತ ವತಿಯಿಂದ ಅಗತ್ಯ ಸೌಲಭ್ಯ ನೀಡಲಾಗುವುದು ಎಂದು ಹೇಳಿದರು.

ಹಂಚಿಕೆದಾರರು ತಮ್ಮ ಕುಂದು ಕೊರತೆಗಳ ಮಾಹಿತಿಯನ್ನು ಸಭೆಯ ಗಮನಕ್ಕೆ ತಂದಾಗ ಜಿಲ್ಲಾಧಿಕಾರಿ ತಮ್ಮ ಅಹವಾಲುಗಳಿಗೆ ಸ್ಪಂದಿಸುವುದಾಗಿ ಹೇಳಿದರು.

ನಂದೂರು ಕೈಗಾರಿಕಾ ಪ್ರದೇಶದಲ್ಲಿ ನೀರಿನ ಕೊರತೆ ಬಗೆಹರಿಸಲು 5 ಬೋರ್‌ವೆಲ್‌ಗಳನ್ನು ಕೊರೆಸಲಾಗಿದೆ ಮತ್ತು ಪ್ರತಿಯೊಬ್ಬ ಉದ್ಯಮಿಗಳು ಇ –ಖಾತಾ ಮಾಡಿಸಿಕೊಳ್ಳಬೇಕು. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಅಗತ್ಯವಾದ ಪಟ್ಟಿಯನ್ನು ತಯಾರಿಸಿಕೊಂಡು ಅದನ್ನು ನಾಮಫಲಕಗಳಿಗೆ ಅಳವಡಿಸಿ ಉದ್ಯಮಿಗಳಿಗೆ ಬೇಕಾದ ಅಗತ್ಯ ಮಾಹಿತಿಯನ್ನು ನೀಡುವುದರ ಮುಖಾಂತರ ಉದ್ಯಮಿಗಳನ್ನು ಅಧಿಕಾರಿಗಳು ಪ್ರೋತ್ಸಾಹಿಸಬೇಕೆಂದು ಹೇಳಿದರು.

ಜಿಲ್ಲೆಯಲ್ಲಿಯುವ ಉದ್ಯಮಿಗಳನ್ನು ಪ್ರೋತ್ಸಾಹಿಸಲು ಕಾರ್ಯಾಗಾರ ತರಬೇತಿಗಳ ಮೂಲಕ ಅವರಿಗೆ ಉದ್ಯಮಗಳನ್ನು ಸ್ಥಾಪಿಸಲು ಅವರನ್ನು ಸಧೃಡರನ್ನಾಗಿ ಮಾಡುವ ಉದ್ದೇಶದಿಂದ ಇಂತಹ ಕಾರ್ಯಾಗಾರ ಹಮ್ಮಿಕೊಳ್ಳಲಾಗುತ್ತಿದೆ, ಜಿಲ್ಲೆಯ ಉದ್ಯಮಿಗಳೆಲ್ಲರು ಭಾಗವಹಿಸಬೇಕೆಂದು ಅವರಿಗೆ ಹೇಳಿದರು.

ಮಹಿಳೆಯರ ಸುರಕ್ಷತೆ ದೃಷ್ಠಿಯಿಂದ ಕೈಗಾರಿಕಾ ಪ್ರದೇಶದ ಸುತ್ತಲು ಬೀದಿ ದೀಪಗಳನ್ನು ಸರಿಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗುವುದು, ಮತ್ತು ಕೈಗಾರಿಕಾ ಪ್ರದೇಶದ ಸುತ್ತಲು ಅನೈತಿಕ ಮತ್ತು ಅಹಿತಕರ ಘಟನೆಗಳು ಜರುಗದಂತೆ ಪೊಲೀಸ್ ಇಲಾಖೆಯಿಂದ ಅಗತ್ಯ ಸಹಕಾರ ಪಡೆದು ಕೈಗಾರಿಕಾ ಪ್ರದೇಶದ ಸುತ್ತಮುತ್ತಲು ಬಿಟ್ ಪೊಲೀಸ್ ವ್ಯವಸ್ಥೆಯನ್ನು ಮಾಡಿ ಯಾವುದೇ ರೀತಿಯ ಅನೈತಿಕ ಮತ್ತು, ಕಾನೂನು ಬಾಹಿರ ಚಟುವಟಿಕೆಗಳು ನಡೆಯದಂತೆ ಅಗತ್ಯ ಕ್ರಮವಹಿಸಲಾಗುವುದು ಎಂದು ಹೇಳಿದರು.

ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಜಂಟಿ ನಿರ್ದೇಶಕ ಅಬ್ದುಲ್ ಅಜೀಂ ಅವರು ಮಾತನಾಡಿ, ನಂದೂರು ಕೆಸರಟಗಿ, 40 ಎಕರೆ ಕೈಗಾರಿಕಾ ಪ್ರದೇಶದದಲ್ಲಿ ಉದ್ಯಮಿಗಳು ಜಾಗವನ್ನು ಖರೀದಿಸಿ ಅಲ್ಲಿ ಯಾವುದೇ ರೀತಿಯ ಘಟಕಗಳನ್ನು ಆರಂಭ ಮಾಡದೇ ಇರುವ ಕಾರಣ ಜಿಲ್ಲೆಯಲ್ಲಿ ಉದ್ಯಮಿಗಳು ಪ್ರೋತ್ಸಾಹಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಈ ಸಭೆಯನ್ನು ಹಮ್ಮಿಕೊಂಡಿದ್ದು, ಸಭೆಗೆ ಆಗಮಿಸಿ ಉದ್ಯಮಿಗಳು ತಮ್ಮ ಉದ್ಯಮ ಸ್ಥಾಪನೆಗೆ ಬೇಕಾದ ಮೂಲಭೂತ ಸೌಕರ್ಯಗಳು ಮತ್ತು ಜಿಲ್ಲಾಢಳಿತದಿಂದ ಬೇಕಾದ ಸಹಕಾರ ಪಡೆಯಲು ಘಟಕಗಳನ್ನು ಸ್ಥಾಪಿಸಲು ಇರುವ ಸಮಸ್ಯೆಗಳು ಕುರಿತು ಜಿಲ್ಲಾ ಕೈಗಾರಿಕಾ ಇಲಾಖೆ ಗಮನಕ್ಕೆ ತಂದು ಸಮಸ್ಯೆ ಪರಿಹಾರ ಪಡೆದುಕೊಂಡು ಆರ್ಥಿಕವಾಗಿ ಸದೃಢರಾಗಿ ಯಶಸ್ವಿ ಉದ್ಯಮಿಗಳಾಬೇಕೆಂದು ಹೇಳಿದರು.

ಫರ್ನಿಚರ್ ಇಂಡಸ್ಟ್ರೀಯ ಯಶಸ್ವಿ ಉದ್ಯಮಿ ಒಬ್ಬರು ಮಾತನಾಡಿ, ನಾವು ಉದ್ಯಮದಲ್ಲಿ ಯಶಸ್ವಿಯನ್ನು ಕಾಣಬೇಕಾದರೆ ಹಲವಾರು ರೀತಿಯ ಸಮಸ್ಯೆಗಳನ್ನು ಎದುರಿಸಿ ದೃಢ ನಿಶ್ಚಯದಿಂದ ಘಟಕಗಳನ್ನು ಪ್ರಾರಂಭಿಸಿದ್ದಾಗ ಮಾತ್ರ ಯಶಸ್ವಿ ಕಾಣಲು ಸಾಧ್ಯವಿದೆ. ಬೇರೆಯವರ ಮೇಲೆ ಆರೋಪಗಳನ್ನು ಮಾಡದೇ ಘಟಕದಲ್ಲಿ ಶ್ರಮವಹಿಸಿ ಕಾರ್ಯನಿರ್ವಹಿಸಿದ್ದಾಗ ಮಾತ್ರ ಯಶಸ್ವಿ ಕಾಣಲು ಸಾಧ್ಯವಿದೆ ಎಂದು

ಇದೇ ಸಂದರ್ಭದಲ್ಲಿ ಕೆ.ಐ.ಎ.ಡಿ.ಬಿ. ಕಾರ್ಯನಿರ್ವಾಹಕ ಅಭಿಯಂತರ ಅಶೋಕ ಖಂಡ್ರೆ, ಕೈಗಾರಿಕಾ ಇಲಾಖೆಯ ಸಹಾಯಕ ನಿರ್ದೇಶಕು ನಳಿನಿ ಮಹಾಗಾಂವಕರ್ ಕೆ.ಐ.ಎ.ಡಿ.ಬಿ. ಸಹಾಯಕ ಕಾರ್ಯನಿವಾಹಕ ಅಭಿಯಂರರು ಪರಮೇಶ್ವರ, ಪಿ.ಡಿ.ಓ. ಸುರೇಖಾ ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ, ಸೇರಿದಂತೆ ಉದ್ಯಮಿಗಳು ಮತ್ತು ಜಿಲ್ಲಾಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ರಸ್ತೆಯ ಗುಂಡಿಗಳನ್ನು ಮುಚ್ಚಲು ವಿದ್ಯಾರ್ಥಿಗಳ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಜು.25– ಪಟ್ಟಣದ ಜೂನಿಯರ್ ಕಾಲೇಜ್ ಹತ್ತಿರವಿರುವ ಮುಖ್ಯ ರಸ್ತೆಯ ಮಧ್ಯದಲ್ಲಿ ತೆಗ್ಗುಗುಂಡಿಗಳನ್ನು ಬಿದ್ದು ಮಳೆಯ ನೀರು ತುಂಬಿ ಹೋಗಿರುವುದು ಚಿತ್ರದಲ್ಲಿ ಕಾಣಬಹುದು. ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಈ ರಸ್ತೆಯ ಮೇಲೆ ಓಡಾಡುಲಿಕೆ ಬಹಳಷ್ಟು ತೊಂದರೆ ಯಾಗಿದೆ ಎಂದು ವಿದ್ಯಾರ್ಥಿಗಳು ಒಬ್ಬರನೊಬ್ಬರು ಗೋಳಾಡುಕೊಳ್ಳುತ್ತಾ ಮನೆಗೆ ತೆರಳುವ ದೃಶ್ಯಗಳು ಕೂಡ ಕಂಡುಬರುತ್ತಿವೆ. ಇನ್ನು ಮುಂದೆಯಾದರು ಇತ ಕಡೆ ಸಂಬಂಧ ಸಂಬಂಧಪಟ್ಟ ಅಧಿಕಾರಿಗಳು ಗಮನ ಹರಿಸಿ ಆದಷ್ಟು ಬೇಗ ತೆಗ್ಗುಗುಂಡಿಗಳನ್ನು ಮುಚ್ಚಿ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಆಗ್ರಹಿಸಿದ್ದಾರೆ.

## ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಕಾರ್ಯದರ್ಶಿ ಚಂದ್ರಕಲಾ ಸೂಚನೆ

# ಪೌರಕಾರ್ಮಿಕರು ತಪ್ಪದೇ ಸುರಕ್ಷಾ ಪರಿಕರ ಧರಿಸಿ ಕಾರ್ಯ ನಿರ್ವಹಿಸಬೇಕು




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.25–ಜಿಲ್ಲಾವ್ಯಾಪ್ತಿಯ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಹಾಗು ಗ್ರಾಮ ಪಂಚಾಯತ್ ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಚ್ಛತಾ ಸಿಬ್ಬಂದಿ, ಕಾರ್ಮಿಕರು, ಪೌರಕಾರ್ಮಿಕರು ತಪ್ಪದೇ ಸುರಕ್ಷಾ ಪರಿಕರಗಳನ್ನು ಧರಿಸಿ ಕಾರ್ಯನಿರ್ವಹಿಸಬೇಕು ಎಂದು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಕಾರ್ಯದರ್ಶಿ ಚಂದ್ರಕಲಾ ಅವರು ಹೇಳಿದರು.

ನಗರದ ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಚ್ಛತಾ ಸಿಬ್ಬಂದಿ, ಕಾರ್ಮಿಕರು, ಪೌರಕಾರ್ಮಿಕರು ಮತ್ತು ಗುರುತಿಸಿದ ಮ್ಯಾನ್ಯುವಲ್ ಸ್ಕ್ಯಾನ್‌ವೆಂಜರ್ ಮತ್ತು ಮೃತಪಟ್ಟ ಮ್ಯಾನ್ಯುವಲ್ ಸ್ಕ್ಯಾನ್‌ವೆಂಜರ್ ಅವಲಂಬಿತರೊಂದಿಗೆ ಏರ್ಪಡಿಸಿದ್ದ ನೇರ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪೌರಕಾರ್ಮಿಕರು ತಾವು ಕಸದ ಜೊತೆಯೇ ಕಾರ್ಯನಿರ್ವಹಿಸುತ್ತೀರಿ; ಸ್ವಚ್ಛತೆ ಕೈಗೊಳ್ಳುವ ಸ್ಥಳಗಳಲ್ಲಿ ಚೂಪಾದ ವಸ್ತು, ವಿಷಕಾರಿ ವಸ್ತುಗಳು ಕಂಡುಬರುತ್ತವೆ. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಪೌರಕಾರ್ಮಿಕರು ಸುರಕ್ಷತಾ ಪರಿಕರ ಧರಿಸದೇ ಕಾರ್ಯನಿರ್ವಹಿಸುವುದು ಕಂಡುಬಂದಿದ್ದು, ಹಾಗಾಗಿ ತಮ್ಮ ಸುರಕ್ಷತೆಗಾಗಿ ಮತ್ತು ಆರೋಗ್ಯ ಹಿತದೃಷ್ಟಿಯಿಂದ ತಪ್ಪದೇ ಸುರಕ್ಷತಾ ಪರಿಕರಗಳನ್ನು ಧರಿಸಬೇಕು ಎಂದು ಸೂಚಿಸಿದರು.

ಮಹಾನಗರ ಪಾಲಿಕೆ, ನಗರಸಭೆ ಮತ್ತು ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರು, ಸ್ವಚ್ಛತಾ ಕಾರ್ಮಿಕರಿಗೆ ಸರ್ಕಾರಿ ಸೌಲಭ್ಯಗಳು ಸಕಾಲದಲ್ಲಿ ತಲುಪುತ್ತಿದೆಯೇ ಎಂಬುದರ ಮೇಲುಸ್ತುವಾರಿ ಪರಿಶೀಲನೆ ಕೈಗೊಳ್ಳುವುದು ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಮಹಾನಗರ ಪಾಲಿಕೆಯ ಪೌರಕಾರ್ಮಿಕರ ಮುಖಂಡರಾದ ರತ್ನಮ್ಮ ಅವರು ಮಾತನಾಡಿ, ಪಾಲಿಕೆ ವ್ಯಾಪ್ತಿಯ ಪೌರ ಕಾರ್ಮಿಕರ ಮಕ್ಕಳ ಉನ್ನತ ಶಿಕ್ಷಣಕ್ಕಾಗಿ ಲೋನ್ ವ್ಯವಸ್ಥೆ ನೀಡಬೇಕು. ಅತಿಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ವಿತರಣೆ ಮಾಡಬೇಕು ಮತ್ತು ಕಳೆದ ನಾಲ್ಕು ತಿಂಗಳಿಂದ ವೇತನ ಪಾವತಿಯಾಗಿಲ್ಲ ಈ ಕುರಿತು ಕ್ರಮ ಕೈಗೊಳ್ಳಬೇಕು ಎಂದು ಕಾರ್ಯದರ್ಶಿಯವರ ಗಮನಕ್ಕೆ ತಂದರು.

ಇನ್ನೋರ್ವ ಪೌರಕಾರ್ಮಿಕರಾದ ಕಲಾವತಿ ಅವರು ಮಾತನಾಡಿ, ಪಾಲಿಕೆಯಿಂದ ಎಲ್ಲಾ ಸುರಕ್ಷಿತ ಪರಿಕರಗಳನ್ನು ಕಾಲ–ಕಾಲಕ್ಕೆ ವಿತರಿಸಲಾಗುತ್ತಿದೆ. ಆದರೆ ವೇತನ ಪಾವತಿ ಕುರಿತಂತೆ ವಿಳಂಬವಾಗುತ್ತಿದೆ ಎಂದು ಪ್ರಸ್ತಾಪಿಸಿದರು. ಹೊಸದಾಗಿ ನೇಮಕವಾಗುವ ಪೌರಕಾರ್ಮಿಕರಿಗೆ ವೇತನ ವಿಳಂಬವಾಗುತ್ತದೆ. ಈ ಕುರಿತು ಪಾಲಿಕೆ ಆಯುಕ್ತರಿಗೆ ನಿರ್ದೇಶನ ಮಾಡಿ, ಸರ್ಕಾರಕ್ಕೆ ಪತ್ರ ಬರೆಯಲು ಸೂಚಿಸಲಾಗುವುದು ಎಂದರು.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪೌರಕಾರ್ಮಿಕರಿಗೆ ಸುಸಜ್ಜಿತ ವಿಶ್ರಾಂತಿ ಕೊಠಡಿ ಸೌಲಭ್ಯವಿಲ್ಲ ಎಂದು ಪೌರಕಾರ್ಮಿಕರು ಕಾರ್ಯದರ್ಶಿಯವರ ಗಮನಕ್ಕೆ ತಂದಾಗ, ಇದಕ್ಕೆ ಪ್ರತಿಕ್ರಿಯಿಸಿದ ಪಾಲಿಕೆ ಆಯುಕ್ತ, ಶಾಸಕರ ಅನುದಾನದಲ್ಲಿ ಮುಂದಿನ ವರ್ಷದಲ್ಲಿ ನಗರದ ಮೂರು ಭಾಗದಲ್ಲಿ ಸುಸಜ್ಜಿತ ವಿಶ್ರಾಂತಿ ಕೊಠಡಿಗಳನ್ನು ನಿರ್ಮಿಸಿಕೊಡಲಾಗುವುದು ಎಂದು ತಿಳಿಸಿದರು.

ಬಳಿಕ ನಿವೇಶನ ಮತ್ತು ವಸತಿ ನೀಡಬೇಕು ಎಂದು ಪೌರಕಾರ್ಮಿಕರು ಪ್ರಸ್ತಾಪಿಸಿದಾಗ, ನಗರದ ಹೊರವಲಯದ ಮುಂಡರಗಿ ಆಶ್ರಯ ವಸತಿ ಯೋಜನೆಯಡಿ 5000 ಮನೆಗಳು ನಿರ್ಮಾಣಗೊಳ್ಳುತ್ತಿದ್ದು, ಇದರಲ್ಲಿ 200 ಮನೆಗಳನ್ನು ಪೌರಕಾರ್ಮಿಕರಿಗಾಗಿಯೇ ಮೀಸಲಿರಿಸಲಾಗಿದೆ. ಸರ್ಕಾರದ ಈ ವಸತಿ ಸೌಲಭ್ಯ ಪಡೆಯಲು ಪೌರಕಾರ್ಮಿಕರು ಮುಂದೆ ಬರಬೇಕು ಎಂದು ಪಾಲಿಕೆ ಆಯುಕ್ತರು ತಿಳಿಸಿದರು.

ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಸಂಶೋಧನಾಧಿಕಾರಿ ಮಹಾದೇವಸ್ವಾಮಿ ಅವರು ಮಾತನಾಡಿ, ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಕಪ್ಪು ಬಣ್ಣದ ಸಮವಸ್ತ್ರ ನೀಡಿದ್ದು, ಬೆಳಿಗ್ಗೆ ಮತ್ತು ಸಂಜೆ ಸಮಯದಲ್ಲಿ ಅವರು ಕಾರ್ಯನಿರ್ವಹಿಸುತ್ತಿರುವುದು ವಾಹನ ಸವಾರರಿಗೆ ಕಾಣಿಸುವುದಿಲ್ಲ. ಇದನ್ನು ಕೂಡಲೇ ಬದಲಾಯಿಸಬೇಕು ಎಂದು ಪಾಲಿಕೆ ಆಯುಕ್ತರಿಗೆ ಸೂಚಿಸಿದರು.

ಇದೇ ವೇಳೆ ವೇತನ ಪಾವತಿ, ನೇರಪಾವತಿ, ಬೆಳಗಿನ ಉಪಾಹಾರ ವಿತರಣೆ, ಇಪಿಎಫ್ ಮತ್ತು ಇಎಸ್‌ಐ ಪಾವತಿ ಕುರಿತು ಪೌರಕಾರ್ಮಿಕರ ಜೊತೆ ಚರ್ಚಿಸಿ ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದ, ಜಿಲ್ಲಾ ಸಫಾಯಿ ಕರ್ಮಚಾರಿ ವಿಭಾಗದ ಜಿಲ್ಲಾ ಜಾಗೃತಿ ಸಮಿತಿಯ ಸದಸ್ಯ ಕಂದಕೂರು ರಾಮುಡು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ರಾಘು, ಜಿಲ್ಲಾ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ ಲಕ್ಷ್ಮಣ ಸೇರಿದಂತೆ ಪಾಲಿಕೆಯ ಪರಿಸರ ಅಭಿಯಂತರರು, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಪೌರಕಾರ್ಮಿಕರು ಉಪಸ್ಥಿತರಿದ್ದರು.

## ಜಿಲ್ಲಾ ಮಟ್ಟದ ಸಫಾಯಿ ಕರ್ಮಚಾರಿಗಳ ಜಾಗೃತಿ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಕಾರ್ಯದರ್ಶಿ ನಿರ್ದೇಶನ

# ಸಫಾಯಿ ಕರ್ಮಚಾರಿಗಳು, ಪೌರಕಾರ್ಮಿಕರಿಗೆ ಅಗತ್ಯ ಸೌಲಭ್ಯ ತಲುಪಿಸಿ: ಚಂದ್ರಕಲಾ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.25–ಜಿಲ್ಲೆಯಲ್ಲಿ ಸಫಾಯಿ ಕರ್ಮಚಾರಿಗಳು ಮತ್ತು ಪೌರಕಾರ್ಮಿಕರಿಗೆ ದೊರಕಬೇಕಾದ ಎಲ್ಲ ಸೌಲಭ್ಯಗಳನ್ನು ನೀಡಬೇಕು ಹಾಗೂ ಅವರಲ್ಲಿ ಸೌಲಭ್ಯಗಳ ಕುರಿತು ಅರಿವು ಮೂಡಿಸುವ ಕೆಲಸ ಮಾಡಬೇಕು ಎಂದು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಕಾರ್ಯದರ್ಶಿ ಚಂದ್ರಕಲಾ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಸಫಾಯಿ ಕರ್ಮಚಾರಿಗಳ ಜಾಗೃತಿ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಏಜೆನ್ಸಿಗಳು ಪೌರಕಾರ್ಮಿಕರಿಗೆ ಅಗತ್ಯವಾದ ಸಮವಸ್ತ್ರ, ಗಮ್ ಬೂಟ್, ಕೈಗವಸು, ಮಾಸ್ಕ್ ಮತ್ತು ಇತರೆ ಸುರಕ್ಷಣಾ ಪರಿಕರಗಳನ್ನು ಸಮರ್ಪಕವಾಗಿ ನೀಡಬೇಕು. ಆರೋಗ್ಯ ನಿರೀಕ್ಷಕರು ಮತ್ತು ಮೇಸ್ತ್ರಿಗಳು ಸುರಕ್ಷತಾ ಪರಿಕರಗಳನ್ನು ಧರಿಸುವಂತೆ ಪ್ರೇರೇಪಿಸಬೇಕು ಹಾಗೂ ಏಜೆನ್ಸಿಗಳು ಮತ್ತು ಪೌರಸಂಸ್ಥೆಗಳು ಧರಿಸುವುದನ್ನು ಕಡ್ಡಾಯಗೊಳಿಸಬೇಕು. ಇಲ್ಲವಾದಲ್ಲಿ ಅನೇಕ ಆರೋಗ್ಯದ ಸಮಸ್ಯೆಗಳು ಉಂಟಾಗಿ ಗಂಭೀರವಾಗಿ ಪರಿಣಮಿಸುತ್ತವೆ ಎಂದು ಎಚ್ಚರಿಕೆ ನೀಡಿದರು.

ಪೌರಕಾರ್ಮಿಕರು, ಸಫಾಯಿ ಕರ್ಮಚಾರಿಗಳ ಆರೋಗ್ಯ ಬಹಳ ಮುಖ್ಯ. ಇವರು ನಗರವನ್ನು ಸ್ವಚ್ಛಗೊಳಿಸಿದಂತೆ ತಮ್ಮ ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸಬೇಕು. ಅವರ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ನಮ್ಮೆಲ್ಲರ ಜವಾಬ್ದಾರಿ ಕೂಡ ಆಗಿದೆ ಎಂದರು.

ಪಿಎಫ್, ಇಎಸ್‌ಐ, ಕಾರ್ಮಿಕ ಇಲಾಖೆ, ಆರೋಗ್ಯ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಪೌರಕಾರ್ಮಿಕರು ಮತ್ತು ಸಫಾಯಿ ಕರ್ಮಚಾರಿಗಳಿಗೆ ದೊರಕುವ ಸೌಲಭ್ಯಗಳ ಕುರಿತು ಅರಿವು ಕಾರ್ಯಾಗಾರವನ್ನು ಹಮ್ಮಿಕೊಳ್ಳಬೇಕು ಎಂದು ಸೂಚನೆ ನೀಡಿದರು.

**ಸಿಂಗಾಪುರ ಮತ್ತು ಒಡಿಶಾ ಮಾದರಿ ವಿಶ್ರಾಂತಿ ಗೃಹ ನಿರ್ಮಿಸಲು ವಿನ್ಯಾಸ:**

ವಿದೇಶದ ಸಿಂಗಾಪುರ, ಒಡಿಶಾ ರಾಜ್ಯ ಮಾದರಿಯಲ್ಲಿ ಪೌರಕಾರ್ಮಿಕರಿಗೆ ತಮ್ಮ ಪರಿಕರಗಳನ್ನು ಇಡಲು, ಶೌಚಾಲಯ ಬಳಸಲು ಮತ್ತು ವಿಶ್ರಾಂತಿಗೆ ತುಂಬಾ ಅಚ್ಚುಕಟ್ಟಾದ ವಿಶ್ರಾಂತಿ ಗೃಹ ನಿರ್ಮಿಸಲಾಗಿದೆ. ಇದೇ ಮಾದರಿಯಲ್ಲಿ ರಾಜ್ಯದಲ್ಲೂ ನಿರ್ಮಿಸಲು ವಿನ್ಯಾಸವನ್ನು ಸದ್ಯದಲ್ಲಿ ಅಂತಿಮಗೊಳಿಸಿ ಎಲ್ಲಾ ಜಿಲ್ಲೆಗಳಿಗೂ ಕಳುಹಿಸಲಾಗುವುದು ಎಂದು ಆಯೋಗದ ಕಾರ್ಯದರ್ಶಿ ಚಂದ್ರಕಲಾ ತಿಳಿಸಿದರು.

ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಸಂಶೋಧನಾಧಿಕಾರಿ ಮಹಾದೇವಸ್ವಾಮಿ ಅವರು ಮಾತನಾಡಿ, ಪೌರಕಾರ್ಮಿಕರು, ಸಫಾಯಿ ಕರ್ಮಚಾರಿಗಳು, ಲೋಡರ್ಸ್, ಕ್ಲೀನರ್ಸ್, ವಾಹನಚಾಲಕರಿಗೆ ನಿಗದಿತ ವೇಳೆಯೊಳಗೆ ವೇತನ ಪಾವತಿಸಿ, ವೇತನ ಸ್ಲಿಪ್ ನೀಡಬೇಕು. ಪಿಎಫ್ ಮತ್ತು ಇಎಸ್‌ಐ ಮೊತ್ತ ಸರಿಯಾಗಿ ಕಟಾವಣೆಯಾಗುತ್ತಿದೆಯೇ ಎಂದು ಖಾತ್ರಿಪಡಿಸಿಕೊಳ್ಳಬೇಕು. ಮಾಸ್ಟರ್ ಆರೋಗ್ಯ ತಪಾಸಣೆ ಕಾಲ ಕಾಲಕ್ಕೆ ಮಾಡಿಸಬೇಕು. ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಹೆಲ್ತ್ ಕಾರ್ಡ್, ವೇತನ ಪ್ಯಾಕೇಜ್ ಸೌಲಭ್ಯ ದೊರೆಯುವಂತೆ ಮಾಡಬೇಕು ಎಂದು ತಿಳಿಸಿದರು.

ನೇರಪಾವತಿ ಮತ್ತು ಹೊರಗುತ್ತಿಗೆ ಕಾರ್ಮಿಕರಿಗೂ ಗೃಹಭಾಗ್ಯ ಯೋಜನೆ ಸೌಲಭ್ಯ ನೀಡಬೇಕು. ಮ್ಯಾನುಯಲ್ ಸ್ಕ್ಯಾನ್‌ವೆಂಜರ್ ಗಳ ಬಗ್ಗೆ ನಿಖರ ಮಾಹಿತಿಯನ್ನು ಸಂಗ್ರಹಿಸಲು ಮೊಬೈಲ್ ಆಪ್‌ನ್ನು ಸಿದ್ಧಪಡಿಸಲಾಗಿದ್ದು, ಸಮರ್ಪಕ ಮತ್ತು ನಿಖರ ಮಾಹಿತಿ ನೀಡಬೇಕು. ಹೀಗೆ ನೀಡಿದಾಗ ಮಾತ್ರ ಅವರಿಗೆ ದೊರಕಬೇಕಾದ ಸೌಲಭ್ಯಗಳನ್ನು ನೀಡಲು ಸಾಧ್ಯವಾಗುತ್ತದೆ ಎಂದರು.

ಕೆಕೆಆರ್‌ಟಿಸಿ ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ಕೆಲಸ ಮಾಡುತ್ತಿರುವ ಪೌರಕಾರ್ಮಿಕರಿಗೆ ನಿಗದಿತ ಕನಿಷ್ಟ ವೇತನ ಪಾವತಿಯಾಗದಿದ್ದರೆ ಅಂತಹ ಏಜೆನ್ಸಿದಾರರನ್ನು ಕಪ್ಪುಪಟ್ಟಿಗೆ ಸೇರಿಸಬೇಕು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕರಿಗೆ ತಾಕೀತು ಮಾಡಿದರು. ಸರ್ಕಾರವು ಪೌರ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚು ಒತ್ತು ನೀಡಿದೆ. ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಪೌರಕಾರ್ಮಿಕರು, ಸ್ಕ್ಯಾನ್‌ವೆಂಜರ್ ಮಕ್ಕಳಿಗೆ ಪ್ರವೇಶ ಪರೀಕ್ಷೆ ಇಲ್ಲದೆ ಪ್ರವೇಶಾತಿ ಕಲ್ಪಿಸಲು ವ್ಯವಸ್ಥೆ ಮಾಡಬೇಕು. ಪ್ರತಿಷ್ಠಿತ ಶಾಲೆಗಳಲ್ಲಿ ಉಚಿತ ಶಿಕ್ಷಣ ಪಡೆಯುವ ಸಲುವಾಗಿ ಈ ಸಮುದಾಯದ ಮಕ್ಕಳಿಗೆ ಶೇ.5ರಷ್ಟು ಸೀಟುಗಳನ್ನು ಮೀಸಲಿಡಲಾಗಿದೆ ಎಂದು ತಿಳಿಸಿದರು.

**ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ನಡೆಸಿ:**

ನವೆಂಬರ್ 07 ರಂದು ಅಂಬೇಡ್ಕರ್ ಅವರು ಶಾಲೆಗೆ ಸೇರಿದ ದಿನದ ಅಂಗವಾಗಿ ಎಸೆಸೆಲ್ಸಿ, ಪಿಯುಸಿ, ಉನ್ನತ ಶಿಕ್ಷಣ ಪಡೆದ ಪೌರಕಾರ್ಮಿಕರ ಮಕ್ಕಳನ್ನು ಗುರುತಿಸಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ನಡೆಸಬೇಕು ಎಂದು ಹೇಳಿದರು.

**ಮೂರು ತಿಂಗಳಿಗೊಮ್ಮೆ ಸಭೆ ನಡೆಸಿ:**

ಪ್ರತಿ ಮೂರು ತಿಂಗಳಿಗೊಮ್ಮೆ ಕಡ್ಡಾಯವಾಗಿ ಪೌರಕಾರ್ಮಿಕರ ಸಭೆ ಕರೆದು ಅವರ ಸಮಸ್ಯೆಗಳನ್ನು ಆಲಿಸಬೇಕು. ಅವರ ಪುನರ್ವಸತಿಗಾಗಿ ಸರ್ಕಾರ ರೂಪಿಸಿರುವ ನೀತಿ–ನಿಯಮಗಳ ಅರಿವು ಮೂಡಿಸಬೇಕು. ಅಧಿಕಾರಿಗಳು ಕಾಯ್ದೆಯನ್ವಯ ಪೌರಕಾರ್ಮಿಕರಿಗೆ ಅಗತ್ಯ ಮೂಲಸೌಲಭ್ಯಗಳನ್ನು ಸಮರ್ಪಕವಾಗಿ ತಲುಪಿಸಬೇಕು ಎಂದರು.

ಸಭೆಯಲ್ಲಿ ಮರಣಹೊಂದಿದ ಸಫಾಯಿ ಕರ್ಮಚಾರಿಗಳು, ಪೌರಕಾರ್ಮಿಕರ ವಿವಿಧ ಪ್ರಕರಣಗಳ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಸಫಾಯಿ ಕರ್ಮಚಾರಿ ವಿಭಾಗದ ಜಿಲ್ಲಾ ಮಟ್ಟದ ಜಾಗೃತಿ ಸಮಿತಿಯ ಸದಸ್ಯ ಕಂದಕೂರು ರಾಮುಡು, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಿಕಾಂತ್ ಶಿವಪುರ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದ, ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ರಾಘವೇಂದ್ರ ಗುರು ಸೇರಿದಂತೆ ವಿವಿಧ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಮತ್ತು ಪೌರಕಾರ್ಮಿಕರು ಉಪಸ್ತಿತರಿದ್ದರು.

# ಹೈಟೆಕ್ ಹಾರ್ವೆಸ್ಟರ್ ಹಬ್‌ಗಳ ಸ್ಥಾಪನೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.25–ಕೃಷಿ ಇಲಾಖೆ ವತಿಯಿಂದ ಕೃಷಿ ಚಟುವಟಿಕೆಗಳಿಗೆ ಆಧುನಿಕ ತಂತ್ರಜ್ಞಾನದ ಬೃಹತ್ ಯಂತ್ರಗಳನ್ನು ಅಳವಡಿಸಿಕೊಂಡು ಸಕಾಲದಲ್ಲಿ ಕೃಷಿ ಕಾರ್ಯಗಳನ್ನು ನೆರವೇರಿಸಲು ಹೈಟೆಕ್ ಹಾರ್ವೆಸ್ಟರ್ ಹಬ್‌ಗಳ (ಕಟಾವು ಕೇಂದ್ರಗಳು) ಸ್ಥಾಪನೆಗಾಗಿ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಕೃಷಿಯಲ್ಲಿ ಯಂತ್ರೋಪಕರಣಗಳ ಬಳಕೆ ಅಧಿಕ ಮಾಡುವ ನಿಟ್ಟಿನಲ್ಲಿ ಮತ್ತು ಕೃಷಿ ಯಂತ್ರಧಾರೆ ಕೇಂದ್ರಗಳನ್ನು ಇನ್ನಷ್ಟು ಬಲಪಡಿಸಲು, ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯನ್ನು ಅನುಷ್ಠಾನ ಮಾಡಲು ಸರ್ಕಾರದ ಆದೇಶವಾಗಿದ್ದು, ಹೈಟೆಕ್ ಹಾರ್ವೆಸ್ಟರ್ ಹಬ್‌ಗಳ (ಕಟಾವು ಕೇಂದ್ರಗಳು) ಸ್ಥಾಪನೆಗಾಗಿ ಅರ್ಹರು ಅರ್ಜಿ ಸಲ್ಲಿಸಬಹುದಾಗಿದೆ.

ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ಬೆಳೆಯ ವಿಧ ಮತ್ತು ಕಟಾವು ಅವಧಿಯ ಆಧಾರದ ಮೇಲೆ ಅಂಡಿಡುಜಂಡಿ ಮಾದರಿಯಲ್ಲಿ ಸ್ಥಾಪಿಸುವುದು. ಈ ಯಂತ್ರಗಳನ್ನು ಬಾಡಿಗೆಗೆ ನೀಡುವ ಮೂಲಕ ರೈತರು ಹೆಚ್ಚುವರಿ ಆದಾಯ ಪಡೆಯಬಹುದಾಗಿದೆ. ಹೈಟೆಕ್ ಹಾರ್ವೆಸ್ಟರ್ ಹಬ್‌ಳನ್ನು ಅನುಷ್ಠಾನ ಮಾಡಲು ಚಾಲ್ತಿಯಲ್ಲಿರುವ ಕೃಷಿ ಯಂತ್ರಧಾರೆ ಕೇಂದ್ರಗಳು, ಸೇವಾದಾರ ಸಂಸ್ಥೆಗಳು, ವೈಯಕ್ತಿಕ ಫಲಾನುಭವಿಗಳು ಹಾಗೂ ನೊಂದಾಯಿತ ಸಂಘ ಸಂಸ್ಥೆಗಳು (ಎಫ್‌ಪಿಒಗಳನ್ನೊಳಗೊಂಡಂತೆ) ಭಾಗವಹಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಸಾಮಾನ್ಯ ವರ್ಗದ ರೈತರಿಗೆ ಗರಿಷ್ಠ ಶೇ.50 ರಂತೆ (ಗರಿಷ್ಟ ರೂ.40 ಲಕ್ಷ ಸಹಾಯಧನ), ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ರೈತರಿಗೆ ಗರಿಷ್ಠ ಶೇ.70ರಂತೆ ಹಾಗೂ ಸಂಘ–ಸಂಸ್ಥೆಗಳಿಗೆ (ಚಾಲ್ತಿಯಲ್ಲಿರುವ ಕೃಷಿ ಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆ/ ಎಫ್‌ಪಿಒ ಗಳನ್ನೊಳಗೊಂಡಂತೆ) ಗರಿಷ್ಠ ಶೇ.70 ರಂತೆ (ಗರಿಷ್ಟ ರೂ.50 ಲಕ್ಷ) ಸಹಾಯಧನ ಪಡೆಯಲು ಅವಕಾಶವಿದೆ.

ಸಂಘ–ಸಂಸ್ಥೆಗಳು (ಎಫ್‌ಪಿಒ ಗಳನ್ನೊಳಗೊಂಡಂತೆ), ಟ್ರಸ್ಟಳು ಮಾತ್ರ ಕಂಬೈಂಡ್ ಹಾರ್ವೆಸ್ಟರ್ ಮತ್ತು ಶುಗರ್ ಕೇನ್ ಹಾರ್ವೆಸ್ಟರ್ ಗಳನ್ನು ಒಳಗೊಂಡ "ಕೋಂಬೋ ಹಾರ್ವೆಸ್ಟರ್ ಹಬ್"ಗೆ ಅರ್ಜಿಯನ್ನು ಸಲ್ಲಿಸಲು ಅವಕಾಶವಿದೆ. ಕೃಷಿ ಯಂತ್ರೋಪಕರಣವಾರು ನಿಗದಿಪಡಿಸಿದ ಗರಿಷ್ಠ ಸಹಾಯಧನವನ್ನು ಒದಗಿಸಲಾಗುವುದು. ಈ ಸಹಾಯಧನವನ್ನು "Credit LinkedBackEndedSubsidy" ಮುಖಾಂತರ ಬಿಡುಗಡೆ ಮಾಡಲಾಗುವುದು. ಆಯ್ಕೆಯಾದ ಫಲಾನುಭವಿಗಳು/ಸಂಘ–ಸಂಸ್ಥೆಗಳು ಕೃಷಿ ಮೂಲಭೂತ ಸೌಕರ್ಯ ನಿಧಿ ಸಾಲದ ನೆರವನ್ನು ಪಡೆಯಲು ಸಹ ಅವಕಾಶವಿದೆ.

ಸಹಕಾರ ಸಂಘಗಳ ನಿಬಂಧನೆಯಂತೆ, ಕಂಪನಿ ಕಾಯ್ದೆಯಡಿ ನೊಂದಾಯಿಸಿದ ಸಂಘ–ಸಂಸ್ಥೆಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹತೆ ಹೊಂದಿರುತ್ತವೆ. ಕೃಷಿ ಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆಗಳ ಕೃಷಿ ಯಂತ್ರೋಪಕರಣಗಳ ಬ್ಯಾಂಕ್, ರೈತ ಉತ್ಪಾದಕ ಸಂಸ್ಥೆಗಳು ಮತ್ತು ಇತರೆ ಸಂಘ–ಸಂಸ್ಥೆಗಳು ರಾಜ್ಯಾದ್ಯಂತ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿದೆ ಎಂದೂ ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಆರು ಅಥವಾ ಒಂಬತ್ತು ವರ್ಷಗಳ ಕಾಲ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವ ಮತ್ತು ತಪಾಸಣೆಯಲ್ಲಿ ಸಂಪೂರ್ಣವಾಗಿ ಲೆಕ್ಕ–ಪತ್ರ ಹಾಗೂ ಯಂತ್ರೋಪಕರಣಗಳನ್ನು ಹಾಜರುಪಡಿಸಿರುವ ಕೃಷಿ ಯಂತ್ರಧಾರೆ ಕೇಂದ್ರಗಳ ಸೇವಾದಾರ ಸಂಸ್ಥೆಗಳು ಮಾತ್ರ ಅರ್ಜಿ ಸಲ್ಲಿಸಬೇಕು.

ಜಿಲ್ಲೆಯಲ್ಲಿನ ಆಸಕ್ತ ರೈತರು ಸಂಬಂಧಿಸಿದ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಕಚೇರಿಗೆ ಆಗಸ್ಟ್ 08 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ ಹಾಗೂ ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೋಕ: ಬಾಡಿಗೆ ಕಟ್ಟಡ ಬೇಕಾಗಿದೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.25–ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೋಕಾ ಗ್ರಾಮದಲ್ಲಿ ನಿರ್ವಹಣೆಯಾಗುತ್ತಿರುವ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ನಿರ್ವಹಣೆಗಾಗಿ ಲೋಕೋಪಯೋಗಿ ಇಲಾಖೆ ನಿಗದಿಪಡಿಸುವ ಬಾಡಿಗೆ ಅನುಸಾರವಾಗಿ ಕಟ್ಟಡವನ್ನು ಬಾಡಿಗೆಗೆ ನೀಡಲು ಇಚ್ಛಿಸುವ ಕಟ್ಟಡಗಳ ಮಾಲೀಕರು ಸಂಪರ್ಕಿಸಬಹುದು.

ನಗರದ ಕಂಟೋನ್‌ಮೆಂಟ್ ಪ್ರದೇಶದ ಓ.ಪಿ.ಸರ್ಕಲ್ ಎಲ್‌ಎಲ್‌ಸಿ ಕಾಲೋನಿ ಹತ್ತಿರದ ಡಿಸ್ನಿ ಫಂಕ್ಷನ್‌ಹಾಲ್ ಎದುರುಗಡೆಯ 1ನೇ ಮಹಡಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ದೂ.08392294492 ಗೆ ಸಂಪರ್ಕಿಸಬಹುದು ಎಂದು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ಕೃಷಿ ಇಲಾಖೆ: ವಿವಿಧ ಬೆಳೆಗಳಿಗೆ ವಿಮೆ ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.25–ಪ್ರಸಕ್ತ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬೀಮಾ ಯೋಜನೆಯಡಿ ಮುಂಗಾರು ಹಂಗಾಮಿನ ಬೆಳೆಗಳ ಬೆಳೆ ವಿಮೆಗೆ ನೋಂದಾಯಿಸಲು ಬೆಳೆ ಸಾಲ ಪಡೆದ ಹಾಗೂ ಬೆಳೆ ಸಾಲ ಪಡೆಯದ ರೈತರು ತಮ್ಮ ಬೆಳೆಗಳಿಗೆ ಬ್ಯಾಂಕುಗಳಲ್ಲಿ ವಿಮೆಗೆ ನೋಂದಾಯಿಸಿಕೊಳ್ಳಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಮುಂಗಾರು ಹಂಗಾಮಿನ ಗ್ರಾಮ ಪಂಚಾಯಿತಿ ಮಟ್ಟದ ಬೆಳೆಗಳಾದ ಭತ್ತ, ಮುಸುಕಿನ ಜೋಳ ಹಾಗೂ ಹೋಬಳಿ ಮಟ್ಟದ ಮುಂಗಾರು ಹಂಗಾಮಿನ ಬೆಳೆಗಳಾದ ಜೋಳ, ರಾಗಿ, ಸಜ್ಜೆ, ನವಣೆ, ತೊಗರಿ, ಹುರುಳಿ, ಸೂರ್ಯಕಾಂತಿ, ಎಳ್ಳು, ಹತ್ತಿ, ನೆಲಗಡಲೆ, ಈರುಳ್ಳಿ, ಭತ್ತ, ಕೆಂಪು ಮೆಣಸಿನಕಾಯಿ ಜಿಲ್ಲೆಯ ಬೆಳೆಗಳಾಗಿವೆ.

**ವಿವಿಧ ಬೆಳೆಗಳ ಬೆಳೆ ವಿಮೆಗೆ ಕೊನೆಯ ದಿನ:**

ಭತ್ತ, ತೊಗರಿ, ರಾಗಿ, ನವಣೆ, ಹುರುಳಿ, ನೆಲಕಡಲೆ, ಸಜ್ಜೆ–ಆಗಸ್ಟ್ 16.

ಮುಸುಕಿನ ಜೋಳ, ಜೋಳ, ಹತ್ತಿ, ಸೂರ್ಯಕಾಂತಿ, ತೊಗರಿ, ಈರುಳ್ಳಿ, ಕೆಂಪು ಮೆಣಸಿನಕಾಯಿ–ಜುಲೈ 31.

ನೋಂದಾಯಿಸಿಕೊಳ್ಳಲು ಸ್ಥಳೀಯ ಬ್ಯಾಂಕ್‌ಗಳು ಅಥವಾ ಸಾರ್ವಜನಿಕ ಸೇವಾ ಕೇಂದ್ರ ಅಥವಾ ಗ್ರಾಮ ಒನ್ ಸೇವಾ ಕೇಂದ್ರಗಳಿಗೆ ಸಂಪರ್ಕಿಸಬಹುದು.

ಬೆಳೆ ಸಾಲ ಪಡೆದ ರೈತರು ಇಚ್ಛೆ ಪಡೆಯದೇ ಇದ್ದಲ್ಲಿ ತಮ್ಮ ವ್ಯಾಪ್ತಿಯ ಬ್ಯಾಂಕಿನ ವ್ಯವಸ್ಥಾಪಕರಿಗೆ ಬೆಳೆ ನೊಂದಣಿ ಅಂತಿಮ ದಿನಾಂಕಕ್ಕಿಂತ 7 ದಿನಗಳ ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರವನ್ನು ನೀಡಿದ್ದಲ್ಲಿ ಅಂತಹ ರೈತರನ್ನು ಬೆಳೆ ವಿಮೆ ಯೋಜನೆಯಿಂದ ಕೈಬಿಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಅಥವಾ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಆದರ್ಶ ವಿದ್ಯಾಲಯ: ಖಾಲಿಯಿರುವ ಸೀಟ್‌ಗಳ ಭರ್ತಿಯ ಫಲಿತಾಂಶ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.25–ನಗರದ ಈದ್ಗಾ ರಸ್ತೆಯ ಹಿರಾಳ್ ಕುಡಂನ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ ಪ್ರಸ್ತಕ ಸಾಲಿಗೆ 7, 8 ಮತ್ತು 9 ನೇ ತರಗತಿಯಲ್ಲಿ ಖಾಲಿಯಿರುವ ಸೀಟ್ ಗಳಿಗಾಗಿ ಡಯಟ್ ನಲ್ಲಿ ಇತ್ತೀಚೆಗೆ ಪ್ರವೇಶ ಪರೀಕ್ಷೆ ನಡೆಸಿದ್ದು, ಫಲಿತಾಂಶ ಪ್ರಕಟಿಸಲಾಗಿದೆ ಎಂದು ಶಾಲೆಯ ಮುಖ್ಯಗುರುಗಳು ತಿಳಿಸಿದ್ದಾರೆ.

ಪರೀಕ್ಷೆ ಬರೆದ ವಿದ್ಯಾರ್ಥಿಗಳು ಮತ್ತು ಪೋಷಕರು ಶಾಲೆಗೆ ಭೇಟಿ ನೀಡಿ ಫಲಿತಾಂಶವನ್ನು ಪರಿಶೀಲಿಸಿ ಅಗತ್ಯ ದಾಖಲೆಗಳೊಂದಿಗೆ ಜುಲೈ 29 ರೊಳಗಾಗಿ ದಾಖಲಾತಿ ಮಾಡಿಸಿಕೊಳ್ಳಬೇಕು.

**ಬೇಕಾದ ದಾಖಲೆ:**

ಪ್ರವೇಶಾತಿ ಅರ್ಜಿ, ವರ್ಗಾವಣೆ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಿದ್ಯಾರ್ಥಿಯ ಆಧಾರ್ ಕಾರ್ಡ್, ವಿದ್ಯಾರ್ಥಿಯ ಬ್ಯಾಂಕ್‌ಪಾಸ್ ಪುಸ್ತಕ, ತಂದೆ–ತಾಯಿಯ ಆಧಾರ್ ಕಾರ್ಡ್ ಪ್ರತಿ, ಅಂಗವಿಕಲ ವಿದ್ಯಾರ್ಥಿಯಾಗಿದ್ದಲ್ಲಿ ವೈದ್ಯಕೀಯ ಪ್ರಮಾಣ ಪತ್ರ, ವಿದ್ಯಾರ್ಥಿಯ 4 ಭಾವಚಿತ್ರ, ಬೇರೆ ತಾಲ್ಲೂಕಿನ ವಿದ್ಯಾರ್ಥಿಗಳಾಗಿದ್ದಲ್ಲಿ ತಹಶೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ, 5ನೇ ತರಗತಿಯ ಮೂಲ ಅಂಕಪಟ್ಟಿಯ 2 ಜೆರಾಕ್ಸ್, ಪ್ರವೇಶ ಪರೀಕ್ಷೆಯ ಹಾಲ್ ಟಿಕೆಟ್, ವಿದ್ಯಾರ್ಥಿಯ ಆರೋಗ್ಯ ಕಾರ್ಡ್, ಪಾಲಕರ ಮೊಬೈಲ್ ಸಂಖ್ಯೆ, ಪಡಿತರ ಪುಸ್ತಕದ ಜೆರಾಕ್ಸ್ ಪ್ರತಿ, ವಿದ್ಯಾರ್ಥಿನಿಯಾಗಿದ್ದಲ್ಲಿ ಭಾಗ್ಯ ಲಕ್ಷ್ಮೀ ಬಾಂಡ್ ಪ್ರತಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ನಗರದ ಈದ್ಗಾ ರಸ್ತೆಯ ಹೀರಾಳ್‌ಕುಡಂನ ಸರ್ಕಾರಿ ಆದರ್ಶ ವಿದ್ಯಾಲಯ ಅಥವಾ ಮೊ.9740738762 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೃತ ಅನಾಮಧೇಯ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.25–ಬಳ್ಳಾರಿ ಗಾಂಧಿನಗರ ಪೋಲಿಸ್ ಠಾಣೆ ವ್ಯಾಪ್ತಿಯ ತಾಳೂರು ರಸ್ತೆಯ ಹೊಸ ಕೋರ್ಟ್ ಪಕ್ಕದಲ್ಲಿ ಹಾದು ಹೋಗುವ ಹೆಚ್.ಎಲ್.ಸಿ 14 ಡಿಪಿ ಕಾಲುವೆಯಲ್ಲಿ ಸುಮಾರು 55 ಮತ್ತು 40 ವರ್ಷದ ಅನಾಮಧೇಯ ವ್ಯಕ್ತಿಯು ಶವ ತೇಲಿಕೊಂಡು ಬಂದಿದ್ದು, ಮೃತನ ವಾರಸುದಾರರು ತಿಳಿದಿರುವುದಿಲ್ಲ. ಈ ಕುರಿತು ಪ್ರಕರಣ ದಾಖಲಾಗಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಪೊಲೀಸ್ ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು:

ಎತ್ತರ 5.5 ಅಡಿ, ದುಂಡು ಮುಖ, ಕಪ್ಪು ಮೈಬಣ್ಣ, ಧೃಡವಾದ ಮೈಕಟ್ಟು ಹೊಂದಿದ್ದು, ತಲೆಯಲ್ಲಿ ಕಪ್ಪು ಕೂದಲು ಹೊಂದಿರುತ್ತಾನೆ. ಮೃತನ ಮೈಮೇಲೆ ಗ್ರೇ ಬಣ್ಣದ ಆಫ್ ಟಿ–ಶರ್ಟ್ ಮತ್ತು ಕಪ್ಪು ಬಣ್ಣದ ಸ್ಯಾಂಡೋ ಬನಿಯಾನ್ ಮತ್ತು ನೀಲಿ ಬಣ್ಣದ ಒಳುಡುಪು ಧರಿಸಿರುತ್ತಾನೆ.

ಈ ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100, 258102 ಅಥವಾ ಗಾಂಧಿನಗರ ಪೊಲೀಸ್ ಠಾಣೆಯ ದೂ.08392–272192, ಪಿ.ಐ ಮೊ.9480803046 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹುದ್ದೆಗಳ ನೇಮಕ: ಅರ್ಜಿ ಆಹ್ವಾನ

ಬಳ್ಳಾರಿ,ಜು.25–ಪ್ರಸ್ತಕ ಸಾಲಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಬಳ್ಳಾರಿ ಪೂರ್ವ ವಲಯದ ಕ್ಷೇತ್ರ ಸಮನ್ವಯಾಧಿಕಾರಿಗಳ ಕಚೇರಿ ವ್ಯಾಪ್ತಿಯಲ್ಲಿ ವಿಶೇಷ ಚೇತನ ಮಕ್ಕಳಿಗೆ ಫಿಜಿಯೋಥೆರಪಿ ಚಿಕಿತ್ಸೆ ನೀಡಲು ಒಂದು ಫಿಜಿಯೋಥೆರಪಿಸ್ಟ್ ಹುದ್ದೆಗೆ ಹಾಗೂ ಎಸ್‌ಆರ್‌ಪಿ ಕೇಂದ್ರದ ವೈದ್ಯರ ಸಹಾಯಕ್ಕಾಗಿ ಒಬ್ಬ ಮಹಿಳಾ ಸಹಾಯಕಿಯರ ಹುದ್ದೆಗೆ ಹೊರಗುತ್ತಿಗೆ ಆಧಾರದ ಮೇಲೆ ತಾತ್ಕಲಿಕವಾಗಿ ನೇಮಕ ಮಾಡಿಕೊಳ್ಳಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜು.29 ಕೊನೆಯ ದಿನ. ವಿದ್ಯಾರ್ಹತೆ: ವೈದ್ಯರ ಹುದ್ದೆಗೆ ಬ್ಯಾಚುಲರ್ ಆಫ್ ಫಿಜಿಯೋಥೆರಪಿ ಅಥವಾ ಡಿಪ್ಲೋಮಾ ಆಫ್ ಫಿಜಿಯೋಥೆರಪಿ ಆಗಿರಬೇಕು. ಮಹಿಳಾ ಸಹಾಯಕಿ ಹುದ್ದೆಗೆ 07 ತರಗತಿ ಉತ್ತೀರ್ಣರಾಗಿರಬೇಕು.

ಆಸಕ್ತ ಅಭ್ಯರ್ಥಿಗಳು ತಮ್ಮ ಅಗತ್ಯ ದಾಖಲೆಗಳೊಂದಿಗೆ ಕ್ಷೇತ್ರ ಸಮನ್ವಯಾಧಿಕಾರಿಗಳ ಕಚೇರಿ, ಬಿಆರ್‌ಸಿ ಕಚೇರಿ, ಬಳ್ಳಾರಿ ಪೂರ್ವ ವಲಯ, ಬಳ್ಳಾರಿ ಇಲ್ಲಿಗೆ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ.9916356333, 8217687490ಗೆ ಸಂಪರ್ಕಿಸಬಹುದು.

# ಹೊರಗುತ್ತಿಗೆ ಆಧಾರದ ಮೇಲೆ ಫಿಜಿಯೋಥೆರಪಿಸ್ಟ್, ಮಹಿಳಾ ಸಹಾಯಕಿ ಹುದ್ದೆ ನೇಮಕಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.25–ಪ್ರಸ್ತಕ ಸಾಲಿಗೆ ಬಳ್ಳಾರಿ ಪಶ್ಚಿಮ ವಲಯದ ಕುರುಗೋಡಿನ ಕ್ಷೇತ್ರ ಸಮನ್ವಯಾಧಿಕಾರಿಗಳ ಕಚೇರಿ ವ್ಯಾಪ್ತಿಯಲ್ಲಿ ವಿಶೇಷ ಚೇತನ ಮಕ್ಕಳಿಗೆ ಫಿಜಿಯೋಥೆರಪಿ ಚಿಕಿತ್ಸೆ ನೀಡಲು ಒಂದು ಫಿಜಿಯೋಥೆರಪಿಸ್ಟ್ ಹುದ್ದೆಗೆ ಹಾಗೂ ಎಸ್‌ಆರ್‌ಪಿ ಕೇಂದ್ರದ ವೈದ್ಯರ ಸಹಾಯಕ್ಕಾಗಿ ಒಬ್ಬ ಮಹಿಳಾ ಸಹಾಯಕಿಯರ ಹುದ್ದೆಗೆ ಹೊರಗುತ್ತಿಗೆ ಆಧಾರದ ಮೇಲೆ ತಾತ್ಕಲಿಕವಾಗಿ ನೇಮಕ ಮಾಡಿಕೊಳ್ಳಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

2025 ರ ಆಗಸ್ಟ್ ತಿಂಗಳಿಂದ 2026 ರ ಮಾರ್ಚ್ ರವರೆಗೆ (8 ತಿಂಗಳಿಗೆ) ಮಾತ್ರ ಕಾರ್ಯನಿರ್ವಹಿಸಲು ತಾತ್ಕಲಿಕವಾಗಿ ನೇಮಕ ಮಾಡಿಕೊಳ್ಳಲಾಗುವುದು. ಅರ್ಜಿ ಸಲ್ಲಿಸಲು ಜು.30 ಕೊನೆಯ ದಿನವಾಗಿದೆ.

**ವಿದ್ಯಾರ್ಹತೆ:** ವೈದ್ಯರ ಹುದ್ದೆಗೆ ಬ್ಯಾಚುಲರ್ ಆಫ್ ಫಿಜಿಯೋಥೆರಪಿ ಅಥವಾ ಡಿಪ್ಲೋಮಾ ಆಫ್ ಫಿಜಿಯೋಥೆರಪಿ ಆಗಿರಬೇಕು. ಮಹಿಳಾ ಸಹಾಯಕಿ ಹುದ್ದೆಗೆ 07 ತರಗತಿ ಉತ್ತೀರ್ಣರಾಗಿರಬೇಕು.

ಆಸಕ್ತ ಅಭ್ಯರ್ಥಿಗಳು ತಮ್ಮ ಅಗತ್ಯ ದಾಖಲೆಗಳೊಂದಿಗೆ ಕ್ಷೇತ್ರ ಸಮನ್ವಯಾಧಿಕಾರಿಗಳ ಕಚೇರಿ, ಬಳ್ಳಾರಿ ಪಶ್ಚಿಮ ವಲಯ, ಕುರುಗೋಡು ಇಲ್ಲಿಗೆ ಅರ್ಜಿ ಸಲ್ಲಿಸಬೇಕಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂ.08392–266239, ಮೊ.9900535612, 9449217326ಗೆ ಸಂಪರ್ಕಿಸಬಹುದು ಎಂದು ಬಳ್ಳಾರಿ ಪಶ್ಚಿಮ ವಲಯ ಕುರುಗೋಡು ಕ್ಷೇತ್ರ ಸಮನ್ವಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆನಕಟ್ಟಿಯಲ್ಲಿ ದತ್ತಿ ಉಪನ್ಯಾಸ ಸಾಧಕ ಹಿರಿಯರನ್ನು ಸ್ಮರಿಸುವುದೇ ದತ್ತಿಯ ಧ್ಯೇಯ–ಡಾ.ಬಡಿಗೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.25–ಹಿರಿಯರನ್ನು ಸ್ಮರಿಸಿ,ಅವರ ಸಾಧನೆಯನ್ನು ನೆನಪಿಸಿ ಯುವ ಪೀಳಿಗೆಗೆ ಪರಿಚಯಿಸುವ ಕಾರ್ಯವೇ ದತ್ತಿ ಕಾರ್ಯಕ್ರಮದ ಧ್ಯೇಯ ಎಂದು ಹಂಪಿ ಕನ್ನಡ ವಿಶ್ವವಿದ್ಯಾಲಯದ ಹಸ್ತಪ್ರತಿ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ವೀರೇಶ ಬಡಿಗೇರ ಹೇಳಿದರು.

ತಾಲೂಕಿನ ಬೆನಕಟ್ಟಿ ಗ್ರಾಮದ ಹೇಮರಡ್ಡಿ ಮಲ್ಲಮ್ಮ ಪ್ರೌಢಶಾಲೆಯ ಪಂಚವಟಿ ವನದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ, ತಾಲ್ಲೂಕು ಹಾಗೂ ವಲಯ ಘಟಕಗಳ ಸಹಯೋಗದಲ್ಲಿ ಶುಕ್ರವಾರ ಜರುಗಿದ ದಿ.ರಾಮಪ್ಪ ಕೃ.ಯಡಹಳ್ಳಿ ಹಾಗೂ ದಿ.ಭೀಮಪ್ಪ ಹ.ಗೊರವರ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯರ ಮಾತು ಆಲಿಸುವುದು, ಅವರ ಸಾಧನೆ ನೆನಪಿಸಿಕೊಂಡು ಸ್ಮರಣೆ ಮಾಡುವುದು ಸಹ ನೈತಿಕ ಮೌಲ್ಯಗಳೇ ಆಗಿದ್ದು, ಶಿಕ್ಷಕರು ಇಂದು ಮಕ್ಕಳಿಗೆ ಕೇವಲ ಕಲಿಸುವುದಷ್ಟೇ ಅಲ್ಲ, ತಿಳಿಸುವ ಕೆಲಸವನ್ನು ಮಾಡಬೇಕು ಎಂದ ಡಾ.ಬಡಿಗೇರ, ಮಕ್ಕಳ ಸಾಮರ್ಥ್ಯಕ್ಕೆ ಅವಕಾಶ ಕಲ್ಪಿಸಿ ಅವರಲ್ಲಿ ಭರವಸೆ ತುಂಬಿದರೆ ಸಾಧನೆ ಮಾಡುತ್ತಾರೆ. ಸರಿಯಾದ ದಾರಿಯಲ್ಲಿ ನಡೆದರೆ ಬದುಕು ಸುಂದರವಾಗುತ್ತದೆ ಎಂದು ಹೇಳಿದರು.

'ಶಿಕ್ಷಣದಲ್ಲಿ ನೈತಿಕ ಮೌಲ್ಯಗಳು' ಕುರಿತು ಉಪನ್ಯಾಸ ನೀಡಿದ ಸಾಹಿತಿ, ಶಿಕ್ಷಕ ರವಿ ಕಂಗಳ, ಒಳ್ಳೆಯದನ್ನು ಕೇಳಿಸಿಕೊಳ್ಳುವುದು ಅದನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ಶಿಕ್ಷಣವಾಗಿದ್ದು, ಮಕ್ಕಳಿಗೆ ಇಂದು ಸಂಸ್ಕಾರಯುತ, ಮಾನವತ್ವ ಬೆಳೆಸುವ ಗುಣಮಟ್ಟದ ಶಿಕ್ಷಣದ ಅಗತ್ಯತೆಯಿದೆ ಜೊತೆಗೆ ಗುಣವಂತರನ್ನಾಗಿ ಬೆಳೆಸುವುದು ಅವಶ್ಯವಾಗಿದೆ ಎಂದರು.

ಆಶಯ ನುಡಿ ಹೇಳಿದ ಕಸಾಪ ಜಿಲ್ಲಾ ಗೌರವ ಕಾರ್ಯದರ್ಶಿ ಚಂದ್ರಶೇಖರ ಕಾಳನ್ನವರ, ಶತಮಾನ ಕಂಡಿರುವ ಕನ್ನಡ ಸಾಹಿತ್ಯ ಪರಿಷತ್ತು ಸಾಹಿತ್ಯಿಕ ಕಾರ್ಯಕ್ರಮಗಳ ಜೊತೆ ನಾಡು–ನುಡಿಯ ಸೇವೆಗೈದು ನಮ್ಮ ಸಂಪ್ರದಾಯ, ಸಂಸ್ಕೃತಿಯನ್ನು ಉಳಿಸುವ ಕಾರ್ಯ ಮಾಡುತ್ತಿದೆ ಎಂದರು.

ಪ್ರಗತಿಪರ ರೈತ ಲಚ್ಚಪ್ಪ ಬಾಳಕ್ಕನವರ ಅಧ್ಯಕ್ಷತೆ ವಹಿಸಿದ್ದರು. ಕಸಾಪ ತಾಲ್ಲೂಕು ಘಟಕದ ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ, ಹನಮಂತ ಗೊರವರ, ಕೃಷ್ಣಪ್ಪ ಅರಕೇರಿ, ಯಮನಪ್ಪ ನಿಂಬಲಗುಂದಿ ಎನ್.ಬಿ.ಗೊರವರ, ಕೆ.ಆರ್. ಯಡಹಳ್ಳಿ, ರಾಜಶೇಖರ ಅಡಿಕೆನ್ನವರ ಅತಿಥಿಗಳಾಗಿದ್ದರು.

ವಿದ್ಯಾರ್ಥಿನಿಯರು ಪ್ರಾರ್ಥಿಸಿದರು. ಮುಖ್ಯಗುರು ಎಂ.ಎ.ಮುನವಳ್ಳಿ ಸ್ವಾಗತಿಸಿದರು. ಮಾಜಿ ಯೋಧ ಗದಿಗೆಪ್ಪ ಅರಕೇರಿ ಪರಿಚಯಿಸಿದರು. ಪಿ.ಆರ್.ಸನ್ನಪ್ಪನವರ ನಿರೂಪಿಸಿದರು. ಆರ್.ಎಚ್.ಕುಲಕರ್ಣಿ ವಂದಿಸಿದರು.

# ತಾಯಿ ಮರಣ ತಡೆಗೆ ಕ್ರಮವಹಿಸಿ : ಡಿಸಿ ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಜುಲೈ 25–ಗರ್ಭಾವಸ್ಥೆ ಸಮಯದಲ್ಲಿ ತಾಯಿ ಮರಣ ಪ್ರಕರಣಗಳು ಹೆಚ್ಚಾಗುತ್ತಿದ್ದು, ಅವುಗಳನ್ನು ತಡೆಯಲು ಮುಂಜಾಗ್ರತೆ ಕ್ರಮಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ತಾಯಿ ಮರಣ ಮತ್ತು ಜಿಲ್ಲಾ ಮಟ್ಟದ ಸರ್ವೇಕ್ಷಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಆಶಾ ಕಾರ್ಯಕರ್ತರು ಹಾಗೂ ಆರೋಗ್ಯ ಇಲಾಖೆಯವರು ತಮ್ಮ ಭಾಗದ ಗರ್ಭಿಣಿಯರನ್ನು ಗುರುತಿಸಿ ನೋಂದಣಿ ಮಾಡಿಕೊಳ್ಳಬೇಕು. ಇದರಿಂದ ಸೂಕ್ತ ಸಮಯಕ್ಕೆ ಚಿಕಿತ್ಸೆ ನೀಡಿದಲ್ಲಿ ಆಗಬಹುದಾದ ಗಂಡಾಂತರಗಳಿಂದ ರಕ್ಷಿಸಲು ಸಾಧ್ಯವಾಗುತ್ತದೆ ಎಂದರು.

ಗರ್ಭಾವಸ್ಥೆಯಲ್ಲಿ ಮೇಲಿಂದ ಮೇಲೆ ಪರೀಕ್ಷೆಗೆ ಒಳಪಡಿಸುವ ಕೆಲಸ ಮಾಡಿದಲ್ಲಿ ಬಾಹ್ಯರೋಗಗಳಿಂದ ತೊಂದರೆಯಾಗುವದಿಲ್ಲ. ಈ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯವಾಗಬೇಕು. ಸಾರ್ವಜನಿಕರು ಕೂಡಾ ತಮ್ಮ ಮನೆಯಲ್ಲಿದ್ದ ಗರ್ಭಿಣಿಯರು ಇದ್ದಲ್ಲಿ ಆಶಾ ಕಾರ್ಯಕರ್ತರಿಗೆ ಮಾಹಿತಿ ನೀಡಿ ಸರಕಾರಿ ಆಸ್ಪತ್ರೆಗಳಲ್ಲಿ ನೋಂದಣಿ ಮಾಡಿಸಬೇಕು. ಸಾವು ತಪ್ಪಿಸಲು ಸಾಧ್ಯವಿಲ್ಲವಾದರೂ ನಮ್ಮ ಜವಾಬ್ದಾರಿ ಮಾತ್ರ ಮರೆಯುವಂತಿಲ್ಲವೆಂದರು.

ಜಿಲ್ಲೆಯಲ್ಲಿ ಎಪ್ರೀಲ್ 2024 ರಿಂದ ಮಾರ್ಚ–2025ರ ವರೆಗೆ ಒಟ್ಟು 12 ತಾಯಿ ಮರಣ ಪ್ರಕರಣಗಳು ಕಂಡುಬಂದಿದ್ದು, ಎಪ್ರೀಲ್–2025 ರಿಂದ ಇಲ್ಲಿವರೆಗೆ 3 ತಿಂಗಳಲ್ಲಿ 5 ಪ್ರಕರಣಗಳು ಕಂಡುಬಂದಿವೆ. ಹೆಚ್ಚಾಗಿ ರಕ್ತ ಹೀನತೆ, ನಂಜು ಹಾಗೂ ಹೆಲ್ತ ಸಿಂಡ್ರೋಮ್‌ದಿಂದ ತಾಯಿ ಮರಣಗಳು ಉಂಟಾಗುತ್ತಿವೆ. ಗರ್ಭಿಣಿ ಮಹಿಳೆಯರಲ್ಲಿ ಕಬ್ಬಿಣಾಂಶ ಪ್ರಮಾಣ ಕಡಿಮೆ ಇರುವದರಿಂದ ಇಂತಹ ಸಮಸ್ಯೆಗಳು ಉಂಟಾಗುತ್ತಿವೆ. ಪ್ರಾರಂಭದಲ್ಲಿಯೇ ಮಹಿಳೆಯರಲ್ಲಿ ಹಿಮೋಗ್ಲೋಬಿನ್ ಪ್ರಮಾಣವನ್ನು ಹೆಚ್ಚಿಸುವ ಕಾರ್ಯವಾಗಬೇಕೆಂದು ತಿಳಿಸಿದರು.

ರೇಬಿಸ್ ಹಾಗೂ ಹಾವು ಕಡಿತದಿಂದ ಸಾವು ಪ್ರಕರಣಗಳು ಕಂಡುಬರುತ್ತಿವೆ. ಇಂತಹ ಪ್ರಕರಣಗಳಿಗೆ ಯಾವುದೇ ರೀತಿಯ ಲಸಿಕೆಗಳ ಕೊರತೆ ಆಗದಂತೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಮೇಲು ದರ್ಜೆ ಆಸ್ಪತ್ರೆಗಳಲ್ಲಿ ದಾಸ್ತಾನು ಇಟ್ಟುಕೊಳ್ಳಲು ಜಿಲ್ಲಾಧಿಕಾರಿಗಳು ಸೂಚಿಸಿದರು. ಹಾವು ಮತ್ತು ನಾಯಿ ಕಡಿತದಿಂದ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವ ಕೆಲಸವಾಗಬೇಕು. ಅಂದಾಗ ಮಾತ್ರ ಮರಣ ಪ್ರಮಾಣವನ್ನು ಕಡಿಮೆ ಮಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಾತನಾಡಿ ಹಾವು ಕಚ್ಚಿದಾಗ ಅದಕ್ಕೆ ಬಟ್ಟೆ ಕಟ್ಟದೇ ಆ ವ್ಯಕ್ತಿಯನ್ನು ನಡೆದಾಡಿಸದೇ ಎತ್ತಿಕೊಂಡು ಹತ್ತಿರದ ಸರಕಾರಿ ಇಲ್ಲವೇ ಖಾಸಗಿ ಆಸ್ಪತ್ರೆಗೆ ಕರೆದುಕೊಂಡು ಹೋಗುವ ಕೆಲಸವಾಗಬೇಕು. ನಾಯಿ ಕಡಿದಾಗ ಗಾಯವನ್ನು ತಕ್ಷಣವೇ ನೀರು ಹಾಗೂ ಸಾಬೂನಿನಿಂದ ತೊಳೆದು ಪಾವಿಡೋನ್ ಐಯೋಡಿನಂಥ ಆಚಿಟಿಸೆಪ್ಟಿಕ್‌ನ್ನು ಹಚ್ಚಿ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು. ನಂತರ ವೈದ್ಯರ ನಿರ್ದೇಶನದ ಮೇರೆಗೆ ರೇಬಿಸ್ ಲಸಿಕೆಯ ಪೂರ್ಣ ಕ್ರಮವನ್ನು ತೆಗೆದುಕೊಳ್ಳಲು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಆಸ್ಪತ್ರೆಯ ಶಸ್ತ್ರ ಚಿಕಿತ್ಸಕ ಮಹೇಶ ಕೋಣಿ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಶಿವನಗೌಡ ಪಾಟೀಲ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಸುವರ್ಣ ಕುಲಕರ್ಣಿ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಕುಸುಮಾ ಮಾಗಿ, ಸೇರಿದಂತೆ ತಾಲೂಕಾ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಕುಡಿಯುವ ನೀರು ಸರಬರಾಜಿನ ಮೇಲ್ವಿಚಾರಣೆ ಮಾಡಿ–ಸಿಇಓ ಕುರೇರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.25–ತಾಲೂಕಿನ ಭಗವತಿ, ಕಡ್ಲಿಮಟ್ಟಿ, ಬೆಣ್ಣೂರ ಸೇರಿದಂತೆ ವಿವಿಧ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಳ್ಳಿಗಳಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಗುರುವಾರ ಭೇಟಿ ನೀಡಿ ಜಲಜೀವನ ಮಿಷನ್ ಯೋಜನೆಯಡಿಯ ಕಾಮಗಾರಿಗಳನ್ನು ಪರಿಶೀಲಿಸಿದರು.

ಭಗವತಿ ಗ್ರಾಮದಲ್ಲಿ ಜೆಜೆಎಂ ನಲ್ಲಿಗಳಲ್ಲಿ ನೀರು ಸೋರುವುದನ್ನು ಗಮನಿಸಿದ ಸಿಇಓ, ನೀರು ಸೋರುವಿಕೆಯನ್ನು ತಡೆಗಟ್ಟಬೇಕು. ಗ್ರಾಮದ ಪ್ರತಿ ಮನೆಗೂ ಕುಡಿಯುವ ನೀರು ಸರಬರಾಜು ಮಾಡುವಂತೆ ಸೂಚಿಸಿದರಲ್ಲದೇ, ಕಡ್ಲಿಮಟ್ಟಿ ಗ್ರಾಮದಲ್ಲಿನ ನೀರಿನ ಸಂಪರ್ಕಗಳನ್ನು ಕಾಲಕಾಲಕ್ಕೆ ಮೇಲ್ವಿಚಾರಣೆ ಮಾಡುವಂತೆ ಸೂಚಿಸಿದರು.

ನಂತರ ಬೆಣ್ಣೂರ ಪಂಚಾಯಿತಿ ವ್ಯಾಪ್ತಿಯ ಶಿರಗುಪ್ಪಿ, ತಳಗಿಹಾಳ ಹಾಗೂ ಇಲಾಳ ಗ್ರಾಮಗಳಿಗೆ ಭೇಟಿ ನೀಡಿದ ಶಶಿಧರ ಕುರೇರ, ಜೆಜೆಎಂ ಯೋಜನೆಯಲ್ಲಿ ಜನರ ಸಹಭಾಗಿತ್ವವನ್ನು ಹೆಚ್ಚಿಸಬೇಕು. ನೀರು ಸರಬರಾಜು ವ್ಯವಸ್ಥೆಯಲ್ಲಿನ ಚಿಕ್ಕಪುಟ್ಟ ದುರಸ್ತಿ ಕಾರ್ಯಗಳನ್ನು ಕೈಗೊಂಡು ದಿನದ 24 ಗಂಟೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡಲು ಅಗತ್ಯ ಕ್ರಮವಹಿಸುವಂತೆ ಪಿಡಿಓ ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈಗಾಗಲೇ ಜಲಜೀವನ್ ಮಿಷನ್ ಯೋಜನೆ ಅನುಷ್ಠಾನಗೊಂಡಿರುವ ಗ್ರಾಮಗಳಲ್ಲಿ ತೀವ್ರಗತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಿ ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರಿಸಬೇಕು ಎಂದು ಹೇಳಿದ ಅವರು, ಜಲಮೂಲಗಳು, ಜಲ ಸಂಗ್ರಹಾಗಾರಗಳನ್ನು ಸ್ವಚ್ಛವಾಗಿರಿಸುವಲ್ಲಿ ನಿಗಾವಹಿಸಬೇಕು. ಆಗಾಗ ಪೀಲ್ಡ್ ಟೆಸ್ಟ್ ಕಿಟ್ ಬಳಸಿ ಕುಡಿಯುವ ನೀರಿನ ಶುದ್ಧತೆಯನ್ನು ಪರೀಕ್ಷಿಸಬೇಕು. ಆಗಾಗ ಗ್ರಾಮ ನೀರು ನೈರ್ಮಲ್ಯ ಸಮಿತಿಗಳು ಸಭೆಗಳನ್ನು ನಡೆಸುವಂತೆ ತಿಳಿಸಿದರು.

ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ಆಕಾಶ, ತಾಲೂಕಾ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಸುಭಾಸ ಸಂಪಗಾವಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗ್ರಾಪಂ ಪಿಡಿಓಗಳು, ಪಂಚಾಯತಿ ಸಿಬ್ಬಂದಿ ಇದ್ದರು.

<u>ಮಕ್ಕಳ ಹಕ್ಕು ರಕ್ಷಣಾ ಆಯೋಗದ ಅಧ್ಯಕ್ಷ ನಾಗಣ್ಣಗೌಡ ಭೇಟಿ</u>

# ಬಾಲ ತಾಯಂದಿರ ಮಾಹಿತಿ ಸಲ್ಲಿಕೆಗೆ ಅಧಿಕಾರಿಗಳಿಗೆ ಗಡುವು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.25–ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಬಾಲ ತಾಯಂದಿರಿಗೆ ಸಂಬಂಧಿಸಿದ ಪ್ರಕರಣಗಳ ಕುರಿತ ವಿವರವಾದ ಮಾಹಿತಿಯನ್ನು ಎರಡು ವಾರಗಳಲ್ಲಿ ಸಲ್ಲಿಸುವಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣಗೌಡ ಅಧಿಕಾರಿಗಳಿಗೆ ಗಡುವು ನೀಡಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಗುರುವಾರ ಆರ್.ಟಿ.ಇ, ಪೋಕ್ಸೋ–2012, ಬಾಲ ನ್ಯಾಯ ಕಾಯ್ದೆ–2015ರ ಅನುಷ್ಠಾನ ಕುರಿತ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷೆ ವಹಿಸಿ ಮಾತನಾಡಿದ ಅವರು, ಜಿಲ್ಲಾಸ್ಪತ್ರೆಗಳಲ್ಲಿ ಮಕ್ಕಳಿಗಾಗಿ ಸ್ಥಾಪಿಸಿರುವ ವಿಶೇಷ ಘಟಕಗಳಿಗೆ ಅಗತ್ಯ ಮೂಲಸೌಕರ್ಯ ಒದಗಿಸಲು ಆರೋಗ್ಯ ಇಲಾಖೆಗೆ ಸೂಚನೆ ನೀಡಿದರು. ಜೊತೆಗೆ ಜಿಲ್ಲಾಧಿಕಾರಿ ಹಾಗೂ ಜಿಪಂ ಸಿಇಒ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ, ಆಸ್ಪತ್ರೆಯೊಳಗಿನ ಸಮಸ್ಯೆಗಳಿಗೆ ತ್ವರಿತ ಪರಿಹಾರಕ್ಕೆ ಕ್ರಮ ಕೈಗೊಳ್ಳಲು ತಿಳಿಸಿದರು.

ಕೆಲವು ಪೊಲೀಸ್ ಸಿಬ್ಬಂದಿಗಳಿಗೆ ಪೋಕ್ಸೋ ಕಾಯ್ದೆ ಸೇರಿದಂತೆ ಮಕ್ಕಳ ರಕ್ಷಣಾ ಕಾಯ್ದೆಯ (2016) ಕುರಿತು ತಿಳುವಳಿಕೆ ಕೊರತೆಯಿರುವ ಹಿನ್ನೆಲೆಯಲ್ಲಿ ಎಲ್ಲ ಪೊಲೀಸ್ ಸಿಬ್ಬಂದಿಗಳಿಗೆ ಪೂರ್ಣ ಮಾಹಿತಿ ಮತ್ತು ತರಬೇತಿ ನೀಡುವಂತೆ ಆದೇಶ ನೀಡಲಾಗಿದೆ. ಕಾಣೆ–ಯಾದ ಮಕ್ಕಳ ಪತ್ತೆ ಹಾಗೂ ಬಾಕಿ ಉಳಿದ ಪ್ರಕರಣಗಳ ಸಮರ್ಪಕ ತನಿಖೆ ನಡೆಸಿ ಪತ್ತೆ ಹಚ್ಚುವಂತೆ ಸೂಚಿಸಲಾಗಿದೆ. ಶಾಲಾ ರಜೆ ದಿನಗಳಲ್ಲಿ ಶಾಲಾ ಆವರಣದಲ್ಲಿ ಅನಧಿಕೃತ ಪ್ರವೇಶವನ್ನು ನಿಷೇಧಿಸಿ, ಉಲ್ಲಂಘನೆ ಮಾಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಸೂಚನೆ ನೀಡಿದರು.

ತಾಲೂಕು ಪಂಚಾಯಿತಿ ಮಟ್ಟದಲ್ಲಿ ಬಾಲ್ಯ ವಿವಾಹ ನಿಷೇಧ ಸಮಿತಿಯನ್ನು ರಚಿಸುವುದು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಬಾಲ್ಯ ವಿವಾಹ ಕುರಿತು ಮಾಹಿತಿ ಹಂಚಿಕೊಳ್ಳಬೇಕು. ಆಶಾ ಕಾರ್ಯಕರ್ತರು ಹಾಗೂ ಪಂಚಾಯಿತಿ ಸಿಬ್ಬಂದಿಗಳ ಮೂಲಕ ಬಾಲ್ಯ ವಿವಾಹದ ಮಾಹಿತಿ ಸಂಗ್ರಹಿಸಿ ತಡೆಗಟ್ಟುವಂತೆ ಕ್ರಮವಹಿಸಲು ಸೂಚಿಸಲಾಗಿದೆ. ಪ್ರತಿಯೊಂದು ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ಮಕ್ಕಳ ಗ್ರಾಮಸಭೆ ನಡೆಸಿ, ಮಕ್ಕಳ ಕಾವಲು ಸಮಿತಿಯನ್ನು ರಚಿಸಬೇಕು. ಇದರಲ್ಲಿ ಗ್ರಾಮದ ಪೊಲೀಸ್ ಬೀಟ್ ಅಧಿಕಾರಿ ಪಾಲ್ಗೊಳ್ಳಬೇಕು ಎಂದು ನಾಗಣ್ಣಗೌಡ ತಿಳಿಸಿದರು.

9ನೇ ತರಗತಿಯ ಹೊರಗಿನ ಹಾಗೂ ದೀರ್ಘಕಾಲದ ಗೈರುಹಾಜರಾತಿ ವಿದ್ಯಾರ್ಥಿನಿಯರ ಮಾಹಿತಿ ಸಂಗ್ರಹಿಸಿ, ಬಾಲ್ಯ ವಿವಾಹಕ್ಕೆ ಒಳಗಾಗುತ್ತಿರುವುದಾಗಿ ತೆ–ೂರಿದರೆ ತಕ್ಷಣ ಅವರಿಗೆ ರಕ್ಷಣೆ ನೀಡಬೇಕೆಂದು ಸೂಚನೆ ನೀಡಲಾಗಿದೆ. ಕ್ರಮಕೈಗೊಳ್ಳದ ಅಧಿಕಾರಿಗಳಿಗೆ ನೋಟಿಸ್ ನೀಡಲಾಗುವುದು. ಅಲ್ಲದೇ, ಎಲ್ಲಾ ಸರ್ಕಾರಿ ಕಟ್ಟಡಗಳ ಮೇಲೆ ಮಕ್ಕಳ ಸಹಾಯವಾಣಿ ಮಾಹಿತಿ ಪ್ರದರ್ಶಿಸಲು ಸೂಚನೆ ನೀಡಿದರು.

ಇತ್ತೀಚೆಗೆ ಲೋಕಾಪುರ ಖಾಸಗಿ ಶಾಲೆಯಲ್ಲಿ ನಡೆದ ಬಸ್ ಪಲ್ಟಿ ಪ್ರಕರಣ ಸಂಬಂಧವಾಗಿ ಶಾಲೆಗೆ ನೋಟಿಸ್ ನೀಡಿ ಅದರ ವರದಿಯನ್ನು ಆಯೋಗಕ್ಕೆ ಕಳುಹಿಸಬೇಕೆಂದು ಸೂಚನೆ ನೀಡಲಾಗಿದೆ. ಕೆಲವು ಶಾಲೆ ಹಾಗೂ ಹಾಸ್ಟೆಲ್‌ಗಳಲ್ಲಿ ಆಹಾರದ ಗುಣಮಟ್ಟ ಕಳಪೆಯಾಗಿರುವ ಬಗ್ಗೆ ತಕ್ಷಣ ಕ್ರಮಕೈಗೊಳ್ಳಿ. ಶೂನ್ಯ ಅಥವಾ ಐದಕ್ಕಿಂತ ಕಡಿಮೆ ಮಕ್ಕಳ ದಾಖಲಾತಿ ಇರುವ ಹಾಗೂ ಮುಚ್ಚಿದ ಶಾಲೆಗಳ ಪಟ್ಟಿ ಆಯೋಗಕ್ಕೆ ಸಲ್ಲಿಸಲು ತಿಳಿಸಿದರು.

ಶಕ್ತಿ ಯೋಜನೆಯು ಆರಂಭವಾದ ಬಳಿಕ ವಿದ್ಯಾರ್ಥಿಗಳಿಗೆ ಸಾರಿಗೆ ಸೌಲಭ್ಯ ಕೊರತೆಯಾಗಿ, ವಿದ್ಯಾರ್ಥಿಗಳು ಬಸ್ಸು ಬಾಗಿಲುಗಳಲ್ಲಿ ನಿಂತು ಪ್ರಯಾಣಿಸುವ ದೃಶ್ಯಗಳು ಹೆಚ್ಚಾಗಿವೆ. ಇದನ್ನು ಗಮನಿಸಿ ಬಸ್ ನಿರ್ವಾಹಕರಿಗೆ ಮಕ್ಕಳ ರಕ್ಷಣಾ ಕಾಯ್ದೆಯ ಕುರಿತು ತರಬೇತಿ ನೀಡಿ, ಬಸ್ಸಿನಲ್ಲಿ ಪ್ರಯಾಣಿಸುವ ಮಕ್ಕಳಿಗೆ ಸೂಕ್ತ ಮಾಹಿತಿ ನೀಡುವ ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾಗಿದೆ. ಬಸ್ ನಿಲ್ದಾಣಗಳಲ್ಲಿ ಅಗತ್ಯ ಮೂಲಸೌಕರ್ಯ ಒದಗಿಸುವಂತೆಯೂ ಸೂಚನೆ ನೀಡಿದರು.

ಜಾಲಿಹಾಳ್ ಬಿಸಿಎಂ ಹಾಸ್ಟೆಲ್‌ನಲ್ಲಿ ಮೂಲಸೌಕರ್ಯಗಳ ಕೊರತೆಯಿದ್ದು, ತಕ್ಷಣ ಸೂಕ್ತ ವ್ಯವಸ್ಥೆ ಮಾಡಬೇಕೆಂದು ಸೂಚನೆ ಇದೆ. ಚಿಕ್ಕ ಮುಚ್ಚಳ ಗುಡ್ಡ ವಸತಿ ನಿಲಯದ ಸಿಬ್ಬಂದಿ ಸಮಯ ಪಾಲನೆ ಮಾಡದಿರುವುದು, ಶೌಚಾಲಯದ ಸ್ವಚ್ಛತೆ ಕೊರತೆಯಿರುವುದು ಹಾಗೂ ಆಹಾರದ ಗುಣಮಟ್ಟ ದುರ್ಬಲವಾಗಿದೆ. ಒಂದು ಕೋಣೆಯಲ್ಲಿ 10–12 ವಿದ್ಯಾರ್ಥಿಗಳನ್ನು ಇರಿಸಲಾಗುತ್ತಿದೆ. ಈ ಎಲ್ಲಾ ಸಮಸ್ಯೆಗಳಿಗೆ ತಕ್ಷಣ ಪರಿಹಾರ ಕಂಡುಕೊಳ್ಳಲು ತಿಳಿಸಿದರು.

# ಜಿ.ಪಂ ಸಿಇಓ ಶಶಿಧರ ಕುರೇರ ವಿವಿಧೆಡೆ ಭೇಟಿ ಜೆ.ಜೆ.ಎಂ ಯೋಜನೆ ಕಾಮಗಾರಿಗಳ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.25–ಜಿಲ್ಲೆಯ ಬಾದಾಮಿ ತಾಲೂಕಿನ ಹಳಗೇರಿ, ಸಾಗನೂರು, ಜಲಗೇರಿ ಹಾಗೂ ಬಂದಕೇರಿ ಗ್ರಾಮಗಳಿಗೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಶುಕ್ರವಾರ ಭೇಟಿ ನೀಡಿ ಜಲ ಜೀವನ ಮಿಷನ್ ಯೋಜನೆಯ ಕಾಮಗಾರಿಗಳನ್ನು ಪರಿಶೀಲಿಸಿದರು.

ಈ ವೇಳೆ ಮಾತನಾಡಿದ ಅವರು, ಜಲ ಜೀವನ ಮಿಷನ್ ಯೋಜನೆಯಡಿ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರು ಪೂರೈಸಲಾಗುತ್ತಿದೆ. ಈ ಯೋಜನೆಯಡಿ ಹಮ್ಮಿಕೊಂಡ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು. ಪ್ರತಿ ಮನೆಗೆ ನೀರು ಸರಬರಾಜು ಆಗುವ ನಿಟ್ಟಿನಲ್ಲಿ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು. ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ಒದಗಿಸುವುದು ಸರ್ಕಾರದ ಮೂಲಭೂತ ಕಾರ್ಯಗಳಲ್ಲಿ ಒಂದಾಗಿದೆ. ಕಾರಣ ಕಾಲಕಾಲಕ್ಕೆ ಜಲಮೂಲ, ಜಲಸಂಗ್ರಹ ಸ್ವಚ್ಛವಾಗಿರುವಂತೆ ನೋಡಿಕೊಳ್ಳಬೇಕೆಂದು ಸೂಚಿಸಿದರು.

ಗ್ರಾಮೀಣ ಭಾಗದಲ್ಲಿ ಜಲಮೂಲಗಳು ಉತ್ತಮವಾಗಿದ್ದು, ಜನರ ಆರೋಗ್ಯದ ಮೇಲೆ ನೀರು ನಿರ್ವಹಣೆ ಮುಖ್ಯಪಾತ್ರ ವಹಿಸುತ್ತದೆ. ನೀರಿನ ಸಂಪರ್ಕಗಳನ್ನು ಕಾಲಕಾಲಕ್ಕೆ ಮೇಲ್ವಿಚಾರಣೆ ಮಾಡುವುದು ಅಗತ್ಯವಾಗಿದೆ. ಯೋಜನೆ ಸಮರ್ಪಕ ಅನುಷ್ಠಾನದಲ್ಲಿ ಜನರ ಸಹಭಾಗಿತ್ವ ಮುಖ್ಯವಾಗಿದ್ದು, ಗ್ರಾಮಗಳಲ್ಲಿ ಸಣ್ಣ ದುರಸ್ತಿಗಳನ್ನು ಕೈಗೊಂಡು ದಿನದ 24 ಗಂಟೆಗಳ ಕಾಲ ಶುದ್ಧ ಕುಡಿಯುವ ನೀರು ಸರಬರಾಜು ಮಾಡಲು ಅಗತ್ಯ ಕ್ರಮ ವಹಿಸಲು ಸಂಬಂಧಿಸಿದ ಅಧಿಕಾರಿಗಳು ನಿಗಾವಹಿಸಬೇಕು ಎಂದು ಕುರೇರ ಹೇಳಿದರು.

ಜಲಜೀವನ್ ಮಿಷನ್ ಯೋಜನೆ ಅನುಷ್ಠಾನಗೊಳಿಸುತ್ತಿರುವ ಗ್ರಾಮಗಳಲ್ಲಿನ ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಗ್ರಾಮ ಪಂಚಾಯಿತಿಗೆ ಹಸ್ತಾಂತರಿಸುವ ಮೂಲಕ ಕಾರ್ಯಾಚರಣೆ ಮತ್ತು ನಿರ್ವಹಣೆ ನೀತಿ ಜಾರಿಗೆ ತರಲು ಸೂಚನೆ ನೀಡಿದರು. ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ನೀಡಲಾಗಿರುವ ಫೀಲ್ಡ್ ಟೆಸ್ಟ್ ಕಿಟ್ ಬಳಸಿಕೊಂಡು ನೀರಿನ ಶುದ್ಧತೆಯನ್ನು ಪರೀಕ್ಷಿಸಲು ತಿಳಿಸಿದರು. ಗ್ರಾಮದ ನೀರು, ನೈರ್ಮಲ್ಯ ಸಮಿತಿ ಸಭೆಗಳನ್ನು ನಡೆಸಿ ಪರಿಹಾರ ಒದಗಿಸುವಂತೆ ತಿಳಿಸಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ಆಕಾಶ್, ಬಾದಾಮಿ ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸತೀಶ ಮಾಕೊಂಡ ಸೇರಿದಂತೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಇದ್ದರು.

# ಬೀದರ ನಗರಸಭೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜುಲೈ.25 – 2022–23ನೇ ಸಾಲಿನ ಎಸ್.ಎಫ್.ಸಿ. ಮತ್ತು 2024–25ನೇ ಸಾಲಿನ ನಗರಸಭೆ ನಿಧಿ 24.10%, 7.25% ಮತ್ತು 5% ಯೋಜನೆಯಡಿ ಫಲಾನುಭವಿಗಳ ಆಯ್ಕೆಗಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ವೈಯಕ್ತಿಕ ಫಲಾನುಭವಿಗಳ ಬಡವರ ಕಲ್ಯಾಣ ಕಾರ್ಯಕ್ರಮಗಳ ಫಲಾನುಭವಿಗಳ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯೋಜನೆಗಳ ವಿವರ: ಎಸ್‌ಎಫ್‌ಸಿ–ನಗರಸಭೆ ವ್ಯಾಪ್ತಿಯ ಅಂಗವೀಕಲ ಜನರಿಗೆ ಹಣಕಾಸಿನ ಸಹಾಯ ಧನ (7.25% ಯೋಜನೆ), ನಗರಸಭೆ ನಿಧಿ–ಐಎಎಸ್/ಕೆಎಎಸ್ ಪರೀಕ್ಷಯ ತೈಯಾರಿ ಮಾಡಲು ಬಯಸುವ ಪರಿಶಿಷ್ಟ ಜಾತಿಯ ಆಕಾಂಕ್ಷಿಗಳಿಗೆ/ವಸತಿ ನಿಲಯಗಳಿಗೆ ಪುಸ್ತಕಗಳ (ಐಎಎಸ್/ಕೆಎಎಸ್ ಪರೀಕ್ಷಯ ತೈಯಾರಿಗೆ ಪೂರಕವಾಗುವ ಅಧ್ಯಯನ ಸಾಮಗ್ರಿ) ವಿತರಣೆ, ಪರಿಶಿಷ್ಟ ಜಾತಿಯ ತರಕಾರಿ/ಹಣ್ಣು ಮಾರಾಟಗಾರರಿಗೆ ತಳ್ಳುಗಾಡಿ ವಿತರಣೆ, ಅನಾರೋಗ್ಯದಿಂದ ಹಾಸಿಗೆ ಹಿಡಿದು ಕುಟುಂಬದ ನಿರ್ವಹಣೆ ಸಾಧ್ಯವಾಗದ ಪರಿಶಿಷ್ಟ ಜಾತಿಯ ರೋಗಿಗಳಿಗೆ ಸಹಾಯಧನ/ಶಸ್ತ್ರ ಚಿಕಿತ್ಸೆಗೆ ಒಳಗಾದ ಕಡುಬಡವರಿಗೆ ಸಹಾಯ ಧನ ನಿಡುವುದು, ನಗರಸಭೆ ನಿಧಿ (ಟಿ.ಎಸ್.ಪಿ.) ಪರಿಶಿಷ್ಟ ಪಂಗಡದ ತರಕಾರಿ/ಹಣ್ಣು ಮಾರಾಟಗಾರರಿಗೆ ತಳ್ಳುಗಾಡಿ ವಿತರಣೆ, ಐಎಎಸ್/ಕೆಎಎಸ್ ಪರೀಕ್ಷಯ ತೈಯಾರಿ ಮಾಡಲು ಬಯಸುವ ಪರಿಶಿಷ್ಟ ಪಂಗಡದ ಆಕಾಂಕ್ಷಿಗಳಿಗೆ/ವಸತಿ ನಿಲಯಗಳಿಗೆ ಪುಸ್ತಕಗಳ (ಐಎಎಸ್/ಕೆಎಎಸ್ ಪರೀಕ್ಷಯ ತೈಯಾಗೆ ಪೂರಕವಾಗುವ ಅಧ್ಯಯನ ಸಾಮಗ್ರಿ) ವಿತರಣೆ, ನಗರಸಭೆ ನಿಧಿ(5%)– ಐಎಎಸ್/ಕೆಎಎಸ್ ಪರೀಕ್ಷಯ ತೈಯಾರಿ ಮಾಡಲು ಬಯಸುವ ಅಂಗವೀಕಲ ಆಕಾಂಕ್ಷಿಗಳಿಗೆ/ವಸತಿ ನಿಲಯಗಳಿಗೆ ಪುಸ್ತಕಗಳ (ಐಎಎಸ್/ಕೆಎಎಸ್ ಪರೀಕ್ಷಯ ತೈಯಾಗೆ ಪೂರಕವಾಗುವ ಅಧ್ಯಯನ ಸಾಮಗ್ರಿ) ವಿತರಣೆ, ಅಂಗವೀಕಲರು ಸ್ವಯಂ ಉದ್ಯೋಗ ಮಾಡಿಕೋಳ್ಳಲು ಕಂಪ್ಯೂಟರ್‌ಗಳ ವಿತರಣೆ.

ಅರ್ಹರು ಅಗತ್ಯ ದಾಖಲಾತಿಗಳೊಂದಿಗೆ ದಿನಾಂಕ:14–08–2025ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಬೀದರ ನಗರಸಭೆಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಅಸಮಾನತೆಯ ವಿರುದ್ಧ ಸಮರ ಸಾರಿದ ಶರಣರು : ಶಂಕ್ರಪ್ಪ ಗಾಂಜಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಯಲಬುರ್ಗಾ ಮೌಢ್ಯತೆ ಹಾಗೂ ಸಮಾಜದಲ್ಲಿರುವ ಅಸಮಾನತೆಯನ್ನು ಹೋಗಲಾಡಿಸಲು ಹನ್ನೆರಡನೆ ಶತಮಾನದ ಶಿವಶರಣರು ಸಮರ ಸಾರಿ ಐಕ್ಯತೆಗೆ ಶ್ರಮಿಸಿದ ಇತಿಹಾಸ ನಿಜಕ್ಕೂ ರೋಚಕವಾಗಿದೆ ಎಂದು ಶಿಕ್ಷಣ ಇಲಾಖೆಯ ನಿವೃತ್ತ ಉಪನಿರ್ದೇಶಕರಾದ ಶಂಕ್ರಪ್ಪ ಗಾಂಜಿ ಹೇಳಿದರು.

ಪಟ್ಟಣದ ಸಾಯಿಪ್ಯಾಲೇಸ್‌ದಲ್ಲಿ ಬಸವ ಶಿವಯೋಗ ಸಮಿತಿಯವರು ಆಯೋಜಿಸಿದ ಶರಣರಾದ ನಿಜಸುಖಿ ಹಡಪದ ಅಪ್ಪಣ್ಣ, ಶಂಕರ ದಾಸಿಮಯ್ಯ! ಅಕ್ಕನಾಗಮ್ಮರವವ ಶರಣೋತ್ಸವ ಹಾಗೂ ವಚನ ಪಿತಾಮಹ ಫ.ಗು. ಹಳಕಟ್ಟಿರವರ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು ಶರಣ–ರ ಚಿಂತನೆಗಳನ್ನು ಮನನ ಮಾಡಿಕೊಳ್ಳುವ ಮೂಲಕ ನಮ್ಮಲ್ಲಿರುವ ಮಲಿನತೆಯನ್ನು ಕಳೆದುಕೊಳ್ಳಬೇಕಾಗಿದೆ ಅವರ ಅಮೃತಧಾರೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಬದುಕನ್ನು ಪಾವಿತ್ರ್ಯತಯಲ್ಲಿ ಕಟ್ಟಿ–ಕೊಂಡು ಶರಣರ ಆಶಯಗಳನ್ನು ಪೂರೈಸಬೇಕಾಗಿದೆ . ನಾವು ಶರಣರ ತತ್ವ ಆದರ್ಶಗಳನ್ನು ಪರಿಪಾಲಿಸಿದಾಗ ನಮ್ಮ ಜೀವನ ಪಾವನವಾಗುತ್ತದೆ ಎಂದರು.

ಬಸವತತ್ವದ ಅನುಯಾಯಿಗಳಾದ ಶರಣರಾದ ಅಮರೇಶ ಸೋಮನಾಳ ಹಾಗೂ ರುದ್ರಪ್ಪ ಹಳ್ಳಿ ರವರು ಶರಣರಾದ ಹಡಪದ ಅಪ್ಪಣ್ಣ ! ಶಂಕರ ದಾಸಿಮಯ್ಯ, ಶರಣೆ ಅಕ್ಕನಾಗಮ್ಮ ಹಾಗೂ ವಚನ ಪಿತಾಮಹ ಫ.ಗು, ಹಳಕಟ್ಟಿರವರ ಬಗ್ಗೆ ಉಪನ್ಯಾಸ ನೀಡುತ್ತಾ ಬೇಸಿಗೆಕಾಲದಲ್ಲಿ ಬರೀಗಾಲಿನಿಂದ ಬಸವಣ್ಣನ ಸಂದೇಶವನ್ನು ಸಾರಲು ಹೋದ ಹಡಪದ ಜೀವಣ್ಣನ ಕಾಲಿನಲ್ಲಿ ಗುಳ್ಳೆಗಳು ಬಂದಾಗ ಬಸವಣ್ಣನವರು ಆತನಿಗೆ ಮುಲಾಮ ಹಚ್ಚಿ ಇಲಾಜು ಮಾಡಲು ಹೋದಾಗ ಜೀವಣ್ಣ ಬಸವಣ್ಣನಿಗೆ ಅಣ್ಣನಾಗಿ, ಅಪ್ಪನಾಗಿ ಕಾಣಿಸಿಕೊಂಡಾಗ ಅಂದಿನಿಂದ ಜೀವಣ್ಣ ಹಡಪದ ಅಪ್ಪಣ್ಣನಾದನೆಂದು ವಿವರಿಸಿದರು. ಶಿಕ್ಷಕ ಬಸವರಾಜ ಕೊಂಡಗುರಿ, ಆರ್.ಡಿ.ಸಿ.ಸಿ ಬ್ಯಾಂಕ್ ನಿರ್ದೇಶಕರಾದ ಶೇಖರಗೌಡ ಉಳ್ಳಾಗಡ್ಡಿ ಇನ್ನಿತರರು ಮಾತನಾಡಿದರು,

ಬಸವ ಶಿವಯೋಗ ಸಮಿತಿಯ ಅಧ್ಯಕ್ಷರಾದ ಸಂಗಣ್ಣ ಟೆಂಗಿನಕಾಯಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ ಶರಣರ ವಚನಗಳನ್ನು ಮನನ ಮಾಡಿಕೊಳ್ಳುವ ಮೂಲಕ ಜೀವನವನ್ನು ಕಟ್ಟಿಕೊಂಡಾಗ ಸಮಾಜದಲ್ಲಿ ಎಲ್ಲಾ ಕೀಳರಿಮೆ ಹೋಗಿ ಸಮ ಸಮಾಜವನ್ನು ಕಟ್ಟಿ ಕೊಂಡಾಗ ನಾವು ಮಾನವರಾಗಿ ಹುಟ್ಟಿದ್ದು ಸಾರ್ಥಕ ವಾಗುತ್ತದೆ ಎಂದರು. ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ವೀರಣ್ಣ ನಿಂಗೋಜಿ, ಶಿವಪ್ಪ ಶಾಸ್ತ್ರೀ ಹಡಪದ, ಸಿದ್ಧಲಿಂಗಪ್ಪ ಶ್ಯಾಗೋಟಿ, ವೀರುಪಾಕ್ಷಪ್ಪ ಹಡಪದ, ಪರುಶರಾಮ, ಅಶೋಕ ಪಾಟೀಲ, ರುದ್ರಗೌಡ ಗೋಣಿ, ವೀರೇಶ ಸಂಗನಾಳ, ವೀರೇಶ ಮಾರನಾಳ, ದೇವಪ್ಪ ವಾಲ್ಮೀಕಿ, ಅನ್ನಪೂರ್ಣ ಟೆಂಗಿನಕಾಯಿ, ಶರಣಪ್ಪ ಹವಳದ, ಮಲ್ಲಣ್ಣ ಟೆಂಗಿನಕಾಯಿ, ಹನುಮಂತಪ್ಪ ದಾನಕೈ, ವೀರೇಶ ಟೆಂಗಿನಕಾಯಿ, ಬಸವರಾಜ ಹಳ್ಳಿ , ಫಕೀರಪ್ಪ ಗಾಣಗೇರ, ಸಿದ್ದಯ್ಯ ಕೊಣ್ಣೂರು, ಇನ್ನಿತರರು ಉಪಸ್ಥಿತರಿದ್ದರು.

# ಸೋಲಪೂರ: ಶಾಲಾಭಿವೃದ್ಧಿ ಸಮಿತಿಗೆ ಅಧ್ಯಕ್ಷ, ಉಪಾಧ್ಯಕ್ಷ ಹಾಗೂ ಸದಸ್ಯರ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜುಲೈ.25– ಬೀದರ ತಾಲ್ಲೂಕಿನ ಗಾದಗಿ ಗ್ರಾಮ ಪಂಚಾಯತ್‌ದಲ್ಲಿ ಬರುವ ಸೋಲಪೂರ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗೆ ಅಧ್ಯಕ್ಷರಾಗಿ ನರಸಗೊಂಡ ಮೇತ್ರೆ ಹಾಗೂ ಉಪಾಧ್ಯಕ್ಷರಾಗಿ ರವಿ ಮಲ್ಕನೋರ ಹಾಗೂ ಸದಸ್ಯರಾಗಿ ನರಸಪ್ಪಾ, ಬಸಂತಪೂರ, ನಾಗಪ್ಪಾ, ಚಂದ್ರಶೇಖರ, ರವೀಂದ್ರ, ಗಣಪತಿ, ಧನಗೊಂಡ, ರಾಜು ಮಡಿವಾಳ, ಕುಬೇರಗೊಂಡ, ದೇವಿಂದ್ರ, ಸಂಗೀತಾ, ಅಂಬಿಕಾ, ಪ್ರೀಯಾಂಕಾ, ಶ್ರೀದೇವಿ ಭರತ, ಶ್ರೀದೇವಿ ರಮೇಶ, ಗುರಮ್ಮಾ, ವಿಜಯಲಕ್ಷ್ಮೀ, ರಾಧಿಕಾ, ಜ್ಯೋತಿ ಅವರುಗಳು ಅವಿರೋಧವಾಗಿ ಆಯ್ಕೆಯಾದರು. ಶುಕ್ರವಾರದಂದು ಸೋಲಪೂರ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಸಭೆಯಲ್ಲಿ ಗಾದಗಿ ಗ್ರಾಮ ಪಂಚಾಯತ ಕಾರ್ಯದರ್ಶಿ ನಶಿರೋದ್ದಿನ್, ಸದಸ್ಯರಾದ ವೀರಶೆಟ್ಟಿ ಪಾಟೀಲ್, ಸೋಲಪೂರ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ಬೀನಾ ಕಾವಳೆ, ಶಿಕ್ಷಕ ಜ್ಞಾನೇಶ್ವರ ಪವಾರ ಆಯ್ಕೆ ಪ್ರಕ್ರಿಯೇ ನಡೆಸಿಕೊಟ್ಟರು.

# ಕರಜಗಿ ಬಸ್ ನಿಲ್ದಾಣದ ಕೆಸರು ಗದ್ದೆಯಲ್ಲಿ ಪ್ರಯಾಣಿಕರ ಪರದಾಟ ಕಂಡು ಕಾಣದಂತೆ ಕುಳಿತ ಅಧಿಕಾರಿಗಳು





ಮಲ್ಲಮ್ಮ ನುಡಿ ವಾರ್ತೆ

ಅಫಜಲಪೂರ:ಜು.25: ತಾಲೂಕಿನ ಕರಜಗಿ ಗ್ರಾಮದ ಬಸ್ ನಿಲ್ದಾಣ ಸ್ಥಿತಿ ಕೆಸರು ಗದ್ದೆಯಂತಾಗಿದೆ ಪ್ರಯಾಣಿಕರುಪರದಾಡುವಂತಪರಿಸ್ಥಿತಿ ಉದ್ಭವವಾಗಿದೆ.ಈ ಕುರಿತು ಗ್ರಾಮ ಪಂಚಾಯತನಿರ್ಲಕ್ಷವಹಿಸುತ್ತಿರುವದು ಸರಿಯಲ್ಲವೆಂದು ಕರುನಾಡ ವಿಜಯ ಸೇನೆ ತಾಲೂಕು ಅಧ್ಯಕ್ಷ ಸಿದ್ದು ಸುಲ್ತಾನಪುರಆಕ್ರೋಶವ್ಯಕ್ತಪಡಿಸಿದರು. ಗ್ರಾಮ ಪಂಚಾಯತ ಸದಸ್ಯರು ಹಾಗೂ ಅಧ್ಯಕ್ಷರು ಸ್ವಲ್ಪ ಕರಜಗಿ ಬಸ್ ನಿಲ್ದಾಣಕ್ಕೆ ಬಂದು ಪರಿಸ್ಥಿತಿ ವೀಕ್ಷಿಸಿ ಯಾವ ಮಟ್ಟಿಗೆ ಜನರು ಕೇಸರುಗದ್ದೆಯಲ್ಲಿ ಪರದಾಟ ಹಾಗೂ ನರಕ ಯಾತನೆಅನುಭವಿಸುತ್ತಿದ್ದಾರೆ ಎಂದು ತಮಗೆ ಅರಿವಿಗೆ ಬರುತ್ತದೆ, ಕೇವಲ ಹಾರ ತುರಾಯಿಗೋಸ್ಕರ ಹಾಗೂ ಭ್ರಷ್ಟಾಚಾರಕೊಸ್ಕರೆ ಅಧಿಕಾರಕ್ಕೆ ಬಂದರೆಸಾಲದು ಗ್ರಾಮದಲ್ಲಿ ಮೂಲಭೂತ ಸೌಕರ್ಯಗಳ ಸಮಸ್ಯೆ ನಿವಾರಣೆ ಮಾಡಿ ಅಗತ್ಯ ಸೌಲಭ್ಯ ಕಲ್ಪಿಸುವ ಕೆಲಸ ಮಾಡಬೇಕು, ಅಷ್ಟೇ ಅಲ್ಲದೆ ಮಣ್ಣೂರ ಮಾಶಾಳ, ಉಡಚಣ, ಹಾಗೂ ಅಫಜಲಪೂರಕ್ಕೆ ಸಂಪರ್ಕ ಕಲ್ಪಿಸುವ ಕೇಂದ್ರ ಬಿಂದು ನಮ್ಮ ಕರಜಗಿ ಗ್ರಾಮವಾಗಿದ್ದು ಹಲವಾರು ಬಸ್ ಗಳು ನಮ್ಮ ಗ್ರಾಮದ ಬಸ್ ನಿಲ್ದಾಣದ ಮುಖಾಂತರ ಚಲಿಸುತ್ತವೆ ಆದರೆ ನಮ್ಮ ಕರಜಗಿಯ ಬಸ್ ನಿಲ್ದಾಣ ಮಾತ್ರ ಕೃಷಿ ಹೊಂಡದಂತೆ ಹಾಗೂ ಕೆಸರು ಗದ್ದೆಯಂತೆ ಮಾರ್ಪಡಾಗಿದ್ದು ಪ್ರಯಾಣಿಕರು ಹಾಗೂ ಗ್ರಾಮಸ್ಥರು ಹಿಡಿ ಶಾಪ ಹಾಕುತಿದ್ದಾರೆ ಹಾಗಾಗಿ ಕೂಡಲೇ ಗ್ರಾಮ ಪಂಚಾಯತದವರು ಬಸ್ ನಿಲ್ದಾಣದಲ್ಲಿ ಬಿದ್ದಿರುವ ತಗ್ಗು ಗುಂಡಿಗಳನ್ನು ಮುಚ್ಚಿ ಪ್ರಯಾಣಿಕರಿಗೆ ತೊಂದರೆ ಯಾಗದಂತೆ ಅನುಕೂಲ ಮಾಡಿಕೊಡಬೇಕು ಎಂದರು.




ಬೀದರ: ಇತ್ತೀಚಿಗೆ ನಗರದ ಅಂಬೇಡ್ಕರ ಸರ್ಕಲ್ ಬಳಿ ಭಿಕ್ಷಾಟನೆಯಲ್ಲಿ ತೊಡಗಿದ್ದ ಮಗುವನ್ನು ರಕ್ಷಿಸಿ ಬ್ರಿಮ್ಸ್ ಮಕ್ಕಳ ಘಟಕಕ್ಕೆ ದಾಖಲು ಮಾಡಲಾಗಿದ್ದ ಮಗುವಿನ ಆರೋಗ್ಯ ವಿಚಾರಿಸಲು ಬ್ರಿಮ್ಸ್ ಆಸ್ಪತ್ರೆಗಿಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಭೇಟಿ ನೀಡಿ ಮಗುವನ್ನು ಎತ್ತಿಕೊಂಡು ಯೋಗಕ್ಷೇಮ ವಿಚಾರಿಸಿದರು.

## ತಹಸೀಲ್ದಾರ ಕ್ರಮಕ್ಕೆ ಬಿಜೆಪಿ ಜಿಲ್ಲಾಧ್ಯಕ್ಷರ ಖಂಡನೆ

ಮಲ್ಲಮ್ಮನುಡಿವಾರ್ತೆಹುಮನಾಬಾದ್: ಇಲ್ಲಿನತಹಸೀಲ್ದಾರರವರು ಶಾಸಕರಿಗೆ ಅಗೌರವ ತೋರಿದ್ದಾರೆ ಎಂದು ಆರೋಪಿಸಿ ಬಿಜೆಪಿ ಜಿಲ್ಲಾ ಅಧ್ಯಕ್ಷ ಸೋಮನಾಥ ಪಾಟೀಲ ರವರು ತಹಸೀಲ್ದಾರ ವಿರುದ್ಧ ಪ್ರತಿಭಟನೆ ನಡೆಸಿದ್ದಾರೆ. ತಹಸೀಲ್ದಾರರ ಮೇಲೆ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಪಾಟೀಲ, ಬಸವರಾಜ ಆರ್ಯ, ಸೇರಿದಂತೆ ಇತರರಿದ್ದರು.

# ಲೋಕಾಯುಕ್ತ ದಾಳಿ; ಕಾರ್ಯನಿರ್ವಾಹಕ ಇಂಜಿನಿಯರ್‌ಗೆ ಸೇರಿದ ಕೋಟ್ಯಂತರ ಮೌಲ್ಯದ ಆಸ್ತಿ ಪತ್ತೆ





ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 25 : ಕಲಬುರಗಿ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಾರ್ಯನಿರ್ವಾಹಕ ಇಂಜಿನಿಯರ್ ಆಗಿ ಕೆಲಸ ನಿರ್ವಹಿಸುತ್ತಿದ್ದ ಸುನಿಲ್ ಕುಮಾರ್ ಪ್ರಭಾ ಚಂದ್ರಪ್ರಕಾಶ್ ಪ್ರಭಾ ಅವರಿಗೆ ಸೇರಿದ ನಾಲ್ಕು ಸ್ಥಳಗಳ ಮೇಲೆ ಬುಧವಾರ ಲೋಕಾಯುಕ್ತ ದಾಳಿ ನಡೆದಿತ್ತು.

ಈ ವೇಳೆ ಕೋಟ್ಯಂತರ ರೂ. ಮೌಲ್ಯದ ಆಸ್ತಿ ಪತ್ತೆಯಾಗಿದೆ.

2 ಕೋಟಿ 24 ಲಕ್ಷ 57 ಸಾವಿರ ರೂ. ಮೌಲ್ಯದ ಒಟ್ಟು ಸ್ಥಿರ ಆಸ್ತಿ ಪತ್ತೆಯಾಗಿದ್ದು, ಅದರಲ್ಲಿ 3 ಸೈಟ್, ಒಂದು ಮನೆ ಮತ್ತು ಕೃಷಿ ಭೂಮಿ ಸೇರಿದೆ. ಅದೇ ರೀತಿ ಒಟ್ಟು 2 ಕೋಟಿ 35 ಲಕ್ಷ 23 ಸಾವಿರ 897 ರೂ. ಯ ಚರ ಆಸ್ತಿ ಪತ್ತೆಯಾಗಿದ್ದು, ಇದರಲ್ಲಿ 15 ಲಕ್ಷ 75 ಸಾವಿರ 660 ರೂ. ನಗದು, 1 ಕೋಟಿ 26 ಲಕ್ಷ 60 ಸಾವಿರ ರೂ. ಮೌಲ್ಯದ ಆಭರಣ ವಸ್ತು, 12 ಲಕ್ಷ 50 ಸಾವಿರ ರೂ. ಮೌಲ್ಯದ ವಾಹನಗಳು ಸೇರಿದಂತೆ ಇತರ ವಸ್ತುಗಳು ಪತ್ತೆಯಾಗಿವೆ ಎಂದು ತಿಳಿದು ಬಂದಿದೆ.

# ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ವರಿಷ್ಠರ ವಿವೇಚನೆಗೆ ಬಿಟ್ಟ ವಿಚಾರ: ಸಚಿವ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜು.25: ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರ ಬದಲಾವಣೆ ಪಕ್ಷದ ವರಿಷ್ಠರ ವಿವೇಚನೆಗೆ ಬಿಟ್ಟ ವಿಚಾರವಾಗಿದೆ ಎಂದು ರಾಜ್ಯದ ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಖಾತೆ ಮತ್ತು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಹೇಳಿದರು.

ನಗರಕ್ಕೆ ಶುಕ್ರವಾರ ಖಾಸಗಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಆಗಮಿಸಿದ ಸಂದರ್ಭದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸದ್ಯಕ್ಕಂತೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ (ಕೆಪಿಸಿಸಿ) ಅಧ್ಯಕ್ಷ ಸ್ಥಾನ ಖಾಲಿ ಇಲ್ಲ, ನನಗೆ ಯಾವ ಜವಾಬ್ದಾರಿ ಕೊಟ್ಟಿದ್ದಾರೆ ಅದನ್ನು ನಾನು ಪ್ರಮಾಣಿಕತೆಯಿಂದ ನಿಭಾಯಿಸುವೆ ಎಂದರು.

ಮಹದಾಯಿ ಯೋಜನೆ ಕುರಿತಾಗಿ ಪ್ರತಿಕ್ರಿಯಿಸಿದ ಅವರು, ಮಹದಾಯಿ ಯೋಜನೆಯ ಕುಡಿಯುವ ನೀರಿನ ಬಳಕೆ ಕುರಿತಾಗಿ ಈಗಾಗಲೇ ಪ್ರಸ್ತಾವನೆ ನೀಡಿದ್ದೇವೆ, ಈ ಯೋಜನೆ ತಡೆಯುವ ಕೆಲಸ ಆಗಬಾರದು, ಇದರ ಕುರಿತು ಯೋಜನೆ ರೂಪಿಸಿದ್ದೇವೆ. ಅರಣ್ಯ ಇಲಾಖೆಯಿಂದ ಏನೆಲ್ಲ ನಿರ್ಧಾರ ಕೈಗೊಳ್ಳಬೇಕು ಎನ್ನುವುದನ್ನು ತೀರ್ಮಾನಿಸಲಾಗಿದೆ. ಇದು ಅಭಿವೃದ್ಧಿಯ ಯೋಜನೆ. ಇದರ ಬಗ್ಗೆ ಸರ್ಕಾರ ಮತ್ತಷ್ಟು ಚರ್ಚೆ ನಡೆಸಲಿದೆ. ಕೇವಲ ಗೋವಾ ರಾಜ್ಯದ ಬಗ್ಗೆ ಆಸಕ್ತಿ ವಹಿಸದೆ ಕೇಂದ್ರ ಸರ್ಕಾರ ಎಲ್ಲ ರಾಜ್ಯಗಳಿಗೆ ಸಮಾನತೆಯಿಂದ ನೋಡಬೇಕಾಗುತ್ತದೆ ಎಂದರು.

ಮುಡಾ ಹಗರಣ ಕುರಿತಾಗಿ ಪ್ರತಿಕ್ರಿಯಿಸಿದ ಸಚಿವ ಖಂಡ್ರೆಯವರು, ಬಿಜೆಪಿಯು ಈಡಿ, ಐಟಿ, ಸಿಬಿಐ ಸಂಸ್ಥೆಗಳನ್ನು

ಬಳಸಿಕೊಂಡು ಪ್ರಜಾಪ್ರಭುತ್ವದ ದುರ್ಬಳಕೆ ಮಾಡುತ್ತಿದೆ. ಸಿದ್ದರಾಮಯ್ಯ ಮತ್ತು ಅವರ ಕುಟುಂಬದವರ ಕೈವಾಡವಿಲ್ಲ ಎನ್ನುವುದು ಸಾಬೀತಾಗಿದೆ. ಸುಖಾ ಸುಮ್ಮನೆ ಸಿಎಂ ಅವರ ಮೇಲೆ ಆರೋಪ ಮಾಡುವುದು ಸರಿಯಲ್ಲ. ಬಿಜೆಪಿಯವರು ಸಿದ್ದರಾಮಯ್ಯನವರ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು.

# ಪತ್ರಕರ್ತರು ಪ್ರಜಾಪ್ರಭುತ್ವ ವ್ಯವಸ್ಥೆಯ ನಾಲ್ಕನೇ ಅಂಗ:ಅಮಿತಕುಮಾರ ಕುಲಕರ್ಣಿ




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.25: ಪತ್ರಕರ್ತರು ಪ್ರಜಾಪ್ರಭುತ್ವ ವ್ಯವಸ್ಥೆಯ ನಾಲ್ಕನೇ ಅಂಗವಾಗಿ ಸಾಮಾಜಿಕ ಸೇವೆಯನ್ನು ನೀಡುತ್ತಾರೆ, ಅಧಿಕಾರಗಳು ತಲುಪದ ಸ್ಥಳ ಯಲ್ಲಿ ಇರುವ ಸಮಸ್ಯೆಗಳು, ತೊಂದರೆಗಳು ನಮ್ಮ ಗಮನಕ್ಕೆ ತರುವರು ಎಂದು ಕಮಲನಗರ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ ಹೇಳಿದರು.

ಪಟ್ಟಣದ ಡಾ. ಚನ್ನಬಸವ ಪಟ್ಟದ್ದೇವರ ಶಾಖಾ ಮಠದಲ್ಲಿ ಶುಕ್ರವಾರ ಆಯೋಜನೆ ಮಾಡಿದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು,

ಪತ್ರಕರ್ತರ ವರದಿ ಜನರ ಸಂವೇದನೆಗಳೊಂದಿಗೆ ಇರುವುದರಿಂದ ಸಮಾಜದಲ್ಲಿನ ಸೂಕ್ಷ್ಮತೆಗಳ ಬಗ್ಗೆ ಒಳನೋಟವಿರುತ್ತದೆ. ಸಮಾಜದ ಅನೇಕ ವಿಷಯಗಳನ್ನು ಅಧಿಕಾರಗಳ ಗಮನನ್ನು ತರುವ ಕನ್ನಡಿ ಹಾಗೆ ಪತ್ರಕರ್ತರು ತಮ್ಮ ಕಾರ್ಯ ಮಾಡುವರು ಎಂದು ಹೇಳಿದರು.

ಸಾಮಾಜಿಕ ಹೋರಾಟಗಾರ ಗುರುನಾಥ ವಡ್ಡೆ ಪ್ರಸ್ತಾವಿಕವಾಗಿ ಮಾತನಾಡಿ, ಪತ್ರಕರ್ತರು ಯಾವುದೇ ಭಯ ವಿಲ್ಲದೆ ಸಮಾಜ ಸೇವೆಯನ್ನು ಮಾಡಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಮಲನಗರ ಗ್ರಾಮ ಪಂಚಾಯತ ಅಧ್ಯಕ್ಷೆ ಸುಶೀಲಾ ಸಜ್ಜನಶೆಟ್ಟಿ, ಸಿ.ಪಿ.ಐ ಶ್ರೀಕಾಂತ ಅಲ್ಲಾಪುರೆ, ಸಮುದಾಯ ಸರಕಾರಿ ಆಸ್ಪತ್ರೆ ಆಡಳಿತ ಅಧಿಕಾರಿ ಶ್ರೀಮಂತ ಮಡಿವಾಳ, ಲಿಂಗಾನಂದ ಮಹಾಜನ, ರಾಜಕುಮಾರ ಬಿರಾದಾರ, ಪ್ರವೀಣ ಬಿರಾದಾರ, ಮಹೇಶ ಸಜ್ಜನಶೆಟ್ಟಿ ಸೇರಿದಂತೆ ಅನಕರು ಇದ್ದರು.

ಈ ಸಂದರ್ಭದಲ್ಲಿ ಪತ್ರಕರ್ತರಿಗೆ ಸನ್ಮಾನ ಮಾಡಿ ಗೌರವಿಸಲಾಯಿತು.

ಪರಮೇಶ ರಾಂಪುರೆ ಸ್ವಾಗತಿಸಿದರು, ಸಿ.ಎಮ್. ಗಳಗೆ ನಿರೂಪಣೆ ಮಾಡಿದರು.

## ಭಾರೀ ಮಳೆ: ಮುಲ್ಲಾಮಾರಿ ನದಿಗೆ ಪ್ರವಾಹ



ಕಲಬುರಗಿ:ಜು.25: ಚಿಂಚೋಳಿ ತಾಲ್ಲೂಕಿನಲ್ಲಿ ಸುರಿಯುತ್ತಿರುವ ಅಬ್ಬರದ ಮಳೆಯಿಂದ ಕೆಳದಂಡೆ ಮುಲ್ಲಾ ಮಾರಿ ಜಲಾಶಯದ ಅಚ್ಚುಕಟ್ಟು ಪ್ರದೇಶದಲ್ಲಿ ಜೋರಾದ ಮಳೆ ಬೀಳುತ್ತಿದ್ದರಿಂದ ಜಲಾಶಯದಲ್ಲಿ ಒಳ ಹರಿವು ಹೆಚ್ಚಾಗುತ್ತಿದ್ದು ಜಲಾಶಯ ಸುರಕ್ಷತೆ ಕಾಪಾಡುವುದಕ್ಕಾಗಿ ಎರಡು ಗೇಟನಿಂದ ನದಿಗೆ ನೀರು ಹರಿ ಬಿಡಲಾಗುತ್ತಿದೆ ಎಂದು ಯೋಜನೆಯ ಸಹಾಯಕ ಎಂಜಿನಿಯರ್ ವಿನಾಯಕ ಚೌಹಾಣ್ ಅವರು ತಿಳಿಸಿದ್ದಾರೆ. ಕೆಳದಂಡೆ ಮುಲ್ಲಾ ಮಾರಿ ಯೋಜನೆಯ ಜಲಾಶಯದಲ್ಲಿ ಒಳಹರಿವು 280 ನೀರಿನ ಪ್ರಮಾಣ ಹೆಚ್ಚಾಗುತ್ತಿದ್ದು ಗುರುವಾರ 2 ಗೇಟನ್ನು ತಲಾ ಒಂದು ಅಡಿ ಮೇಲೆತ್ತಿ 1200 ಕ್ಯೂಸೆಕ್ ನೀರು ನದಿಗೆ ಹರಿದು ಬಿಡಲಾಗುತ್ತಿದೆ. ಮುಲ್ಲಾ ಮಾರಿ ನದಿ ಪಾತ್ರದ ಚಿಮ್ಮನಚೋಡ, ತಾಜಲಾಪುರ, ಕನಕಪುರ, ಗೌಡನಹಳ್ಳಿ, ನಿಮಾಹೊಸಳ್ಳಿ, ಚಿಂಚೋಳಿ, ಪೋಲಕಪಳ್ಳಿ, ಅಣವಾರ, ಗರಗಪಳ್ಳಿ, ಇರಗಪಳ್ಳಿ, ಭಕ್ತಂಪಳ್ಳಿ, ಕರ್ಚಖೇಡ, ಜಟ್ಟೂರ ಗ್ರಾಮದ ಜನರು ಎಚ್ಚರಿಕೆಯಿಂದ ಇರಬೇಕು ಎಂದು ಅವರು ಹೇಳಿಕೆಯಲ್ಲಿ ಸೂಚಿಸಿದ್ದಾರೆ. ನೀರು ಬಹಳ ರಭಸದಿಂದ ಹರಿಯುವುದರಿಂದ ಯಾರು ನದಿ ಕಡೆಗೆ ದನಕರುಗಳಿಗೆ ನೀರು ಕುಡಿಸಲು ಮತ್ತು ಮಹಿಳೆಯರು ಬಟ್ಟೆಗಳನ್ನು ತೊಳೆಯಲು ಹೋಗಬಾರದು. ಯಾರು ನದಿಗೆ ಈಜಲು ಹೋಗಬಾರದು ಎಂದು ಅವರು ಮನವಿ ಮಾಡಿದ್ದಾರೆ.

# 5000 ಕೋಟಿ ರೂ.ಗಳ ಕ್ರಿಯಾ ಯೋಜನೆಗೆ ಅಸ್ತು: ರಾಜ್ಯಪಾಲರ ಭೇಟಿ ಮಾಡಿ ಕೃತಜ್ಞತೆ ಸಲ್ಲಿಸಿದ ಡಾ. ಅಜಯಸಿಂಗ್



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕ್ರಿಯಾ ಯೋಜನೆಗೆ ಪ್ರಸಕ್ತ ಸಾಲಿನಲ್ಲಿ ಬೇಗ ಅನುಮೋದನೆ ಸಿಕ್ಕಿರೋದರಿಂದ ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರಗತಿಗೆ ಹಿಂದೆಂದಿಗಿಂತಲೂ ಹೆಚ್ಚಿನ ವೇಗ ದೊರಕಲಿದೆ ಎಂದು ಮಂಡಳಿಯ ಅಧ್ಯಕ್ಷರೂ ಹಾಗೂ ಕ್ಷೇತ್ರದ ಶಾಸಕ ಡಾ. ಅಜಯ್ ಧರ್ಮಸಿಂಗ್ ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ 2025– 2026ನೇ ಸಾಲಿನ 5 ಸಾವಿರ ಕೋಟಿ ರೂ.ಗಳ ಮೊತ್ತದ ಕ್ರಿಯಾ ಯೋಜನೆಗೆ ರಾಜ್ಯಪಾಲರಾದ ಥಾವರಚಂದ್ ಗೆಲ್ಹೋಟ್ ಅವರು ಜುಲೈ 24ರಂದು ಅನುಮೋದನೆ ನೀಡಿದ್ದಾರೆ. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಮಂಡಳಿಯ ಕ್ರಿಯಾ ಯೋಜನೆಗೆ ಸಂಪೂರ್ಣ ಒಪ್ಪಿಗೆ ಸೂಚಿಸಿ ರಾಜಭವನಕ್ಕೆ ರಾಜಭವನಕ್ಕೆ ಸದರಿ ಕ್ರಿಯಾ ಯೋಜನೆ ಕಡತ ರವಾನಿಸಿದ್ದರು. ಇದೀಗ ರಾಜ್ಯಪಾಲರು ತ್ವರಿತವಾಗಿ ಅಂಕಿತ ಹಾಕಿದ್ದಾರೆ. ಈ ಬೆಳವಣಿಗೆಯಿಂದಾಗಿ ಕಲ್ಯಾಣ ಭಾಗದಲ್ಲಿ ಮಂಡಳಿ ಇನ್ನೂ ಹೆಚ್ಚಿನ ಅಭಿವೃದ್ಧಿ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಅನುಕೂಲವಾಗಲಿದೆ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

2023– 2024ರ ಸಾಲಿನ ಕ್ರಿಯಾ ಯೋಜನೆಗೆ ರಾಜ್ಯಪಾಲರು ಡಿಸೆಂಬರ್‌ನಲ್ಲಿ ಅನುಮೋದನೆ ನೀಡಿದ್ದರು. ಈ ಸಾಲಿನಲ್ಲಿ ಮಂಡಳಿಯ ಸಭೆ ಆಗಸ್ಟ್ 29ರಂದು ನಡೆಸಲಾಗಿತ್ತು. ಆದಾಗ್ಯೂ ಮಾರ್ಚ್ 31ರೊಳಗಾಗಿ ಮಂಡಳಿಯಿಂದ 2009 ಕೋಟಿ ರೂ.ಗಳ ವೆಚ್ಚದಲ್ಲಿ ಶಿಕ್ಷಣ, ಆರೋಗ್ಯ, ಮೂಲ ಸೌಕರ್ಯ ಸೇರಿದಂತೆ ಹಲವು ರಂಗಗಳಲ್ಲಿ ಯೋಜನೆಗಳನ್ನು ಕೈಗೆತ್ತಿಕೊಂಡು ಅನುಷ್ಠಾನಗೊಳಿಸಲಾಗಿತ್ತು. 2024– 2025ನೇ ಸಾಲಿನಲ್ಲಿ ಜುಲೈ ತಿಂಗಳ 1ರಂದೇ ಮಂಡಳಿಯ ಸಭೆ ನಡೆಸಿ ಕ್ರಿಯಾ ಯೋಜನೆ ಸಿದ್ಧಪಡಿಸಿ ಸಲ್ಲಿಸಿದಾಗ ಸದರಿ ಕ್ರಿಯಾ ಯೋಜನೆಗೆ ರಾಜ್ಯಪಾಲರು ಆಗಸ್ಟ್ ತಿಂಗಳಲ್ಲಿ ಅನುಮೋದನೆ ನೀಡಿದ್ದರು ಎಂದು ಅವರು ವಿವರಿಸಿದ್ದಾರೆ.

ಈ ಬಾರಿ 2025– 2026ನೇ ಸಾಲಿನ ಮಂಡಳಿಯ ಸಭೆಯನ್ನು ಶಾಸಕರು,

ಸಂಸದರು, ಸಚಿವರು ಒಳಗೊಂಡೆತೆ ಮೇ ತಿಂಗಳ 10ರಂದೇ ನಡೆಸಿ ಸಿದ್ಧಪಡಿಸಿದ್ದ 5 ಸಾವಿರ ಕೋಟಿ ರೂ.ಗಳ ಕ್ರಿಯಾ ಯೋಜನೆಗೆ ರಾಜ್ಯಪಾಲರಾದ ಥಾವರಚಂಗ್ ಗೆಲ್ಹೋಟ್ ಅವರು ಜುಲೈ 3ನೇ ವಾರದಲ್ಲೇ ಅನುಮೋದನೆ ನೀಡಿದ್ದಾರೆ. ಇದರಿಂದಾಗಿ ಮಂಡಳಿಯಿಂದ ಇನ್ನೂ ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಕೊಳ್ಳಲು ಹೆಚ್ಚಿನ ಅನುಕೂಲವಾದಂತಾಗಿದೆ ಎಂದು ಅವರು ಸಂತೋಷ ವ್ಯಕ್ತಪಡಿಸಿದ್ದಾರೆ. ಡಾ. ನಂಜುಂಡಪ್ಪವರದಿಯನ್ವಯವೇಸಿಡಿಐ ಸೂಚ್ಯಂಕ ಗುರುತಿಸಿ ಯೋಜನೆ ರೂಪಿಸಲಾಗುತ್ತಿದೆ. ಮೈಕ್ರೋ, ಮ್ಯಾಕ್ರೋ ಯೋಜನೆಯಡಿಯಲ್ಲಿನ ಅನುದಾನ ಹಂಚಿಕೆಯ ವಿವರಗಳಿರುವ ಕ್ರಿಯಾ ಯೋಜನೆಗೆ ರಾಜ್ಯಪಾಲರ ಅಂಕಿತ ದೊರಕಿದೆ. 2025ರ ಮೇ 10ರಂದು ಜರುಗಿದ ಮಂಡಳಿಯ ಸಭೆಯಲ್ಲಿನ ಚರ್ಚೆಗಳು, ನಿರ್ಣಯಗಳಂತೆ ಹಾಗೂ ಮಂಡಳಿಯ ನಿಯಮಗಳಂತೆ, 2025–2026ರ

ಮೈಕ್ರೋ, ಮ್ಯಾಕ್ರೋ, ವಿವೇಚನೆ ಅನುದಾನ, ಆಡಳಿತಾತ್ಮಕ ವೆಚ್ಚ ಸೇರಿದಂತೆ ಎಲ್ಲಾ ಹಂತಗಳಲ್ಲಿಯೂ ಅನುದಾನ ಹಂಚಿಕೆ ಮಾಡಿ ರೂಪಿಸಲಾಗಿರುವ ಕ್ರಿಯಾ ಯೋಜನೆ

ಜನಸಂಖ್ಯೆಗೆ ಅನುಗುಣವಾಗಿಯೂ ಇದೆ ಎಂದು ಅವರು

ತಿಳಿಸಿದ್ದಾರೆ. ಮುಖ್ಯಮಂತ್ರಿಗಳು ಮಂಡಿಸಿರುವ ಆಯವ್ಯವಯದಲ್ಲಿನ ಮಿತಿಯಂತೆಯೇ 5 ಸಾವಿರ ಕೋಟಿ ರೂ.ಗಳಿಗಾಗಿ ಕ್ರಿಯಾ ಯೋಜನೆ ಸಿದ್ಧಪಡಿಸಲಾಗಿದ್ದು, ಆರ್ಥಿಕ ಇಲಾಖೆ 5 ಸಾವಿರ ಕೋಟಿ ರೂ.ಗಳಿಗೆ ಕ್ರಿಯಾ ಯೋಜನೆ ತಯ್ಯಾರಿಸಲು ಅನುಮತಿ ನೀಡಿತ್ತು. ಅದರಂತೆಯೇ ಮಂಡಳಿಯ ಕ್ರಿಯಾ ಯೋಜನೆಗೆ ಇದೀಗ ರಾಜ್ಯಪಾಲರಿಂದ ಅನುಮೋದನೆ ದೊರಕಿದೆ. ಇದು ಬರುವ ದಿನಗಳಲ್ಲಿ ಮಂಡಳಿಯ ಅನುದಾನ ಹೆಚ್ಚಿನ ಅಭಿವೃದ್ಧಿ ಕಾರ್ಯಗಳಿಗೆ ವಿನಿಯೋಗಿಸಲು ಅವಕಾಶ ಒದಗಿಸಿದೆ ಎಂದು ಅವರು ಸಂತಸ ಹೊರಹಾಕಿದ್ದಾರೆ.

ಮಂಡಳಿ ಕ್ರಿಯಾ ಯೋಜನೆಗೆ ರಾಜ್ಯಪಾಲರು ಈ ಬಾರಿ ಜುಲೈನಲ್ಲೇ ಅಂಕಿತ ಹಾಕುವ ಮೂಲಕ ಕಲ್ಯಾಣ ನಾಡಿನ ಪ್ರಗತಿಗೆ ಹೊಸ ವೇಗ ನೀಡುವ ದಿಶೆಯಲ್ಲಿ ಹೊಸ ಅವಕಾಶ ಒದಗಿಸಿದ್ದಾರೆಂದು ಡಾ. ಅಜಯ್ ಧರ್ಮಸಿಂಗ್ ಅವರು ಖುದ್ದು ರಾಜಭವನಕ್ಕೆ ತೆರಳಿ ರಾಜ್ಯಪಾಲರೊಂದಿಗೆ ಮಾತುಕತೆ ನಡೆಸಿ ಕೃತಜ್ಞತೆ ಸಲ್ಲಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.